23 December 2025 Tuesday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 59 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

**ಭಾವನಾಂತರಂಗ**

ಮಳೆಯು ಹನಿ ಹನಿಗಳು ಸೇರಿ ನದಿಗಳು ಹರಿದಂತೆ,
ಜೀವನದಲ್ಲಿ ಚಿಕ್ಕ, ಚಿಕ್ಕ ಸಂತೋಷಗಳು ಕ್ಷಣಗಳು ಸೇರಿ ಮನದಲ್ಲಿ ಸಾರ್ಥಕತೆಯ ಭಾವನೆಗಳನ್ನು ತುಂಬುತ್ತವೆ!
-ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಶ್ರಮವು ನಿನ್ನದೇ
ಸಮಯವೂ ನಿನ್ನದೇ
ಸಾಧಿಸುವ
ಛಲವೊಂದಿದ್ದರೆ ಪ್ರತಿಫಲ
ಕೂಡ ನಿನ್ನದಾಗುವುದು.
ಮೈಲಾರ ಸಾವಿತ್ರಿಬಾಯಿ

# ಡಿಕೆಶಿ ಪರ ಶ್ರೀಗಳ ಬ್ಯಾಟಿಂಗ್

## ಸಿಎಂ ಪಟ್ಟಕ್ಕೆ ಆಗ್ರಹಿಸಿ ಹೈಕಮಾಂಡ್ ಬಳಿಗೆ ಸ್ವಾಮೀಜಿಗಳ ನಿಯೋಗ

**ಕಲಬುರಗಿ:** ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವಂತೆ ಆಗ್ರಹಿಸಿ ದೆಹಲಿ ಹೈಕಮಾಂಡ್ ಬಳಿಗೆ ಹಿಂದುಳಿದ ಮಠಾಧೀಶರ ನಿಯೋಗ ತೆರಳುವುದಾಗಿ ಶ್ರೀ ಪ್ರಣವಾನಂದ ಸ್ವಾಮೀಜಿ ತಿಳಿಸಿದ್ದಾರೆ.

ರಾಜ್ಯ ಕಾಂಗ್ರೆಸ್ ನಲ್ಲಿ ಆಡಳಿತ ಹಂಚಿಕೆ ವಿವಾದ ಜೋರಾಗಿರುವ ಸಂದರ್ಭದಲ್ಲಿಯೇ ಕಲಬುರ್ಗಿಯಲ್ಲಿ ಸೋಮವಾರ ಹಿಂದುಳಿದ ವರ್ಗಗಳ 15ಕ್ಕೂ ಹೆಚ್ಚು ಮಠಾಧೀಶರು ಸಭೆ ಸೇರಿ ಚರ್ಚಿಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಬೇಕು ಎಂಬ ಒತ್ತಾಯದೊಂದಿಗೆ ಹಿಂದುಳಿದ ಸಮುದಾಯದ ಮಠಾಧೀಶರು ಡಿಕೆಶಿ ಪರ ಬಹಿರಂಗ ಬೆಂಬಲ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಹತ್ತರಿಂದ ಹದಿನೈದು ಮಂದಿ ಹಿಂದುಳಿದ ವರ್ಗದ ಮಠಾಧೀಶರು ದೆಹಲಿಗೆ ತೆರಳಿ ಕಾಂಗ್ರೆಸ್ ಹೈಕಮಾಂಡ್ ನಾಯಕರಾದ ರಾಹುಲ್ ಗಾಂಧಿ ಹಾಗೂ ಕೆ.ಸಿ. ವೇಣುಗೋಪಾಲ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸುವುದಾಗಿ ಬ್ರಹ್ಮ ಶ್ರೀ ನಾರಾಯಣ ಗುರುಶಕ್ತಿಪೀಠದ ಪ್ರಣವಾನಂದ ಸ್ವಾಮೀಜಿ ಹೇಳಿದರು.

ಹೈಕಮಾಂಡ್ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡದೇ ಹೋದರೆ ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ಹೊಡೆತ ಬೀಳಲಿದೆ. ಡಿಕೆಶಿಗೆ ಅವಕಾಶ ನೀಡದಿದ್ದರೆ ಪಕ್ಷ ಸರ್ವನಾಶದ ಹಾದಿಗೆ ಹೋಗುವ ಸಾಧ್ಯತೆ ಇದೆ ಎಂದು ಪ್ರಣವಾನಂದ ಶ್ರೀಗಳು ಎಚ್ಚರಿಕೆ ನೀಡಿದ್ದಾರೆ.



### ಸಂಕ್ರಾಂತಿಗೆ ಕ್ರಾಂತಿಯೂ ಇಲ್ಲ, ಏನೂ ಆಗಲ್ಲ: ಸಿದ್ದರಾಮಯ್ಯ

**ಮೈಸೂರು:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ರಾಹುಲ್ ಗಾಂಧಿ ತೀರ್ಮಾನಿಸಬೇಕು. ಅವರು ಕೈಗೊಳ್ಳುವ ನಿರ್ಧಾರಕ್ಕೆ ನಾವು ಬದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನಾನು ಈ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಮಾತನಾಡಿದ್ದೇನೆ. ನಾವು ಶೀಘ್ರದಲ್ಲಿಯೇ ತೀರ್ಮಾನಿಸುತ್ತೇವೆ ಎಂದು ಹೇಳಿದ್ದಾರೆ. ಸಂಕ್ರಾಂತಿಗೆ ಕ್ರಾಂತಿಯೂ ಇಲ್ಲ, ಏನೂ ಇಲ್ಲ. ಏನೇ ಇದ್ದರೂ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಪುನರುಚ್ಚರಿಸಿದರು.

ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ ಎಂಬ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಹೇಳಿಕೆ ಒಪ್ಪಬೇಕಾದ ವಿಚಾರ. ಪಕ್ಷಕ್ಕಿಂತ ಯಾರೂ ದೊಡ್ಡವರಾಗಲು ಸಾಧ್ಯವೇ ಇಲ್ಲ. ಸಮಸ್ಯೆಗಳೇನಿದ್ದರೂ ಅದನ್ನು ಹೈಕಮಾಂಡ್ ಬಗೆಹರಿಸುತ್ತದೆ ಎಂದು ಹೇಳಿದರು.

ನಾಯಕತ್ವ ಬದಲಾವಣೆ ಕುರಿತು ಮಾಧ್ಯಮದಲ್ಲೇ ಹೆಚ್ಚಾಗಿ ಚರ್ಚೆಯಾಗುತ್ತಿದೆ. ಆ ವಿಷಯದಲ್ಲಿ ಇಷ್ಟೊಂದು ಪ್ರಶ್ನಿಸುವ ಅಗತ್ಯವೇನಿದೆ? ವಿಧಾನಸಭೆಯಲ್ಲಿ ಹೇಳಿದ ಮೇಲೂ ಮತ್ತೆ ಚರ್ಚಿಸುವ ಅಗತ್ಯವಿಲ್ಲ.

ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿದ್ದ ಬಗ್ಗೆ ಪುಟ 2ಕ್ಕೆ

# ಡಿ.26ಕ್ಕೆ ಸಿಎಂ, ಡಿಸಿಎಂ ದೆಹಲಿ ಭೇಟಿ: ಚರ್ಚೆ ಜೋರು

**ಬೆಂಗಳೂರು:** ನವದೆಹಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಡಿಸೆಂಬರ್ 26 ಅಥವಾ 27ರಂದು ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ ಮತ್ತೆ ಜೋರಾಗಿದೆ.

ಡಿಸೆಂಬರ್ 27ರಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ ನಿಗದಿಯಾಗಿದೆ. ಆದರೆ, ನಾಯಕತ್ವ ವಿಚಾರ ಕಾರ್ಯ ಸೂಚಿಯಲ್ಲಿ ಇಲ್ಲ. ಸಭೆಗೂ ಮುನ್ನ ಅಥವಾ ಸಭೆಯ ನಂತರ ಹೈಕಮಾಂಡ್ ಜೊತೆಗೆ ನಾಯಕತ್ವ ವಿಚಾರ ಕುರಿತು ಡಿಕೆ.ಶಿವಕುಮಾರ್ ಅವರು ಚರ್ಚಿಸುವ ಸಾಧ್ಯತೆಗಳಿವೆ ಎನ್ನಲಾಗಿದೆ.

ಆದರೆ, ಸಭೆಗೆ ಹಾಜರಾಗಲು ಸಿಎಂ ಅಥವಾ ಡಿಸಿಎಂಗೆ ಯಾವುದೇ ಅಧಿಕೃತ ಸೂಚನೆಗಳು ಬಂದಿಲ್ಲ. ದೆಹಲಿಗೆ ಬರುವಂತೆ ನಾಯಕರೂ ಸೂಚನೆಯನ್ನೂ ನೀಡಿಲ್ಲ ಎಂದು ಮೂಲಗಳು ತಿಳಿಸಿವೆ.

# ಜ.15ರೊಳಗೆ ಡಿಕೆಶಿ ಸಿಎಂ: ಬಬಲೇಶ್ವರ ಜ್ಯೋತಿಷಿ ಭವಿಷ್ಯ

**ಬಾಗಲಕೋಟೆ:** ಜ್ಯೋತಿಷಿಯೊಬ್ಬರು ಡಿ.ಕೆ. ಶಿವಕುಮಾರ್ ಶೀಘ್ರವೇ ಮುಖ್ಯಮಂತ್ರಿ ಆಗಲಿದ್ದಾರೆ ಎಂದು ಭವಿಷ್ಯ ನುಡಿದಿದ್ದಾರೆ.

ಬಬಲೇಶ್ವರದ ಖ್ಯಾತ ಜ್ಯೋತಿಷಿ ಉಲ್ಲಾಸ್ ಜೋಶಿ ಅವರು. ಜನವರಿ 15ರೊಳಗೆ ಡಿ.ಕೆ.ಶಿವಕುಮಾರ್ ಮುಖ್ಯಮಮತ್ರಿ ಆಗುತ್ತಾರೆ. ಇದರ ಜೊತೆಗೆ ಸಚಿವ ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷರಾಗುತ್ತಾರೆ ಎಂದು ಭವಿಷ್ಯ ನುಡಿದಿದ್ದಾರೆ.

ರಾಘವೇಂದ್ರ ಸ್ವಾಮಿಗಳೇ ನನ್ನ ನಾಲಿಗೆಯಿಂದ ನುಡಿಸುತ್ತಾರೆ. ನಾನು ಮೊದಲಿಗೆ ಜಪಮಣಿ ಪಠಿಸುತ್ತಾ ರಾಘವೇಂದ್ರಸ್ವಾಮಿಗೆ ಪ್ರಶ್ನೆ ಹಾಕುತ್ತೇನೆ. ಅದಕ್ಕೆ ರಾಘವೇಂದ್ರ ಸ್ವಾಮಿಗಳು ಉತ್ತರಿಸೋದನ್ನೇ ಭವಿಷ್ಯ ಹೇಳುತ್ತೇನೆ. ಈವರೆಗೂ ಅನೇಕ ಜನರಿಗೆ ಭವಿಷ್ಯ ಹೇಳಿದ್ದೇನೆ. ಯಾರೊಬ್ಬರೂ ಸುಳ್ಳಾಗಿದೆ ಅಂತ ಬಂದಿಲ್ಲ ಎಂದ ಹೇಳಿದ್ದಾರೆ.



# ಅಕ್ರಮ ವಿದ್ಯುತ್ ಸಂಪರ್ಕ: 31 ಪ್ರಕರಣ ದಾಖಲು, 2.17 ಲಕ್ಷ ರೂ. ದಂಡ

**ಮೈಸೂರು:** ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿರುವ ಸಂಬಂಧ ಯಶಸ್ವಿ ಕಾರ್ಯಾಚರಣೆ ನಡೆಸಿದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಚಾವಿಸನಿನಿ) ಜಾಗೃತ ದಳದ ಅಧಿಕಾರಿಗಳು 31 ಪ್ರಕರಣಗಳನ್ನು ದಾಖಲಿಸಿ, 2.17 ಲಕ್ಷ ರೂ.ಗಳ ದಂಡ ವಿಧಿಸಿದ್ದಾರೆ.

ಈ ಸಂಬಂಧ ಸಾಮೂಹಿಕ ಕಾರ್ಯಾಚರಣೆ ನಡೆಸಿದ ಸೆಸ್ಕ್ ಜಾಗೃತದಳ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿ ಅನಧಿಕೃತವಾಗಿ ನೇರ ವಿದ್ಯುತ್ ಸಂಪರ್ಕವನ್ನು ಪಡೆಯುವ ಮೂಲಕ ನಿಗಮಕ್ಕೆ ನಷ್ಟ ಉಂಟು ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಂಡಿದ್ದಾರೆ. ಕಾರ್ಯಾಚರಣೆಯಲ್ಲಿ ಸೆಸ್ಕ್ ವ್ಯಾಪ್ತಿಯ ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳ ಜಾಗೃತದಳದ ವ್ಯಾಪ್ತಿಯ ಅಧಿಕಾರಿ ಮತ್ತು ಸಿಬ್ಬಂದಿ 8 ತಂಡಗಳಾಗಿ, ಮೈಸೂರು ಜಿಲ್ಲೆ ವ್ಯಾಪ್ತಿಯಲ್ಲಿರುವ ಏಕಲವ್ಯನಗರ, ಬಂಬೂಬಜಾರ್, ಇಟ್ಟಿಗೆಗೂಡು ಹಾಗೂ ಇತರೆ ವ್ಯಾಪ್ತಿಯಲ್ಲಿರುವ ವಿವಿಧ ಸ್ಥಾವರಗಳ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದರು.

ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಮುನಿಗೋಪಾಲ್ ರಾಜು, ತಾಂತ್ರಿಕ ನಿರ್ದೇಶಕ ಡಿ.ಜೆ.ದಿವಾಕರ್, ಮುಖ್ಯ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ) ಶರಣಮ್ಮ ಎಸ್. ಜಂಗಿನ್, ಸೆಸ್ಕ್ ಜಾಗೃತ ದಳದ ಎಸ್ಪಿ ಸವಿತಾ ಹೂಗಾರ್ ಮಾರ್ಗದರ್ಶನದಲ್ಲಿ ಸದರಿ ಕಾರ್ಯಾಚರಣೆ ನಡೆಯಿತು. ಕಾರ್ಯಾಚರಣೆಯಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಬಿ.ಎಸ್.ಚಂದ್ರಶೇಖರ್, ಪೊಲೀಸ್ ಉಪಾಧೀಕ್ಷಕಿ ಎಂ.ಜೆ.ಪೃಥ್ವಿ, ಸೆಸ್ಕ್ ಜಾಗೃತ ದಳದ ಪೊಲೀಸ್ ನಿರೀಕ್ಷಕ ಎಂ.ಜಯರತ್ನ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಸೈಯದಾ ಕೌಸರ್ ಬೇಗಂ ಇತರರು ಪಾಲ್ಗೊಂಡಿದ್ದರು.

# ಹೊಸ ಬಡಾವಣೆ ನಿರ್ಮಾಣಕ್ಕೆ ಎಂಡಿಎ

**ಮೈಸೂರು:** ಮೈಸೂರು ಅಭಿವೃದ್ಧಿ ಪ್ರಾಧಿಕಾರ ಹೊಸದಾಗಿ ಬಡಾವಣೆ ನಿರ್ಮಿಸಲು ತೀರ್ಮಾನಿಸಿದೆ. ಇಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಈ ಮಹತ್ವದ ನಿರ್ಧಾರಕ್ಕೆ ಒಪ್ಪಿಗೆ ದೊರೆತಿದೆ.

**ಎಂಡಿಎ ನಿರ್ಧಾರ**

ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಎಂಡಿಎ ಆಯುಕ್ತ ಕೆ.ಆರ್.ರಕ್ಷಿತ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೆಲ ಮಹತ್ವದ ತೀರ್ಮಾನಗಳನ್ನು ತೆಗೆದುಕೊಳ್ಳಲಾಯಿತು.

ಮೈಸೂರು ಅಭಿವೃದ್ಧಿ ಪ್ರಾಧಿಕಾರ ರಚನೆಯಾದ ಬಳಿಕ ಇದೇ ಮೊದಲ ಬಾರಿಗೆ ಬಡಾವಣೆ ನಿರ್ಮಾಣಕ್ಕೆ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಇಲವಾಲ ಹೋಬಳಿಯ ಬೊಮ್ಮೇನಹಳ್ಳಿ, ನಾಗವಾಲ, ಕಮ್ಮರಹಳ್ಳಿ ಹಾಗೂ ದೊಡ್ಡಮಾರಗೌಡನ ಹಳ್ಳಿಯ ವಿವಿಧ ಸರ್ವೆ ನಂಬರ್ ಗಳ ಜಮೀನು ಸ್ವಾಧೀನಕ್ಕೆ ಎಂಡಿಎ ಮುಂದಾಗಿದೆ.

ಈ ಸಂಬಂದ ಈ ಪ್ರದೇಶದ ರೈತರು ಹಾಗೂ ಜಮೀನಿನ ಮಾಲೀಕರ ಮನವೊಲಿಸಿ ಭೂ ಸ್ವಾಧೀನ ಪಡಿಸಿಕೊಳ್ಳಲು ಎಂಡಿಎ ಉದ್ದೇಶಿಸಿದೆ. ಜತೆಗೆ ಶೇ. 50 ; 50 ರ ಅನುಪಾತದಲ್ಲಿ ನಿವೇಶನ ಹಂಚಿಕೆ ಮಾಡುವ ಯೋಜನಗೆ ಪ್ರಾಧಿಕಾರದ ಸಭೆ ಅಸ್ತು. ಈ ಯೋಜನೆಯಡಿ ಅಂದಾಜು 20,000 ಕ್ಕೂ ಹೆಚ್ಚು ಜನರಿಗೆ ನಿವೇಶನ ಭಾಗ್ಯ ಲಭಿಸುವ ನಿರೀಕ್ಷೆಯಿದೆ. ಈಗಾಗಲೇ ನಿವೇಶನಗಳನ್ನು ಬಯಸಿ ಒಂದು ಲಕ್ಷಕ್ಕೂ ಹೆಚ್ಚು ಮಂದಿ ನಿವೇಶಾನಕಾಂಕ್ಷಿಗಳು ಅರ್ಜಿ ಸಲ್ಲಿಸಿದ್ದು. ಈ ಪೈಕಿ 20,000 ಮಂದಿಗೆ ನಿವೇಶನ ಲಭಿಸುವ ಅಂದಾಜಿದೆ.




# ನಾಯಕತ್ವ ಗೊಂದಲಕ್ಕೆ ಸ್ಥಳೀಯ ಪರಿಹಾರ!

## ಕೈ ಮುಖ್ಯಸ್ಥರ ಸಂದೇಶ ಪಾಲನೆ: ಖರ್ಗೆ ಭೇಟಿ ನಂತರ ಪರಂ ಹೇಳಿಕೆ

**ಬೆಂಗಳೂರು:** ರಾಜ್ಯದಲ್ಲಿ ನಾಯಕತ್ವ ವಿಚಾರದಲ್ಲಿ ಪಕ್ಷದೊಳಗೆ ಯಾವುದೇ ಭಿನ್ನಾಭಿಪ್ರಾಯಗಳು ಅಥವಾ ಗೊಂದಲಗಳಿದ್ದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಸೂಚನೆಯಂತೆ ಸ್ಥಳೀಯವಾಗಿಯೇ ಪರಿಹರಿಸಿಕೊಳ್ಳಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಅಭಿಪ್ರಾಯಪಟ್ಟರು.

ನಗರದಲ್ಲಿ ಸೋಮವಾರ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಈ ಭೇಟಿಯು ವೈಯಕ್ತಿಕವಾಗಿದೆ. ರಾಜಕೀಯಕ್ಕೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು.

ನಾನು ಕಾಂಗ್ರೆಸ್ ಅಧ್ಯಕ್ಷರನ್ನು ಭೇಟಿಯಾಗಿದ್ದೇನೆ. ನಮ್ಮದು ಕುಟುಂಬ ಸಂಬಂಧ. ಹಾಗಾಗಿ, ನಾನು ಕುಟುಂಬದ ವಿಷಯಗಳ ಬಗ್ಗೆ ಚರ್ಚಿಸಿದೆ. ನಾನು ಅವರೊಂದಿಗೆ ರಾಜಕೀಯದ ಬಗ್ಗೆ ಒಂದು ಮಾತನ್ನೂ ಮಾತನಾಡಲಿಲ್ಲ ಎಂದು ಪರಮೇಶ್ವರ್ ತಿಳಿಸಿದರು.

ರಾಜ್ಯದ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಸ್ಥಳೀಯವಾಗಿಯೇ ಪರಿಹರಿಸಿಕೊಳ್ಳುವಂತೆ ಖರ್ಗೆ ರಾಜ್ಯದ ನಾಯಕರಿಗೆ ಸೂಚಿಸಿದ್ದಾರೆ. ಅದು ಕಾಂಗ್ರೆಸ್ ಮುಖ್ಯಸ್ಥರಿಂದ ಬಂದ ಸಂದೇಶ. ಇದರ ಬಗ್ಗೆ ನಾನು ಏನು ಹೇಳಲಿ? ನಮಗೆಲ್ಲರಿಗೂ ಅದು ತಿಳಿದಿರಬೇಕು, ನಾವೇ ನಮ್ಮ ಸಮಸ್ಯೆಗಳನ್ನು ಸ್ವತಃ ಪರಿಹರಿಸಿಕೊಳ್ಳಬೇಕು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ರಾಜ್ಯ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಮತ್ತು ಸಿದ್ದರಾಮಯ್ಯ ಡಿಸೆಂಬರ್ 27 ಪುಟ 2ಕ್ಕೆ



# ದ್ವೇಷ ಭಾಷಣ: ಬಿಜೆಪಿಗೆ ಭಯವೇಕೆ?

## ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿದಂತೆ: ಸಿದ್ದರಾಮಯ್ಯ ಟೀಕೆ


**ಮೈಸೂರು:** ದ್ವೇಷ ಭಾಷಣ ನಿಷೇಧ ಕಾಯ್ದೆ ಎಲ್ಲಾ ಪಕ್ಷದವರಿಗೂ ಅನ್ವಯವಾಗುತ್ತದೆ. ಬಿಜೆಪಿ ನಾಯಕರು ಮಾತ್ರ ಏಕೆ ವಿರೋಧಿಸುತ್ತಾರೆ? ದ್ವೇಷ ಭಾಷಣದಿಂದ ಸಮಾಜದಲ್ಲಿ ಶಾಂತಿ ನೆಲೆಸುತ್ತದೆಯೇ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ನಗರದಲ್ಲಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಪ್ರಚೋದನಕಾರಿ ಭಾಷಣ ಮಾಡದಿದ್ದರೆ ಸುಮ್ಮನೆ ಪ್ರಕರಣ ದಾಖಲಿಸುವುದಿಲ್ಲ. ಹೀಗಾಗಿ ಪ್ರಚೋದನಕಾರಿ ಭಾಷಣ ಮಾಡುವವರು ಮಾತ್ರ ದ್ವೇಷ ಭಾಷಣ ತಡೆ ಮಸೂದೆಯನ್ನು ವಿರೋಧಿಸುತ್ತಾರೆ. ಕುಂಬಳಕಾಯಿ ಕಳ್ಳ ಎಂದರೆ ಬಿಜೆಪಿಯವರೇಕೆ ಹೆಗಲು ಮುಟ್ಟಿ ನೋಡಿಕೊಳ್ಳುತ್ತಿದ್ದಾರೆ ಎಂದು ಕಿಡಿಕಾರಿದರು.

ದ್ವೇಷ ಭಾಷಣ ತಡೆ ಮಸೂದೆ ಕೆಲವರನ್ನು ಗುರಿಯಾಗಿಸಿಕೊಂಡು ರೂಪಿಸಲಾಗಿದೆ ಎಂದು ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಸಮಾಜದಲ್ಲಿ ಶಾಂತಿ ಹಾಗೂ ಸಹೋದರತ್ವ ಕಾಪಾಡಲು ಕಾಯ್ದೆ ಜಾರಿ ಮಾಡಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ದ್ವೇಷ ಭಾಷಣ ಹೆಚ್ಚಾಗುತ್ತಿದೆ. ಅದನ್ನು ನಿಯಂತ್ರಿಸಲೆಂದೇ ನಾವು ಕ್ರಮ ಕೈಗೊಂಡಿದ್ದೇವೆ. ಬಿಜೆಪಿಯವರು ಮಸೂದೆಯನ್ನು ತೀವ್ರವಾಗಿ ವಿರೋಧಿಸುತ್ತಿರುವುದು, ಅವರು ದ್ವೇಷ ಭಾಷಣ ಮಾಡುತ್ತಾರೆ ಎಂಬ ಕಾರಣಕ್ಕಾಗಿಯೇ ಎಂದು ಪ್ರತಿಪಾದಿಸಿದರು.

ಫೆಬ್ರುವರಿ, ಮಾರ್ಚ್ ತಿಂಗಳ ಗೃಹಲಕ್ಷ್ಮಿ ಹಣ ಬಿಡುಗಡೆಯಾಗಿಲ್ಲ. ಪರಿಶೀಲಿಸಿ ಬಿಡುಗಡೆ ಮಾಡಲಾಗುವುದು. ಈವರೆಗೆ 23 ತಿಂಗಳ ಗೃಹಲಕ್ಷ್ಮಿ ಹಣವನ್ನು ಫಲಾನುಭವಿಗಳಿಗೆ ಕೊಟ್ಟಿದ್ದೇವೆ. ಹಣವಿಲ್ಲದೆ ಇದ್ದಿದ್ದರೆ ಇಷ್ಟೆಲ್ಲ ಕೊಡುವುದಕ್ಕೆ ಸಾಧ್ಯವಾ ಗುತ್ತಿತ್ತೇ? ಎಂದು ಮುಖ್ಯಮಂತ್ರಿ ಕೇಳಿದರು.

ಗೃಹಲಕ್ಷ್ಮಿ ಹಣವನ್ನು ಲಪಟಾಯಿಸಲಾಗಿದೆ ಎಂಬ ಬಿಜೆಪಿ ಯವರ ಆರೋಪಕ್ಕೆ ಪುಟ 2ಕ್ಕೆ



# ಕರ್ನಾಟಕಕ್ಕೆ ಅನುದಾನ ಬಾಕಿ ಇಲ್ಲ: ಕೇಂದ್ರ ಸ್ಪಷ್ಟನೆ

**ನವದೆಹಲಿ:** ಕರ್ನಾಟಕಕ್ಕೆ 15ನೇ ಹಣಕಾಸು ಆಯೋಗ ಶಿಫಾರಸು ಮಾಡಿರುವ ಯಾವುದೇ ವಿಶೇಷ ಅನುದಾನವನ್ನು ಬಾಕಿ ಇರಿಸಿಕೊಂಡಿಲ್ಲ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ತಿಳಿಸಿದ್ದಾರೆ.

ರಾಜ್ಯಕ್ಕೆ ಆಗಿರುವ ವರಮಾನ ನಷ್ಟಕ್ಕೆ 5,495 ಕೋಟಿ ವಿಶೇಷ ಅನುದಾನ ನೀಡಬೇಕು ಎಂದು 15ನೇ ಹಣಕಾಸು ಆಯೋಗ ಮೊದಲನೇ ವರದಿಯಲ್ಲಿ ಶಿಫಾರಸು ಮಾಡಿತ್ತು. ಬೆಂಗಳೂರು ಹಾಗೂ ಇತರ ಕಡೆಗಳಲ್ಲಿ ಕೆರೆಗಳ ಅಭಿವೃದ್ಧಿಗೆ 3,000 ಕೋಟಿ ಹಾಗೂ ಬೆಂಗಳೂರಿನ ಪೆರಿಫೆರಲ್ ವರ್ತುಲ ರಸ್ತೆ (ಪಿಆರ್ಆರ್) ಯೋಜನೆಗೆ 3 ಸಾವಿರ ಕೋಟಿ ವಿಶೇಷ ಅನುದಾನ ನೀಡಬೇಕು ಎಂದು ಆಯೋಗ ಎರಡನೇ ವರದಿಯಲ್ಲಿ ತಿಳಿಸಿತ್ತು. ರಾಜ್ಯಕ್ಕೆ ಒಟ್ಟು 11,495 ಕೋಟಿ ರೂ. ವಿಶೇಷ ಅನುದಾನ ಬಾಕಿ ಇದೆ ಎಂದು ರಾಜ್ಯ ಸರ್ಕಾರ ಕೇಂದ್ರ ಹಣಕಾಸು ಸಚಿವಾಲಯಕ್ಕೆ ಪತ್ರ ಬರೆದಿತ್ತು.

# ಸರಗೂರು: ತಹಶೀಲ್ದಾರ್ ಕಚೇರಿಗೆ ಬಾಂಬ್ ಬೆದರಿಕೆ

**ಮೈಸೂರು:** ಸರಗೂರು ತಾಲ್ಲೂಕು ಕಚೇರಿ ಹಾಗೂ ಹಾಸನದ ಆಲೂರು ತಾಲ್ಲೂಕು ಕಚೇರಿಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶ ಬಂದಿದೆ. ಬೆದರಿಕೆ ಸಂದೇಶದ ಬೆನ್ನಲ್ಲೇ ಪೊಲೀಸರು ಅಲರ್ಟ್ ಆಗಿದ್ದು, ತೀವ್ರ ಶೋಧ ಕೈಗೊಂಡಿದ್ದಾರೆ. ಕೆಲಕಾಲ ಜನರಲ್ಲಿ ಭಾರೀ ಆತಂಕ ಸೃಷ್ಟಿಯಾಗಿತ್ತು.



ಸರಗೂರು ತಾಲ್ಲೂಕು ಕಚೇರಿ ಯಲ್ಲಿ ಆರ್ ಡಿ ಎಕ್ಸ್ ಸ್ಫೋಟಕ ಇಡಲಾಗಿದೆ. ಮಧ್ಯಾಹ್ನದ ವೇಳೆಗೆ ಅದ ಪುಟ 2ಕ್ಕೆ

### ಆಲೂರು ಕಚೇರಿಗೂ ಬೆದರಿಕೆ

ಹಾಸನ ಜಿಲ್ಲೆಯ ಆಲೂರು ತಾಲೂಕು ಕಚೇರಿಗೂ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶ ಬಂದಿತ್ತು. ಕಚೇರಿ ಸಿಬ್ಬಂದಿ ತಹಶೀಲ್ದಾರ್ ಮಲ್ಲಿಕಾರ್ಜುನ ಅವರಿಗೆ ವಿಷಯ ತಿಳಿಸಿದರು. ತಹಶೀಲ್ದಾರ್ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ದೌಢಾಯಿಸಿದ ಪೊಲೀಸರು ಕಚೇರಿ ಸಿಬ್ಬಂದಿಯನ್ನೆಲ್ಲ ಹೊರಕ್ಕೆ ಕಳುಸಿ ತಪಾಸಣೆ ನಡೆಸಿದರು. ಬಾಂಬ್ ನಿಷ್ಕ್ರಿಯ ದಳ, ಶ್ವಾನದಳದೊಂದಿಗೆ ಪೊಲೀಸ್ ಅಧಿಕಾರಿಗಳು ಆಗಮಿಸಿ ತೀವ್ರ ತಪಾಸಣೆ ನಡೆಸಿದರು. ಇದು ಸಹ ಹುಸಿ ಬಾಂಬ್ ಪುಟ 2ಕ್ಕೆ

# ಕುಕ್ಕೆ ಕ್ಷೇತ್ರದಲ್ಲಿ 'ಧರ್ಮ ದಂಗಲ್'

## ಧರ್ಮಸಮ್ಮೇಳನಕ್ಕೆ ಅನ್ಯಧರ್ಮೀಯರಿಗೆ ಆಹ್ವಾನಕ್ಕೆ ವಿರೋಧ

ಮಂಗಳೂರು: ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರದಲ್ಲಿ ನಡೆಯಲಿರುವ ಕಿರುಷಷ್ಠಿ ಮಹೋತ್ಸವಕ್ಕೆ ಅನ್ಯಧರ್ಮೀಯರಿಗೆ ಆಹ್ವಾನ ನೀಡಿರುವುದಕ್ಕೆ ಭಾರೀ ವಿರೋಧ ವ್ಯಕ್ತವಾಗಿದೆ. ಡಿ.26ರವರೆಗೆ ನಡೆಯಲಿರುವ ಕಿರುಷಷ್ಠಿ ಮಹೋತ್ಸವದ ಧರ್ಮ ಸಮ್ಮೇಳನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಅನ್ಯಧರ್ಮೀಯರನ್ನೂ ಆಹ್ವಾನಿಸಲಾಗಿದೆ.





ಹಿಂದೂ ಧಾರ್ಮಿಕ ಕಾರ್ಯಕ್ರಮಕ್ಕೆ ಅನ್ಯಧರ್ಮೀಯರನ್ನ ಆಹ್ವಾನಿಸಿರುವುದು ಸರಿಯಲ್ಲ. ತಕ್ಷಣ ಅದನ್ನ ತಡೆಯಬೇಕೆಂದು ಕ್ಷೇತ್ರ ಸಂರಕ್ಷಾ ವೇದಿಕೆಯಿಂದ ಕ್ಷೇತ್ರದ ಆಡಳಿತಾಧಿಕಾರಿಗೆ ಮನವಿ ಮಾಡಿದೆ. ಆಹ್ವಾನ ವಾಪಸ್ ಪಡೆಯದೇ ಇದ್ದರೆ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಲಾಗಿದೆ. ಕುಕ್ಕೆ ಕ್ಷೇತ್ರ ಮುಜರಾಯಿ ಇಲಾಖೆಯ ಅಧೀನದಲ್ಲಿರುವುದರಿಂದ ಪುಟ 2ಕ್ಕೆ

# ಜಗದ್ಗುರು ಭಾರತಿ ತೀರ್ಥರಿಗೆ ಮಂಡ್ಯದಲ್ಲಿ ಭವ್ಯ ಸ್ವಾಗತ



ಮಂಡ್ಯ: ಹೊಯ್ಸಳ ಕರ್ನಾಟಕ ಸೇವಾ ಟ್ರಸ್ಟ್ ಹಾಗೂ ಶ್ರೀ ಶಂಕರ ಸೇವಾ ಪ್ರತಿಷ್ಠಾನ,ಕ ಸಂಯುಕ್ತ ಆಶ್ರಯದಲ್ಲಿ ಶೃಂಗೇರಿ ಜಗದ್ಗುರು ಶ್ರೀ ಭಾರತಿ ತೀರ್ಥ ಮಹಾಸನ್ನಿಧಾನಂರನ್ನು ಮಹಾವೀರ ವೃತ್ತದಿಂದ ವಿದ್ಯಾನಗರ ಬಡಾವಣೆಯ ಶ್ರೀ ವಿದ್ಯಾಗಣಪತಿ ದೇವಾಲಯದವರೆಗೆ ಭವ್ಯ ಮೆರವಣಿಯ ಮೂಲಕ ಗೌರವಪೂರ್ವಕವಾಗಿ ಬರಮಾಡಿಕೊಳ್ಳಲಾಯಿತು.ಮೆರವಣಿಯ ನಂತರ ಶ್ರೀ ವಿದ್ಯಾಗಣಪತಿ ದೇವಾಲಯದ ಆವರಣದಲ್ಲಿ ಗುರುವಂದನಾ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿಸಲಾಯಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.



# ಹೊಸ ವರ್ಷಕ್ಕೆ ಸಾರಿಗೆ ಮುಷ್ಕರ

## * ಸಾರ್ವಜನಿಕರಿಗೆ ಶಾಕ್ ನೀಡಲು ಮುಂದಾದ ಕೆಎಸ್ಆರ್ಟಿಸಿ ನೌಕರರು

**ಬೆಂಗಳೂರು:** ಹೊಸ ವರ್ಷಕ್ಕೆ ಕೆಎಸ್ಆರ್ಟಿಸಿ ನೌಕರರು ಮುಷ್ಕರ ನಡೆಸುವ ಮೂಲಕ ಜನರಿಗೆ ಶಾಕ್ ನೀಡಲು ಮುಂದಾಗಿದ್ದಾರೆ.

ನೌಕರರ ಸಂಘಟನೆಗಳಿಂದ ಮುಷ್ಕರ ನಡೆಸುತ್ತಿರುವ ಬಗ್ಗೆ ಸಿಬ್ಬಂದಿಗೆ ಕರಪತ್ರ ವಿತರಣೆ ಮಾಡಲಾಗಿದೆ. ಬೇಡಿಕೆ ಈಡೇರದೇ ಇದ್ದರೆ ಮುಷ್ಕರ ಅನಿವಾರ್ಯ ಎಂದು ತಿಳಿಸಲಾಗಿದೆ. ಬೆಳಗಾವಿ ಅಧಿವೇಶನದ ಬಳಿಕ ಸ್ಪಂದಿಸುವ ಬಗ್ಗೆ ಸರ್ಕಾರ ಭರವಸೆ ಕೊಟ್ಟಿದೆ. ಸರ್ಕಾರ ಬೇಡಿಕೆ ಈಡೇರಿಸದೇ ಇದ್ದರೆ ಮುಷ್ಕರಕ್ಕೆ ಸಿದ್ಧರಾಗಿ ಎಂದು ಕರಪತ್ರದಲ್ಲಿ ಉಲ್ಲೇಖಿಸಲಾಗಿದೆ. ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಪುಟ 2ಕ್ಕೆ



### ಕೋವಿಡ್ ಹಿನ್ನೆಲೆ ಪರಿಷ್ಕರಣೆ ಇಲ್ಲ

ಕೋವಿಡ್ ಲಾಕ್‌ಡೌನ್ ಕಾರಣದಿಂದ 2020ರಲ್ಲಿ ಕೆಲವು ತಿಂಗಳು ಬಸ್ಸುಗಳ ಸಂಚಾರವನ್ನು ಬಂದ್ ಮಾಡಲಾಗಿತ್ತು. ನಂತರ ಸೇವೆ ಆರಂಭಗೊಂಡಿದ್ದರೂ ಜನ ಕಡಿಮೆ ಪ್ರಮಾಣದಲ್ಲಿ ಸಂಚರಿಸುತ್ತಿದ್ದರು. ಕೋವಿಡ್ ಸಮಯದಲ್ಲಿ ಪೂರ್ಣ/ ಅಪೂರ್ಣ ಪ್ರಮಾಣದಲ್ಲಿ ಬಸ್ಸುಗಳ ಕಾರ್ಯಾಚರಣೆ ಸ್ಥಗಿತಗೊಂಡಿದ್ದರಿಂದ ಸಾರಿಗೆ ಇಲಾಖೆ ಮುಳುಗುವ ಹಂತದಲ್ಲಿತ್ತು. ಈ ಕಠಿಣ ಪರಿಸ್ಥಿತಿಯಲ್ಲಿ ನಾಲ್ಕು ಸಾರಿಗೆ ಸಂಸ್ಥೆಗಳ ಸಿಬ್ಬಂದಿ ವೇತನ ಹಾಗೂ ಇತರೇ ಭತ್ಯೆಗಳನ್ನು ಸರ್ಕಾರ ಪಾವತಿ ಮಾಡಿತ್ತು. ಆದರೆ ಸಂಬಳವನ್ನು ಪರಿಷ್ಕರಣೆ ಮಾಡುವ ನಿರ್ಧಾರ ಕೈಗೊಂಡಿರಲಿಲ್ಲ. ಕೋವಿಡ್ ನಂತರ ಬಸ್ಸುಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯಾಚರಣೆ ಇಳಿದ ಬಳಿಕ 2023ರಲ್ಲಿ ಬಿಜೆಪಿ ಸರ್ಕಾರ ವೇತನ ಪರಿಷ್ಕರಣೆ ಮಾಡಿತ್ತು.

### ನೌಕರರ ಆಗ್ರಹ ಏನು?

ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಇರಲಿಲ್ಲ ಮತ್ತು ಕಡಿಮೆ ಸಂಖ್ಯೆಯಲ್ಲಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದರು. ಆದರೆ ಈಗ ಬಸ್ಸುಗಳಲ್ಲಿ ಭಾರೀ ಸಂಖ್ಯೆಯಲ್ಲಿ ಮಹಿಳೆಯರು ಪ್ರಯಾಣಿಸುತ್ತಿದ್ದಾರೆ. ಮಹಿಳೆಯರಿಗೆ ಉಚಿತ ಟಿಕೆಟ್ ನೀಡಿದ್ದರೂ ನಿರ್ವಾಹಕರು ಟಿಕೆಟ್ ಹರಿಯುತ್ತಾರೆ. ಉಚಿತ ಟಿಕೆಟ್ ಹಣವನ್ನು ಸರ್ಕಾರ ಸಾರಿಗೆ ಸಂಸ್ಥೆಗಳಿಗೆ ಪಾವತಿ ಮಾಡಬೇಕು.

ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಮಹಿಳಾ ಫಲಾನುಭವಿಗಳ ಸಂಖ್ಯೆ 500 ಕೋಟಿ ದಾಟಿ ಮೈಲಿಗಲ್ಲು ಸ್ಥಾಪಿಸಿದೆ. ಪ್ರಯಾಣಿಕರ ಸಂಖ್ಯೆ ಹೆಚ್ಚಳದಿಂದ ಆದಾಯವೂ ಜಾಸ್ತಿಯಾಗಿದೆ. ಆದಾಯ ಜಾಸ್ತಿಯಾಗಿರುವ ಕಾರಣ ಸರ್ಕಾರ ಸಂಬಳ ಏರಿಕೆ ಮಾಡಲೇಬೇಕು ಎಂದು ನೌಕರರು ಆಗ್ರಹಿಸುತ್ತಿದ್ದಾರೆ.

# ಭಾಷೆಯ ಉಳಿವಿಗೆ ಒಂದಾಗಿ ಸಾಗೋಣ: ಜಿಟಿಡಿ



ಮೈಸೂರು: ರಾಜ್ಯದಲ್ಲಿರುವ ಎಲ್ಲಾ ಕನ್ನಡಪರ ಸಂಘಟನೆಗಳು ಒಂದಾಗಿ ಒಂದು ಕಡೆ ಸೇರಿ ನಾವೆಲ್ಲರೂ ಒಂದೇ ತಾಯಿಯ ಮಕ್ಕಳು ಎನ್ನು ವಂತೆ ದೇಶಕ್ಕೆ ಸಂದೇಶ ಕೊಡಬೇಕು. ಭಾಷೆಯ ಉಳಿವಿಗೆ ಕನ್ನಡಿಗರು ಒಂದಾಗ ಬೇಕು ಎಂದು ಶಾಸಕ ಜಿ.ಟಿ.ದೇವೇಗೌಡ ಕರೆ ನೀಡಿದರು.

ಕನ್ನಡ ಸೇನೆ ಕಲಾಮಂದಿರ ಕಿರುರಂಗ ಮಂದಿರದಲ್ಲಿ ಆಯೋಜಿ ಸಿದ್ದ ಕನ್ನಡ ಜಾಗೃತಿ ಸಮಾವೇಶ, ಕನ್ನಡ ರಾಜ್ಯೋತ್ಸವ, ಕನ್ನಡ ಮಾಣಿಕ್ಯ ವಿಶೇಷ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ದರು. ಕನ್ನಡ ನಾಡು,ನುಡಿ, ಜಲ,ನೆಲ,ಭಾಷೆಯ ಬಗ್ಗೆ ಅಪಾರವಾದ ಅಭಿಮಾನ ಇಟ್ಟುಕೊಂಡು ಭಾಷೆಯನ್ನು ಉಳಿಸಲು ಪ್ರಯತ್ನ ಮಾಡಲಾ ಗುತ್ತಿದೆ. ಭಾಷೆ ಉಳಿದರೆ ನಾಡು ಉಳಿಯ ಲಿದೆ. ಕನ್ನಡಕ್ಕೆ ಎರಡೂವರೆ ಸಾವಿರ ವರ್ಷಗಳಿಗೂ ಹೆಚ್ಚು ಇತಿಹಾಸವಿದೆ. ಕನ್ನಡ ಭಾಷೆಗೆ ತನ್ನದೇ ಆದ ಮಹತ್ವ ಇರುವುದನ್ನು ಅರಿತುಕೊಳ್ಳಬೇಕು. ಕನ್ನಡಿಗರು ಸಹೃದಯಿರು. ಬೇರೆಯವರನ್ನು ಪ್ರೀತಿಸುವ,ಅಪ್ಪಿಕೊಳ್ಳುವ ಕೆಲಸವನ್ನು ಮೊದಲಿನಿಂದಲೂ ಮಾಡಿ ಕೊಂಡು ಬಂದಿದ್ದೇವೆ. ಬೇರೆ ರಾಜ್ಯಗಳಲ್ಲಿ ಬೇರೆಯುವರನ್ನು ಪ್ರೀತಿಸುವ ಕಾಯಕ ಇಲ್ಲ. ಅವರವರ ಭಾಷೆಗೆ ಗಮನಹರಿಸುತ್ತಾರೆ. ಭಾಷೆಯ ಉಳಿವಿಗೆ ಹೋರಾಟ ಮಾಡುವ ಅನಿವಾರ್ಯತೆ ಕರ್ನಾಟಕದಲ್ಲಿ ಮಾತ್ರ ಇದೆ ಎಂದರು. ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಾದ ಡಾ.ವಿಕ್ರಮ್(ಜೆ.ಎಸ್.ಎಸ್ ಆಸ್ಪತ್ರೆ), ಜಯಕೀರ್ತಿ(ಪೊಲೀಸ್ ಇನ್ಸ್‌ಪೆಕ್ಟರ್), ಸರ್ವಮಂಗಳ(ಶಾಲಾಶಿಕ್ಷಕಿ), ಕೆ.ಸೌಭಾಗ್ಯವತಿ(ಪ್ರಾಧ್ಯಾಪಕಿ), ಕೆ.ಸಂಗೀತ(ಶಿಕ್ಷಕಿ), ಪುನೀತ್(ಕಲಾವಿದ), ಪ್ರಣತಿ ಪ್ರಕಾಶ್(ಹೋರಾಟಗಾರ್ತಿ), ಲೋಹಿತ್ ಹನುಮಂತಪ್ಪ(ಪತ್ರಕರ್ತ), ಚಂದನ್‌ಗೌಡ, ಜಯಮ್ಮ, ಕಾರ್ತಿಕ್ ನಾಯಕ್, ರಾಚಪ್ಪ, ಒಡನಾಡಿ ಸ್ಟ್ಯಾನ್ಲಿ ಮತ್ತಿತರಿಗೆ ಕನ್ನಡ ಮಾಣಿಕ್ಯ ವಿಶೇಷ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕನ್ನಡ ಸೇನೆ–ಕರ್ನಾಟಕ ರಾಜ್ಯಾಧ್ಯಕ್ಷ ಕೆ.ಆರ್.ಕುಮಾರ್, ಜಿಲ್ಲಾಧ್ಯಕ್ಷರಾದ ಎಂ.ಯು.ಶೈಲಜಾ, ಬಿ.ಸುಂದರ್, ಗೌರವ ಅಧ್ಯಕ್ಷೆ ಕಮಲಾ ನಟರಾಜು, ಜಿಲ್ಲಾ ಉಪಾಧ್ಯಕ್ಷರಾದ ಹರೀಶ್, ಎಂ.ಮಲ್ಲೇಶ್, ಪದಾಧಿಕಾರಿಗಳಾದ ಶಶಿಕಲಾ, ಯಶೋಧಮ್ಮ, ಶಶಿ, ಸಿದ್ದರಾಜು, ದ್ರಾಕ್ಷಾಯಿಣಿ, ಸುನೀಲ್ ನಾಗ್, ಪ್ರಜ್ವಲ್, ರಾಚು, ಕಾಳಸ್ವಾಮಿ ಮತ್ತಿತರರು ಹಾಜರಿದ್ದರು.

# ಮಾಧ್ಯಮದಲ್ಲಿ ಕೃತಕ ಬುದ್ಧಿಮತ್ತೆ ಕಾರ್ಯಾಗಾರ



ಮೈಸೂರು: ತಂತ್ರಜ್ಞಾನವೆಂಬುದು ಹರಿಯುವ ನದಿಯಂತೆ ಕ್ಷಣ ಕ್ಷಣಕ್ಕೂ ಅಭಿವೃದ್ಧಿಯಾಗುತ್ತಿ ರುತ್ತದೆ. ಇಂತಹ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸುಧಾರಿತ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಅವುಗಳ ಜತೆಗೆ ಮುನ್ನಡೆ ಯುವುದು ಅಗತ್ಯ ಎಂದು ಮಾಧ್ಯಮ ತಜ್ಞ ಹಾಗೂ ತಾಂತ್ರಿಕ ತರಬೇತುದಾರ ಡಾ.ವಿನೋದ್ ರಾವ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋ ದ್ಯಮ ಮತ್ತು ಮಾಧ್ಯಮ ಅಧ್ಯಯನ ವಿಭಾ ಗದ ವತಿಯಿಂದ ಡಿಜಿಟಲ್ ಯುಗದ ಮಾಧ್ಯಮ ತಂತ್ರಜ್ಞಾನಗಳ ಕುರಿತು ಅರಿವು ಮೂಡಿಸಲು ಆಯೋಜಿಸಲಾದ ಕಾರ್ಯಾಗಾರದ ಸರಣಿಯ ನಾಲ್ಕನೇ ದಿನದ ಕಾರ್ಯಾಗಾರವನ್ನು ಅವರು ನಡೆಸಿಕೊಟ್ಟರು.

ಕೃತಕ ಬುದ್ಧಿಮತ್ತೆ ಮತ್ತು ಆನ್‌ಲೈನ್ ಟೂಲ್ಸ್ ಫಾರ್ ಡಿಜಿಟಲ್ ಕ್ರಿಯೇಷನ್ ಎಂಬ ವಿಷಯದಡಿ ಮಾಧ್ಯಮ ಕ್ಷೇತ್ರದಲ್ಲಿ ಎಐ ಉಪಯೋಗದ ಕುರಿತು ಪ್ರಾಯೋಗಿಕವಾಗಿ ಉಪನ್ಯಾಸ ನೀಡಿ, ಎಐ ಬಳಸಿಕೊಂಡು ಸುದ್ದಿ ವಿಷಯಗಳು, ಗ್ರಾಫಿಕ್ಸ್ ಹಾಗೂ ವೀಡಿಯೊಗಳ ನಿರ್ಮಾಣ ಹೇಗೆ ಸಾಧ್ಯ ಎಂಬುದನ್ನು ತೋರಿಸಿಕೊಟ್ಟರು. ಎಐ ಎಂಬ ವಿಷಯದಡಿ ವಿದ್ಯಾರ್ಥಿಗಳಿಗೆ ಕಾನ್ವ, ಕ್ಯಾಪ್‌ಕಟ್, ಚಾಟ್‌ಜಿಪಿಟಿ, ಪಿಕ್ಟೋರಿ, ಸಿಂಥೇಷಿಯಾ ಕುರಿತು ಸುಧಾರಿತ ತಂತ್ರಾಂಶಗಳನ್ನು ಉಪ ಯೋಗಿಸಿಕೊಂಡು ತರಬೇತಿ ನೀಡಿ, ವಿದ್ಯಾರ್ಥಿಗಳಿಂದ ಪ್ರಾಯೋಗಿಕವಾಗಿ ಎಐ ಬಳಸಿಕೊಂಡು ವಿಡಿಯೋ ಸಂಪಾದನೆ ಮಾಡಿಸಿದರು. ವಿಭಾಗದ ಅಧ್ಯಕ್ಷೆ ಪ್ರೊ.ಎನ್.ಮಮತ, ಪ್ರಾಧ್ಯಾಪಕರಾದ ಪ್ರೊ.ನಿರಂಜನ, ಪ್ರೊ.ಪುಟ್ಟ ಸ್ವಾಮಿ, ಅಥಿತಿ ಉಪನ್ಯಾಸಕರಾದ ಡಾ.ಕುಮಾ ರಸ್ವಾಮಿ, ಡಾ.ಬಿ.ಸಿ.ಸಂಜಯ್ ಇತರರು ಇದ್ದರು.

# ಕನ್ನಡದ ವಿಷಯದಲ್ಲಿ ಕನ್ನಡ ಪರ ಸಂಘಟನೆಗಳ ಶಕ್ತಿ ಪ್ರಕಟ

## ಶಾಸಕ ಇಕ್ಬಾಲ್ ಹುಸೇನ್ ಹೇಳಿಕೆ | ಕರವೇ (ಸ್ವಾಭಿಮಾನಿ ಬಣ) ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ, ಕನ್ನಡ ಸಿರಿ ಸಂಭ್ರಮ



ರಾಮನಗರ: ಕನ್ನಡ ನಾಡು, ಭಾಷೆ, ಜಲದ ವಿಷಯ ಬಂದಾಗಲೆಲ್ಲ ಕನ್ನಡ ಪರ ಸಂಘಟನೆಗಳ ಶಕ್ತಿ ಪ್ರಕಟವಾಗುತ್ತಿದೆ. ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನಿ ಬಣ)ದಂತಹ ಸಂಘಟನೆಗಳಿಗೆ ನಾಗ ರೀಕರು ಬಲ ತುಂಬ ಬೇಕು ಎಂದು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಕರೆ ನೀಡಿದರು.

ನಗರದ ಹಳೇ ಬಸ್ ನಿಲ್ದಾಣದ ಆವರಣದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನಿ ಬಣ) ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಮತ್ತು ಕನ್ನಡ ಸಿರಿ ಸಂಭ್ರಮ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕನ್ನಡ ಪರ ಸಂಘಟನೆಗಳು ರಾಜ್ಯದ ಹಿತಕ್ಕಾಗಿ ಹೋರಾಟ ಮಾಡುತ್ತಿವೆ. ಹೀಗಾಗಿ ಸಮಾಜ ಈ ಸಂಘಟನೆಗಳಿಗೆ ಬೆಂಬಲವಾಗಿ ನಿಲ್ಲಬೇಕು ಎಂದರು.

ಇತ್ತೀಚಿನ ವರ್ಷಗಳಲ್ಲಿ ಇಂಗ್ಲೀಷ್‌ಗೆ ಹೆಚ್ಚು ಆಧ್ಯತೆ ನೀಡಲಾಗುತ್ತಿದೆ. ಕನ್ನಡ ನಮ್ಮ ಮಾತೃಭಾಷೆ. ಕನ್ನಡಕ್ಕೆ ಹೆಚ್ಚು ಆಧ್ಯತೆ ದೊರೆಯಬೇಕು. ರಾಜ್ಯದಲ್ಲಿ ನೆಲೆಸಿರುವ ಅನ್ಯ ಭಾಷಿಕರು ಕನ್ನಡದಲ್ಲೇ ವ್ಯವಹರಿಸಬೇಕು ಎಂದರು. ಕನ್ನಡ ರಾಜ್ಯೋತ್ಸವದಂತಹ ವೇದಿಕೆಗಳು ಕನ್ನಡ ಹಬ್ಬದ ವಾತಾವರಣ ಸೃಷ್ಟಿಸುತ್ತಿದೆ ಎಂದು ಅಭಿಪ್ರಾಯಪಟ್ಟರು. ಅದ್ದೂರಿಯಾಗಿ ಕನ್ನಡ ರಾಜ್ಯೋತ್ಸವವನ್ನು ಆಚರಿಸುತ್ತಿರುವ ಕರವೇ (ಸ್ವಾಭಿಮಾನಿ ಬಣ)ದ ಪದಾಧಿಕಾರಿಗಳನ್ನು ಅವರು ಶ್ಲಾಘಿಸಿದರು.

### ಕನ್ನಡ ಸಂಘಟನೆಗಳಿಗೆ ಶಕ್ತಿ ಇದೆ: ಎ.ಮಂಜುನಾಥ್

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾಗಡಿ ಕ್ಷೇತ್ರದ ಮಾಜಿ ಶಾಸಕ ಎ.ಮಂಜುನಾಥ್ ಮಾತನಾಡಿ, ಕೆಲವು ಸರ್ಕಾರಿ ಅಧಿಕಾರಿಗಳು ಜನಸಾಮಾನ್ಯರ ಕೆಲಸ ಮಾಡಿಕೊಡಲು ಸಬೂಬು ಹೇಳುತ್ತಾರೆ. ಇಂತಹ ಸಂದರ್ಭಗಳಲ್ಲಿ ಕನ್ನಡ ಪರ ಸಂಘಟನೆಗಳು ಪ್ರವೇಶ ಮಾಡಿದರೆ, ಸೂಕ್ತವಾಗಿ ಸ್ಪಂದಿಸಿದ ಉದಾಹರಣೆಗಳಿವೆ. ಇದು ಸಂಘಟನೆಗಳಿಗಿರುವ ಶಕ್ತಿಯನ್ನು ತೋರಿಸುತ್ತದೆ. ಕನ್ನಡ ಭಾಷೆ, ಲಪಿಇ, ಸಾಹಿತ್ಯ, ಸಂಸ್ಕೃತಿಗೆ ಅಧಮ್ಯ ಶಕ್ತಿ, ಮೌಲ್ಯ ಇದೆ. ಇದನ್ನು ಕಾಪಾಡುವ ಹೊಣೆ ಎಲ್ಲರದ್ದು ಎಂದರು.

### ಒಗ್ಗೂಡಿಸುವ ಭಾಷೆ: ಕೆ.ಶೇಷಾದ್ರಿ

ನಗರಸಭಾಧ್ಯಕ್ಷ ಕೆ.ಶೇಷಾದ್ರಿ (ಶಶಿ) ಮಾತನಾಡಿ ಜಾತಿ, ಮತ, ಪಕ್ಷಗಳ ಬೇಧವಿಲ್ಲದೆ ಎಲ್ಲರೂ ಸಂಭ್ರಮಿಸುವುದು ಕನ್ನಡ ಭಾಷೆಯ ಹಬ್ಬದಲ್ಲಿ ಎಂದರು. ಅನೇಕ ತೊಂದರೆಗಳ ನಡುವೆಯೂ ಕನ್ನಡ ಪರ ಸಂಘಟನೆಗಳು ನಾಡು, ಭಾಷೆ, ಜಲದ ವಿಷಯದಲ್ಲಿ ನಿರಂತರ ಹೋರಾಡುತ್ತಿವೆ. ಕರವೇ (ಸ್ವಾಭಿಮಾನಿ ಬಣ) ಕನ್ನಡ ಭಾಷೆ, ಜಲ, ನಾಡಿನ ವಿಚಾರದಲ್ಲಿ ಹೋರಾಟ ಮಾಡುತ್ತಿರುವುದಲ್ಲದೆ, ಸಾಮಾಜಿಕ ಕಳಕಳಿಯನ್ನು ಮೆರೆಯುತ್ತಿದೆ ಎಂದರು.

### ಖಾಸಗಿ ಶಾಲೆಗಳಿಗೆ ಕಡಿವಾಣ ಹಾಕಿ – ಪಿ.ಕೃಷ್ಣೇಗೌಡ

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದದ ಕರವೇ (ಸ್ವಾಭಿಮಾನಿ ಬಣ)ದ ಅಧ್ಯಕ್ಷ ಪಿ.ಕೃಷ್ಣೇಗೌಡ ಮಾತನಾಡಿ, ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವ ಸರ್ಕಾರ ಖಾಸಗಿ ಶಾಲೆಗಳನ್ನು ತೆರೆಯಲು ಅನುಮತಿ ನೀಡುತ್ತಿದೆ. ಇದು ಸರಿಯಲ್ಲ. ಇದು ನಿಲ್ಲ ಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಅಂಗನವಾಡಿ ಮಕ್ಕಳಿಗೆ ನೀಡುತ್ತಿರುವ ಆಹಾರ ಕಳಪೆಯಾಗಿದೆ. ಸರ್ಕಾರದ ವತಿಯಿಂದ ಬಾಣಂತಿಯರಿಗೆ ನೀಡುತ್ತಿರುವ ಆಹಾರವೂ ಕಳಪೆಯಾಗಿದೆ. ಶಾಸಕರು ಈ ವಿಚಾರವನ್ನು ಸರ್ಕಾರದ ಗಮನ ಸೆಳೆಯಬೇಕು. ಉತ್ತಮ ಆಹಾರ ಪದಾರ್ಥಗಳನ್ನು ಪೂರೈಸಲು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

### ಕನ್ನಡದಲ್ಲೇ ವ್ಯವಹರಿಸಿ – ಉಮಾಪತಿ

ಚಲನ ಚಿತ್ರ ನಿರ್ಮಾಪಕ ಉಮಾಪತಿ ಮಾತನಾಡಿ, ಕರ್ನಾಟಕದಲ್ಲಿ ವಾಸಿಸುವ ಎಲ್ಲರೂ ತಮ್ಮ ಮನೆಯಲ್ಲಿ ಯಾವ ಭಾಷೆಯನ್ನಾದರು ಮಾತನಾಡಿ, ಆದರೆ ಸಮಾಜದಲ್ಲಿ ವ್ಯವಹರಿಸುವಾಗಿ ಕನ್ನಡವನ್ನೇ ಉಪಯೋಗಿಸಿ ಎಂದರು.ನಿವೃತ್ತ ತಹಸೀಲ್ದಾರ್ ಶಿವಣ್ಣ ಮಾತನಾಡಿದರು. ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಯರೇಹಳ್ಳೀ ಮಂಜುನಾಥ್, ವಿವಿಧ ಸಂಘಟನೆಗಳ ರಾಜು ಎಂಎನ್‌ಆರ್, ಜಗದೀಶ್‌ಐಜೂರು, ಗಿರೀಶ್, ಕನ್ನಡಮಂಜು ಸೇರಿದಂತೆ ವಿವಿಧ ಘಟಕದ ಪದಾಧಿಕಾರಿಗಳಾದ ಬೆಟ್ಟೇಗೌಡ, ಅದ್ದೂರಿ ಲಿಂಗೇಶ್, ಸ್ವಾಮಿ, ವಾಸು, ಸಿದ್ದರಾಮು, ವೆಂಕಟೇಶ್‌ಮೂರ್ತಿ, ರಮೇಶ್, ಮನು, ಅಶ್ವಥ್ ಉಪಸ್ಥಿತರಿದ್ದರು.

### ಕದಂಬ ಪ್ರಶಸ್ತಿ ಪುರಸ್ಕೃತರು

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವ ಪ್ರಮುಖರಿಗೆ ಕದಂಬ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಂತೋಷ್ (ಯೋಧ), ಜೆ.ಪಿ.ರಮೇಶ್ (ಪೊಲೀಸ್), ಎಸ್.ಕೆ.ಕೃಷ್ಣ (ಪೊಲೀಸ್), ಮಂಜು (ರೈತ), ಟಿ.ಜಿ.ವೆಂಕಟೇಶ್ (ರೈತ), ಪ್ರಸಾದ್ (ವೈದ್ಯಕೀಯ), ಮಲ್ಲೇಶ್ (ಪಶು ವೈದ್ಯಕೀಯ), ವಿಷಕಂಟಯ್ಯ (ನಾಟಿ ವೈದ್ಯ), ಶಿವಹೊಂಬಯ್ಯ (ಶಿಕ್ಷಣ), ಮುನಿಯಪ್ಪ.ಎಸ್ (ಶಿಕ್ಷಣ), ಸುಮಂಗಲ ಎಸ್. (ಸಾಹಿತ್ಯ), ಅಂಕನಹಳ್ಳಿ ಶಿವಣ್ಣ (ಕಲೆ), ನಾಗೇಶ್ (ಸಮಾಜ ಸೇವೆ), ಬಿ.ವಿ.ಸೂರ್ಯ ಪ್ರಕಾಶ್ (ಮಾಧ್ಯಮ), ಪ್ರವೀಣ್.ಎಂ.ಎಚ್ (ಮಾಧ್ಯಮ), ಶಶಿಕುಮಾರ್ (ಮಾಧ್ಯಮ), ಸುಶೀಲಮ್ಮ (ಪೌರ ಸೇವೆ), ಸಾನ್ವಿ ಸತೀಷ್ (ಕ್ರೀಡೆ), ದಿಗಂತ್ ಗೌಡ (ಕ್ರೀಡೆ), ಮಲ್ಲೇಶ್.ಆರ್ (ಕ್ರೀಡೆ), ವಾರುಣಿ (ಕ್ರೀಡೆ)

### ಗಮನ ಸೆಳೆದ ನೃತ್ಯ ಪ್ರದರ್ಶನ, ಗಾಯನ

ಕನ್ನಡ ಸಿರಿ ಸಂಭ್ರಮದ ಅಂಗವಾಗಿ ನಗರದ ಎಬಿಸಿಡಿ ನೃತ್ಯ ಶಾಲೆಯ ವಿದ್ಯಾರ್ಥಿಗಳು ನಡೆಸಿಕೊಟ್ಟ ನೃತ್ಯ ಪ್ರದರ್ಶನ ಸಭಿಕರ ಗಮನ ಸೆಳೆಯಿತು. ಚಲನ ಚಿತ್ರಗಳ ಗಾಯನ ಕೂಡ ಮನರಂಜಿಸಿತು.

ವೇದಿಕೆಯಲ್ಲಿ ಕರವೇ (ಸ್ವಾಭಿಮಾನಿ ಬಣ)ದ ರಾಜ್ಯ ಉಸ್ತುವಾರಿ ಅಧ್ಯಕ್ಷ ಶಿವುಗೌಡ, ರಾಜ್ಯ ಉಪಾಧ್ಯಕ್ಷ ಶಿವಕುಮಾರ ಗೌಡ, ಜಿಲ್ಲಾಧ್ಯಕ್ಷ ಕಿರಣ್ ಗೌಡ, ಜಿಲ್ಲಾ ಗೌರವಾಧ್ಯಕ್ಷ ರಾಜು ಚನ್ನಮಾನಹಳ್ಳಿ, ಜಿಲ್ಲಾ ಉಸ್ತುವಾರಿ ಅಧ್ಯಕ್ಷ ಬಸವರಾಜ್ ಹವಲ್ದಾರ್, ಜಿಲ್ಲಾ ಉಪಾಧ್ಯಕ್ಷ ಬೆಟ್ಟೇಗೌಡ ಮತ್ತು ಪದಾಧಿಕಾರಿಗಳು ಕಾರ್ಯಕ್ರಮ ನಿರ್ವಹಿಸಿದರು.

## ಮೊದಲ ಪುಟದಿಂದ

### ಕುಕ್ಕೆ ಕ್ಷೇತ್ರದಲ್ಲಿ 'ಧರ್ಮ ದಂಗಲ್'

ಸರ್ಕಾರದ ಶಿಷ್ಟಾಚಾರ ಪ್ರಕಾರ ಎಲ್ಲರನ್ನು ಆಹ್ವಾನಿಸಲಾಗಿದೆ. ಅನ್ಯಧರ್ಮಿಯರಾದ ಸ್ಪೀಕರ್ ಯು.ಟಿ.ಖಾದರ್, ಎಂಎಲ್‌ಸಿ ಐವನ್ ಡಿಸೋಜಾ, ಬ್ಯಾರಿ ಅಕಾಡೆಮಿ ಅಧ್ಯಕ್ಷ ಉಮರ್ ಯು.ಹೆಚ್, ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಫೂರ್, ಕನಿಷ್ಠ ವೇತಾತ ಸಲಹಾ ಮಂಡಳಿ ಅಧ್ಯಕ್ಷ ಶಹೀದ್ ತೆಕ್ಕಿಲ್, ಕೊಂಕಣಿ ಸಾಹಿತ್ಯ ಅಕಾಡಮಿಯ ಜೋಕಿಂ, ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಶಾಲೆಟ್ ಪಿಂಟೋಗೆ ಆಹ್ವಾನ ನೀಡಲಾಗಿದೆ.

ಹಿಂದೂ ಶ್ರದ್ಧಾ ಕೇಂದ್ರಗಳಿಗೆ ಅನ್ಯಧರ್ಮೀಯರನ್ನು ಏಕೆ ಆಹ್ವಾನಿಸಬೇಕು ಎಂಬ ಆಕ್ರೋಶಕ್ಕೆ ಮಣಿದಿರುವ ಸರ್ಕಾರ ಆಹ್ವಾನ ಪತ್ರಿಕೆಯನ್ನು ಮರುಮುದ್ರಿಸಿ ಹಂಚಿಕೆ ಮಾಡಿದೆ ಎನ್ನಲಾಗಿದೆ.

### ಕಚೇರಿಗೆ ಬಾಂಬ್ ಬೆದರಿಕೆ

ಅದು ಸ್ಫೋಟಗೊಳ್ಳಲಿದೆ ಎಂಬ ಸಂದೇಶವೊಂದು ಅಪರಿಚಿತ ವ್ಯಕ್ತಿಯ ಇ–ಮೇಲ್ ವಿಳಾಸದಿಂದ ಬಂದಿತ್ತು. ವಿಚಾರ ತಿಳಿಯುತ್ತಿದ್ದಂತೆ ಅಧಿಕಾರಿಗಳು, ಸುತ್ತಮುತ್ತಲಿನ ಪ್ರದೇಶದ ಜನರು ಆತಂಕಗೊಂಡಿದ್ದರು. ಮಾಹಿತಿ ಪಡೆದ ಬಳಿಕ ಸರಗೂರು ಪೊಲೀಸರು ಬಾಂಬ್ ನಿಷ್ಕ್ರಿಯ ದಳದೊಂದಿಗೆ ಸ್ಥಳಕ್ಕೆ ದೌಢಾಯಿಸಿದ್ದು, ಶೋಧ ನಡೆಸಿದರು. ನಂತರ ಇದು ಹುಸಿ ಬಾಂಬ್ ಬೆದರಿಕೆ ಎಂದು ಗೊತ್ತಾಗಿದೆ. ಇದೇ ಇ–ಮೇಲ್ ವಿಳಾಸದಿಂದ ತಮಿಳು ನಟ ಅಜಿತ್ ಕುಮಾರ್ ಅವರ ಚೆನ್ನೈ ಕಚೇರಿಗೂ ಬಾಂಬ್ ಬೆದರಿಕೆ ಸಂದೇಶ ಬಂದಿದೆ ಎನ್ನಲಾಗಿದೆ.

### ಆಲೂರು ಕಚೇರಿಗೂ ಬೆದರಿಕೆ

ಬೆದರಿಕೆ ಆಗಿತ್ತು. ಇದೇ ತಿಂಗಳ ಡಿ.15ರಂದು ಹಾಸನದ ಜಿಲ್ಲಾಧಿಕಾರಿಗೆ ಬಾಂಬ್ ಬೆದರಿಕೆ ಬಂದಿತ್ತು.

### ಬಿಜೆಪಿಗೆ ಭಯವೇಕೆ?

ಖಾತೆಗೆ ನೇರವಾಗಿ ಹಣ ವರ್ಗಾವಣೆ ಆಗುವಾಗ ಲಪಟಾಯಿಸುವ ಪ್ರಶ್ನೆ ಎಲ್ಲಿಂದ ಉದ್ಭವವಾಗುತ್ತದೆ? ಆ ಹಣವನ್ನು ಬೇರಾರೂ ತೆಗೆದುಕೊಳ್ಳಲಾಗುವುದಿಲ್ಲ. ಹಣ ಇನ್ನೂ ಬಿಡುಗಡೆಯಾಗಿಲ್ಲ ಎಂದು ಸಿದ್ದರಾಮಯ್ಯ ತಿಳಿಸಿದರು.

### ಸಂಕ್ರಾಂತಿಗೆ ಕ್ರಾಂತಿಯೂ ಇಲ್ಲ, ಏನೂ ಆಗಲ್ಲ: ಸಿದ್ದರಾಮಯ್ಯ

ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಪಕ್ಷದ ಅಧ್ಯಕ್ಷರನ್ನು ಯಾರಾದರೂ ಭೇಟಿಯಾದರೆ ತಪ್ಪೇನು? ಭೇಟಿಯಾಗಲಿ ಎಂದರು. ರಾಜಣ್ಣ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನಾಗಿ ಮಾಡಿದ್ದು ನಾನೇ ಎಂಬ ಶಿವಕುಮಾರ್ ಹೇಳಿಕೆಗೆ, ಅಧಿಕಾರದಲ್ಲಿದ್ದಾಗ ನಾನು ಮಾಡಿದೆ, ಅವರು ಮಾಡಿದರು ಎನ್ನುವುದು ಮುಖ್ಯವಲ್ಲ. ಅದರ ಪ್ರಶ್ನೆಯೇ ಇಲ್ಲ. ಎಸ್.ಎಂ.ಕೃಷ್ಣ ಅವರು ಆಗ ಮುಖ್ಯಮಂತ್ರಿ ಆಗಿದ್ದರು, ಸರ್ಕಾರ ಮಾಡಿತ್ತು ಎಂದು ಪ್ರತಿಕ್ರಿಯಿಸಿದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

### ಹೊಸ ವರ್ಷಕ್ಕೆ ಸಾರಿಗೆ ಮುಷ್ಕರ



ಮಹಾ ಮಂಡಳಿ ಪರವಾಗಿ ಮಹಾ ಪ್ರಧಾನ ಕಾರ್ಯದರ್ಶಿ ಬಿ.ಜಯದೇವರಾಜೇ ಅರಸ್ ಈ ಬಗ್ಗೆ ಮಾತನಾಡಿ, ಸರ್ಕಾರ ಸಿಬ್ಬಂದಿಗೆ 38 ತಿಂಗಳ ಹಿಂಬಾಕಿ ನೀಡಬೇಕು. ಸರ್ಕಾರ ಕೂಡಲೇ ಬೇಡಿಕೆ ಈಡೇರಿಸದೆ ಇದ್ದರೆ ಜನವರಿ ಮೊದಲ ವಾರದಲ್ಲಿ ಮುಷ್ಕರದ ಬಿಸಿ ಜನರಿಗೆ ತಟ್ಟಲಿದೆ. ಒಂದೇ ಒಂದು ಬಸ್ ಅನ್ನು ಡಿಪೋದಿಂದ ಹೊರಗೆ

ಬರುವುದಿಲ್ಲ. ಸರ್ಕಾರಕ್ಕೆ ನೀಡುತ್ತಿರುವ ಕೊನೆಯ ಎಚ್ಚರಿಕೆಯಿದು ಎಂದು ತಿಳಿಸಿದ್ದಾರೆ.

ಪ್ರತಿ 4 ವರ್ಷಗಳಿಗೊಮ್ಮೆ ಸಾರಿಗೆ ನೌಕರರ ವೇತನ ಪರಿಷ್ಕರಣೆ ನಡೆಯುತ್ತದೆ. ಈ ಹಿಂದೆ 2012–2016ರ ವರೆಗೆ ವೇತನ ಹೆಚ್ಚಳ ಮಾಡಿದಾಗ 2012ರಿಂದ ಜಾರಿಗೆ ಬರುವುದಾಗಿ, 2016–2020ರ ವರೆಗೆ ವೇತನ ಹೆಚ್ಚಳ ಮಾಡಿದಾಗ 2016ರಿಂದ ಜಾರಿಗೆ ಬರಲಿದೆ ಎಂದು ಸರ್ಕಾರದ ಆದೇಶದಲ್ಲಿ ಉಲ್ಲೇಖವಾಗಿತ್ತು. ಆದರೆ, 2023ರ ಆದೇಶದಲ್ಲಿ 2023ರ ಮಾರ್ಚ್ 1ರಿಂದ ಜಾರಿಗೆ ಬರುವಂತೆ ಎಂದು ಉಲ್ಲೇಖಿಸಿದೆ. ಈ ಆದೇಶದಲ್ಲಿ 2020ರಿಂದ ಎಂದು ಉಲ್ಲೇಖ ಮಾಡಿಲ್ಲ. ಈ ಆದೇಶದಂತೆ ಮುಂದಿನ 4 ವರ್ಷ ಅಂದರೆ 2027 ರವರೆಗೆ ವೇತನ ಪರಿಷ್ಕರಣೆ ಮಾಡಲು ಸಾಧ್ಯವಿಲ್ಲ. ಆದೇಶದಲ್ಲಿ ಎಲ್ಲಿಯೂ ಸ್ಪಷ್ಟವಾಗಿ 2020 ರಿಂದಲೇ ಜಾರಿಗೆ ಬರುವಂತೆ ಎಂದು ಉಲ್ಲೇಖ ಮಾಡದ ಕಾರಣ ವೇತನ ಪರಿಷ್ಕರಣೆ ಮಾಡಲು ಸಾಧ್ಯವಿಲ್ಲ ಎಂಬ ವಾದವನ್ನು ಕಾಂಗ್ರೆಸ್ ಸರ್ಕಾರ ಮುಂದಿಟ್ಟಿತ್ತು. ಈ ವಿಚಾರದ ಬಗ್ಗೆ ಸಾರಿಗೆ ಸಿಬ್ಬಂದಿ ಪ್ರತಿಭಟನೆ ನಡೆಸಿದಾಗ ಬೆಳಗಾವಿ ಅಧಿವೇಶನದ ಬಳಿಕ ಭರವಸೆ ಈಡೇರಿಸುವುದಾಗಿ ಸರ್ಕಾರ ಹೇಳಿತ್ತು. ಆದರೆ ಇದುವರೆಗೆ ಈಡೇರಿಸಿಲ್ಲ ಎಂದು ಆರೋಪಿಸಿದರು.

# ಶೃಂಗೇರಿ ಶ್ರೀಗಳಿಂದ ಮುಕ್ತಿ ವಾಹನಕ್ಕೆ ಚಾಲನೆ



ಮೈಸೂರು: ಕಡಕೋಳದ ನಿವಾಸಿ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಪರಿಷತ್ ಜಿಲ್ಲಾ ಅಧ್ಯಕ್ಷ ಕಡಕೋಳ ಜಗದೀಶ್ ತಂದೆ ದಿ.ಕೆ.ಎಸ್.ರಾಜು ಹಾಗೂ ತಾಯಿ ದಿ.ಸರಸ್ವತಮ್ಮ ಸ್ಮರಣಾರ್ಥ ಅಂಗವಾಗಿ ಬಡವರ ಅನುಕೂಲಕ್ಕಾಗಿ ಶವಸಂಸ್ಕಾರ(ಮುಕ್ತಿ) ವಾಹನವನ್ನು ಉಚಿತವಾಗಿ ಕೊಡುಗೆ ನೀಡಿದ್ದಾರೆ. ಸದರಿ ವಾಹನವನ್ನು ಸೋಮವಾರ ಅಗ್ರಹಾರದಲ್ಲಿರುವ ಶಂಕರಮಠದಲ್ಲಿ ಶೃಂಗೇರಿ ಪೀಠದ ಶ್ರೀ ವಿದುಶೇಖರ ಭಾರತೀ ಸ್ವಾಮೀಜಿ ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿ, ಈ ವಾಹನ ಬಡವರಿಗೆ ಉಪಯೋಗಕರವಾಗಲಿ. ದೇವರು ಮೆಚ್ಚುವ ಕೆಲಸ ಮಾಡುತ್ತಿರುವ ಕಡಕೋಳ ಜಗದೀಶ್ ಪರಿವಾರಕ್ಕೂ ಶುಭವಾಗಲಿ ಎಂದು ಹಾರೈಸಿದರು. ಇದೇ ಸಂದರ್ಭದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಧಾರ್ಮಿಕ ಮುಖಂಡರಾದ ಭಾನುಪ್ರಕಾಶ್ ಶರ್ಮ, ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್.ಸತ್ಯನಾರಾಯಣ್, ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ಹರೀಶ್ ಭಾರದ್ವಾಜ್, ಟಿ.ಎಸ್.ಅರುಣ್, ರಂಗನಾಥ್, ಅಮಿತ್ ಇನ್ನಿತರರು ಹಾಜರಿದ್ದರು.

### ನಾಯಕತ್ವ ಗೊಂದಲಕ್ಕೆ ಸ್ಥಳೀಯ ಪರಿಹಾರ!


ರಂದು ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ಹೋಗುವ ಸಾಧ್ಯತೆಯಿದೆ. ಈ ಭೇಟಿಯ ಸಮಯದಲ್ಲಿ ಅವರು ಹೈಕಮಾಂಡ್ ಅನ್ನು ಭೇಟಿ ಮಾಡಬಹುದು ಎಂದು ಗೃಹ ಸಚಿವರು ಹೇಳಿದರು.

ಯಾವುದೇ ಸಮಸ್ಯೆಗಳು ಅಥವಾ ಗೊಂದಲಗಳು ಇರಬಾರದು ಎಂಬುದು ತಮ್ಮ ಉದ್ದೇಶ. ಏಕೆಂದರೆ ಅದು ಆಡಳಿತದ ಮೇಲೆ ಪರಿಣಾಮ ಬೀರಬಹುದು ಎಂದು ಹೈಕಮಾಂಡ್ ಸಮಸ್ಯೆಯನ್ನು ಆದಷ್ಟು ಬೇಗ ಪರಿಹರಿಸಬೇಕು ಎಂಬ ತಮ್ಮ ಹಿಂದಿನ ಹೇಳಿಕೆಯ ಕುರಿತಾದ ಪ್ರಶ್ನೆಗೆ ಉತ್ತರಿಸಿದರು.

ಸಮಸ್ಯೆಗಳನ್ನು ನೀವೇ ಪರಿಹರಿಸಿಕೊಳ್ಳಿ ಮತ್ತು ಹೈಕಮಾಂಡ್‌ಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಅಧ್ಯಕ್ಷರು ಹೇಳಿದ್ದಾರೆ. ಹೀಗಾಗಿ, ನಾವೆಲ್ಲರೂ ಒಟ್ಟಿಗೆ ಕುಳಿತು ಪರಿಹರಿಸಿಕೊಳ್ಳಬೇಕು ಎಂದರು.

ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ಯಾವುದೇ ಗೊಂದಲ ಸೃಷ್ಟಿ ಮಾಡಿಲ್ಲ. ಇದು ಸ್ಥಳೀಯ ಮಟ್ಟದ ಸಮಸ್ಯೆ. ಸ್ಥಳೀಯ ನಾಯಕರೇ ಇದನ್ನ ಬಗೆಹರಿಸಿಕೊಳ್ಳಬೇಕು. ಹೈಕಮಾಂಡ್ ಮೇಲೆ ಆರೋಪ ಹೊರಿಸುವ ಬದಲು, ಸ್ಥಳೀಯ ನಾಯಕರು ಆಂತರಿಕ ವಿವಾದಗಳ ಹೊಣೆಗಾರಿಕೆಯನ್ನು ತೆಗೆದುಕೊಳ್ಳಬೇಕು ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದರು.

### ಸಮಾಜ ಸೇವೆಯೇ ನಿಜವಾದ ಧರ್ಮ




ಮೈಸೂರು: ಸಮಾಜಕ್ಕೆ ಸೇವೆ ಸಲ್ಲಿಸುವುದೇ ನಿಜವಾದ ಧರ್ಮ. ಅದಕ್ಕಾಗಿಯೇ "ಧರ್ಮೋ ರಕ್ಷತಿ ರಕ್ಷಿತಃ" ಎಂದು ಹೇಳಲಾಗುತ್ತದೆ ಎಂದು ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಬಿ.ಲಿಂಗರಾಜು ಹೇಳಿದರು.

ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ವತಿಯಿಂದ ನಗರದ ಬೆಲವತ್ತ ಗ್ರಾಮದಲ್ಲಿರುವ ಸವಿ ನೆನಪು ಫೌಂಡೇಶನ್ ಸೇವಾಶ್ರಮದ ಮಕ್ಕಳಿಗೆ ಸ್ವೆಟರ್‌ಗಳನ್ನು ವಿತರಿಸಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿ ಮಾತನಾಡಿದರು. ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಕಳೆದ 15 ದಿನಗಳಿಂದ ಮೈಸೂರು ನಗರದಲ್ಲಿ ನಿರಂತರವಾಗಿ ನಿರಾಶ್ರಿತರು ಹಾಗೂ ವೃದ್ಧರಿಗೆ ಹೊದಿಕೆಗಳನ್ನು ವಿತರಿಸುತ್ತಾ ಬಂದಿದೆ. ಇದೀಗ ಬಡ ಮಕ್ಕಳಿಗೆ ಗುಣಮಟ್ಟದ ಸ್ವೆಟರ್ ವಿತರಿಸುವ ಕಾರ್ಯ ಕೈಗೊಂಡಿರುವುದು ನಿಜಕ್ಕೂ ಶ್ಲಾಘನೀಯ ಕಾರ್ಯ ಎಂದರು.

ಸಮಾಜ ಸೇವಕ ಉತ್ತನಹಳ್ಳಿ ಶಿವಣ್ಣ, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷರಾದ ವಿನಯ್ ಕುಮಾರ್, ಕನಕ ಪತ್ತಿನ ಸಹಕಾರಿ ಸಂಘದ ನಿರ್ದೇಶಕ ರವಿಚಂದ್ರ, ಹೇಮಂತ್, ಸವಿ ನೆನಪು ಫೌಂಡೇಶನ್ ಸೇವಾಶ್ರಮದ ಕಾರ್ಯನಿರ್ವಾಹಕ ಮಧು ಹಾಗೂ ಇನ್ನಿತರರು ಹಾಜರಿದ್ದರು.

### ಜ.9ಕ್ಕೆ ಕದಂಬ ರಂಗ ಪ್ರಶಸ್ತಿ ಪ್ರದಾನ

ಮೈಸೂರು: ರೋಟರಿ ಮೈಸೂರು ಉತ್ತರ ಹಾಗೂ ಕದಂಬ ರಂಗ ವೇದಿಕೆವತಿಯಿಂದ ಜ.9ರಂದು ಸಂಜೆ 6ಕ್ಕೆ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿರ?ಸ್ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ ಮಾಡಲಿರುವುದಾಗಿ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ಬಾರಿ ಹರಿಪ್ರಸಾದ್, ಸುಬ್ಬನರಸಿಂಹ, ಕೃಷ್ಣ ಜನಮನ ಹಾಗೂ ದಿನೇಶ್ ಚಮ್ಮಾಳಿಗೆ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಈ ಎಲ್ಲರೂ ಸಹಾ ರಂಗಭೂಮಿಗೆ ಸಾಕಷ್ಟು ಕೊಡುಗೆ ನೀಡಿ ಸಕ್ರಿಯರಾಗಿದ್ದಾರೆ. ಪ್ರಗತಿಪರ ಚಿಂತಕ ಪ್ರೊ.ಕಾಳೇಗೌಡ ನಾಗವಾರ ಪ್ರಶಸ್ತಿ ಪ್ರದಾನ ಮಾಡುವರು. ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ಅತಿಥಿಗಳಾಗಿರುವರೆಂದರು. ಎಂ.ಚಂದ್ರಶೇಖರ್, ಎ.ಪಿ.ವಿರೂಪಾಕ್ಷ, ಅಶ್ವಥ್ ಕದಂಬ, ಡಿ.ತಿಪ್ಪಣ್ಣ ಹಾಗೂ ಯು.ಎಸ್.ರಾಮಣ್ಣ ಹಾಜರಿದ್ದರು.



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ನಾಳೆ ಉಚಿತ ಆರೋಗ್ಯ ತಪಾಸಣಾ ಶಿಬಿರ

ಚಾಮರಾಜನಗರ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ ಮಾಜಿ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಮುಖಂಡರಾದ ಆರ್.ಉಮೇಶ್ ಎಸ್ ಪಿಕೆ ಅವರ ಹುಟ್ಟುಹಬ್ಬದ ಪ್ರಯುಕ್ತ ಎಸ್ ಪಿಕೆ ಗ್ರೂಪ್, ಅಭಿಮಾನಿ ಬಳಗದ ವತಿಯಿಂದ ಡಿ 24 ಬುಧವಾರದಂದು ತಾಲೂಕಿನ ಉಡಿಗಾಲದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋ ಜಿಸಲಾಗಿದೆ.

ಅಂದು ಗ್ರಾಮದ ಪ್ರಾಥಮಿಕ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆ ತನಕ ಶಿಬಿರ ನಡೆಯುತ್ತದೆ. ಮರಿಯಾಲ ಮಹಾಸಂಸ್ಥಾನ ಮಠದವ ಶ್ರೀ. ಇಮ್ಮಡಿ ಮುರುಘ ರಾಜೇಂದ್ರಸ್ವಾಮಿಗಳು, ಚಾಮರಾಜನಗರದ ಶ್ರೀ ಸಿದ್ದ ಮಲ್ಲೇಶ್ವರ ವಿರಕ್ತ ಮಠದ ಶ್ರೀ ಚನ್ನಬಸವಸ್ವಾಮಿಗಳು, ಉಡಿಗಾಲ ಗುರುಮಲ್ಲೇಶ್ವರ ದಾಸೋಹ ಮಠದ ಶ್ರೀ ಪ್ರಸಾದ್ ಸ್ವಾಮಿಗಳು ದಿವ್ಯ ಸಾನಿಧ್ಯದಲ್ಲಿ ವಹಿಸಲಿ ದ್ದಾರೆ. ಅರವಿಂದ ಕಣ್ಣಿನ ಆಸ್ಪತ್ರೆ, ಕೊಯಮತ್ತೂರು ಮತ್ತು ರೆಜೋನೆನ್ಸ್ ವಾಕ್ ಮತ್ತು ಶ್ರವಣ ಸಂಸ್ಥೆ, ಮೈಸೂರು ಹಾಗೂ ಇನ್ಸಿಟ್ಯೂಟ್ ಆಫ್ ನೆಫ್ರೋಯು ರಾಲಜಿ ಮೈಸೂರು.ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಕಣ್ಣಿನ ಮತ್ತು ಶ್ರವಣ ದೋಷ ಹಾಗೂ ಕಿಡ್ನಿ ತಪಾಸಣಾ ಶಿಬಿರ ನಡೆಯುತ್ತದೆ. ಶಿಬಿರದಲ್ಲಿ ಕಣ್ಣಿನ ಪೊರೆ ಕಣ್ಣಿನಲ್ಲಿ ಬಿರುಕು ಉಂಟಾಗುವುದು, ವಾರೆ ಕಣ್ಣು, ಗ್ಲಕೋಮ, ರಾತ್ರಿಯ ಕುರುಡುತನ, ಕಣ್ಣಿನಲ್ಲಿ ಗೀಜು ಬರುವುದು,ಹತ್ತಿರ ಮತ್ತು ದೂರದೃಷ್ಟಿ ದೋಷ ಶ್ರವಣ ದೋಷ ಕಿವಿಕೇಳದೆ ಇರುವುದು,ಕಿವಿ ಗೂಯಿಗುಡುವುದು, ಕಿವಿಯಲ್ಲಿ ನೋವು, ತಲೆ ಸುತ್ತುವುದು, ಇತರೆ ಸಮಸ್ಯೆ ಪರೀಕ್ಷೆ ಮಾಡಲಾಗುತ್ತದೆ. ಡಾ.ನರೇಂದ್ರ ಜೆ.ಬಿ. ಹಿರಿಯ ವೈದ್ಯರು ಮೂತ್ರಶಾಸ್ತ್ರ ವಿಭಾಗ ಹಾಗೂ ಮುಖ್ಯಸ್ಥರು ಇನ್ಸಿಟ್ಯೂಟ್ಆಫ್ ನೆಫ್ರೋಯುರಾಲಜಿ, ಮೈಸೂರು ಇವರ ನೇತೃತ್ವದಲ್ಲಿ ಮೂತ್ರಪಿಂಡ ಕಾಯಿಲೆಗಳಾದ ಕಿಡ್ನಿಯಲ್ಲಿ ಕಲ್ಲು ಕಿಡ್ನಿ ಸೋಂಕು ಮೂತ್ರ ಜನನಾಂಗದ ಎಲ್ಲಾ ಬಗೆಯ ಕ್ಯಾನ್ಸರ್, ಪುರುಷರ ಬಂಜೆತನ ಇಳಿ ವಯಸ್ಸಿನ ಮೂತ್ರ ವಿಸರ್ಜನೆ ತೊಂದರೆಗಳು (ಃಕಉೂ), ಇತರೆ ಕಿಡ್ನಿ ಸಮಸ್ಯೆಗಳು(ಅರ್ಹ ಬಿಪಿಎಲ್ ಪಲಾನುಭವಿಗಳಿಗೆ ಉಚಿತ ಶಸ್ತ್ರ ಚಿಕಿತ್ಸೆ ಮಾಡಿಕೊಡಲಾಗುವುದು.)

### ವಿಶೇಷ ಸೂಚನೆಗಳು

ಆಧಾರ್ ಕಾರ್ಡ್, ಬಿ.ಪಿ.ಎಲ್. ಅಥವಾ ಎ.ಪಿ.ಎಲ್. ಕಾರ್ಡ್ ತರುವುದು ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದ ಶಿಬಿರಾರ್ಥಿಗಳಿಗೆ ಔಷಧಿಗಳು, ಕಣ್ಣಿನಲ್ಲಿ ಅಳವಡಿಸುವ ಲೆನ್ಸ್, ಊಟ ವಸತಿ ಹಾಗೂ ಕೊಯಮತ್ತೂರಿನ ಅರವಿಂದ ಆಸ್ಪತ್ರೆಗೆ ಹೋಗಿ ಬರಲು ಉಚಿತ ಬಸ್ ವ್ಯವಸ್ಥೆ ಏರ್ಪಡಿಸಲಾಗಿದೆ. ಈ ಸದಾವಕಾಶವನ್ನು ತಪ್ಪದೇ ಬಳಸಿಕೊಳ್ಳುವುದು ಶ್ರವಣ ದೋಷಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಚಿಕಿತ್ಸೆ ಅಗತ್ಯ ಕಂಡುಬಂದಲ್ಲಿ ಮೈಸೂರಿನ ರೆಜೋನೆನ್ಸ್ ವಾಕ್ ಮತ್ತು ಶ್ರವಣ ಸಂಸ್ಥೆ ಮೈಸೂರು ಇಲ್ಲಿಗೆ ಕಳುಹಿಸಿ ಉಚಿತ ಚಿಕಿತ್ಸೆ ಕೊಡಿಸಲಾಗುವುದು. ಕಿಡ್ನಿಗೆ ಸಂಬಂಧಿಸಿದ ಹೆಚ್ಚಿನ ಚಿಕಿತ್ಸೆ (ಶಸ್ತ್ರ ಚಿಕಿತ್ಸೆ) ಅಗತ್ಯ ಕಂಡು ಬಂದಲ್ಲಿ ಮೈಸೂರಿನ ಇನ್ಸಿಟ್ಯೂಟ್ ಆಫ್ ನೆಫ್ರೋಯುರಾಲಜಿ ಇಲ್ಲಿ ಉಚಿತ ಚಿಕಿತ್ಸೆ ಮಾಡಿಸಿ ಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಎಂ.ಮಹೇಶ್ –9964423580, ಅಜಯ್ ಶಂಭು– 9845939835, ಡಿ.ಎಸ್.ಗಿರೀಶ್–9538533818, ಸಯ್ಯದ್ ಇಸ್ಮಾಯಿಲ್–9036171751, ಸಿದ್ದರಾಜು ಕೆ.ಬಿ. 6364167254, ಮಧುಸೂದನ್ 9945396077 ಸಂಪರ್ಕಿಸಬಹುದು ಎಂದು ಪತ್ರಿಕಾಪ್ರಕಟಣೆಯಲ್ಲಿ ಕೋರಲಾಗಿದೆ.

## ನಂಜದೇವನಪುರದಲ್ಲಿ ಡ್ರೋನ್ ಮೂಲಕ ಹುಲಿ ಪತ್ತೆಗೆ ಕಾರ್ಯಾಚರಣೆ : ನಿಷೇಧಾಜ್ಞೆ ಜಾರಿ

ಚಾಮರಾಜನಗರ, ತಾಲೂಕಿನ ನಂಜದೇವನಪುರದಲ್ಲಿ ಸಿಸಿ ಕ್ಯಾಮರಾದಲ್ಲಿ ಐದು ಹುಲಿಗಳು ಸೆರೆಯಾದ ಹಿನ್ನೆಲೆಯಲ್ಲಿ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಾಧಿಕಾರಿಗಳು ಡ್ರೋನ್ ಮೂಲಕ ಹುಲಿ ಪತ್ತೆ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಕೆಲವು ಕಡೆಯಲ್ಲಿ ಹುಲಿಗಳು ಓಡಾಡಿದ ಗುರುತುಗಳು ಪತ್ತೆಯಾಗಿದೆ ಎಂದು ಹೇಳಲಾಗುತ್ತಿದೆ. ಹುಲಿಗಳು ಓಡಾಡಿರುವ ಹಿನ್ನೆಲೆಯಲ್ಲಿ ಡ್ರೋನ್ ಮೂಲಕ ಕಾರ್ಯಾಚರಣೆ ಆರಂಭಿಸಲಾಗಿದ್ದು, ಹುಲಿಗಳ ಸೆರೆಗೆ ಅರಣ್ಯ ಇಲಾಖೆ ಸಿಬ್ಬಂದಿ ಹರಸಾಹಸ ಪಡುತ್ತಿದ್ದಾರೆ.

ನಂಜದೇವನಪುರ ಗ್ರಾಮ ಮತ್ತು ಅಕ್ಕ ಪಕ್ಕದ ಗ್ರಾಮಗಳಾದ ವೀರನಪುರ, ಉಡಿಗಾಲ ಗ್ರಾಮಗಳ ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಇಂದಿನಿಂದ ಡಿ.23 ರ ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ವರೆಗೆ ತಹಶೀಲ್ದಾರ್ ಗಿರಿಜಾ ನಿಷೇದಾಜ್ಞೆ ಜಾರಿ ಮಾಡಿದ್ದಾರೆ.

# 5 ಹುಲಿ ಸೆರೆಗೆ ಎರಡು ಸಾಕಾನೆ ಎಂಟ್ರಿ: ಸಿಎಂಗೆ ಸಮಸ್ಯೆ ತಿಳಿಸಿದ ಶಾಸಕ

ಚಾಮರಾಜನಗರ: ನಂಜೇದೇವನಪುರ ಗ್ರಾಮದ ಕಲ್ಲು ಕ್ವಾರಿಯೊಂದರಲ್ಲಿ 5 ಹುಲಿಗಳ ಇರುವಿಕೆ ಡ್ರೋಣ್??ನಲ್ಲಿ ಸೆರೆಯಾಗಿದ್ದು, ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದಾರೆ.

ಹುಲಿ ಪತ್ತೆಯಾದ ಹಿನ್ನೆಲೆಯಲ್ಲಿ ಬಿಳಿಗಿರಿರಂಗ ನಾಥ ದೇವಾಲಯ ಹುಲಿ ಸಂರಕ್ಷಿತ ಪ್ರದೇಶದ ಚಾಮರಾಜನಗರ ಬಫರ್ ವಲಯ ಅಧಿಕಾರಿಗಳು ಕೂಂಬಿಂಗ್ ತೀವ್ರಗೊಳಿಸಿದ್ದಾರೆ.

ಕಾರ್ಯಾಚರಣೆಗಾಗಿ ಮೂರು ಊರಲ್ಲಿ ನಿಷೇಧಾಜ್ಞೆ: ನಂಜೇದೇವನಪುರ ಗ್ರಾಮದ ಕುಮಾರ ಸ್ವಾಮಿ ಎಂಬವರ ಜಮೀನಿನಲ್ಲಿ 5 ಹುಲಿ ಓಡಾಟ ಪತ್ತೆಯಾದ ಬಳಿಕ ಸುತ್ತಮುತ್ತಲಿನ ಗ್ರಾಮಸ್ಥರಲ್ಲಿ ಆತಂಕ ಮೂಡಿತ್ತು. ಅಂತೆಯೇ ಅರಣ್ಯ ಇಲಾಖೆ ಕಾರ್ಯಾಚರಣೆ ನಡೆಸುತ್ತಿದ್ದು, ಎರಡು ದಿನ ಮೂರು ಗ್ರಾಮಗಳಲ್ಲಿ ನಿಷೇಧಾಜ್ಞೆ ಹೊರಡಿಸಿ ಚಾಮರಾಜ ನಗರ ತಹಸಿಲ್ದಾರ್ ಗಿರಿಜಾ ಆದೇಶಿಸಿದ್ದಾರೆ.

**ಸಿಎಂಗೆ ಕರೆ ಮಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ:**

ಹುಲಿ ಕಾರ್ಯಾಚರಣೆ ಹಿನ್ನೆಲೆಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ನಂಜೇದೇವನಪುರಕ್ಕೆ ಭೇಟಿ ನೀಡಿ, ಖುದ್ದು ಪರಿಶೀಲನೆ ನಡೆಸಿದರು. 5 ಹುಲಿಗಳಿರುವ ಹಿನ್ನೆಲೆಯಲ್ಲಿ ಸೆರೆ ಹಿಡಿಯುವುದು ಕಷ್ಟವಾಗಲಿದೆ. ಈ ಹಿನ್ನೆಲೆಯಲ್ಲಿ ಆನೆಗಳನ್ನು ಬಳಸಿಕೊಂಡು ಹುಲಿಗಳನ್ನು ಕಾಡಿಗೆ ಓಡಿಸುವ ಕೆಲಸ ಮಾಡುತ್ತೇವೆಂಬ ಅರಣ್ಯ ಇಲಾಖೆ ಮಾತಿಗೆ ರೈತರು ವಿರೋಧ ವ್ಯಕ್ತಪಡಿಸಿದ್ದಾರೆ. ಹುಲಿಗಳನ್ನು ಕಾಡಿಗೆ ಅಟ್ಟಬಾರದು, ಸೆರೆ ಹಿಡಿಯಬೇಕೆಂದು ರೈತರು ಒತ್ತಾಯಿಸಿದರು. ರೈತರ ಸಮಸ್ಯೆ ಆಲಿಸಿದ ಬಳಿಕ ಶಾಸಕ ಪುಟ್ಟರಂಗಶೆಟ್ಟಿ ಸಿಎಂ ಸಿದ್ದರಾಮಯ್ಯಗೆ ಕರೆ ಮಾಡಿ ನಂಜದೇವನಪುರದಲ್ಲಿ 5 ಹುಲಿ ಪ್ರತ್ಯಕ್ಷವಾದ ಬಳಿಕ ಜನರು ತೀರಾ ಆತಂಕಕ್ಕೆ ಒಳಗಾಗಿದ್ದಾರೆ. ಹೆಚ್ಚುವರಿ ವೈದ್ಯರು ಹಾಗೂ ತಜ್ಞರನ್ನು ಕಳುಹಿಸುವಂತೆ ಮನವಿ ಮಾಡಿದರು.



ಶಾಸಕ ಪುಟ್ಟರಂಗಶೆಟ್ಟಿ ಮಾತಿಗೆ ಸಹಮತ ವ್ಯಕ್ತಪಡಿಸಿದ. ಮುಖ್ಯ ಮಂತ್ರಿ ಸಿದ್ದರಾಮಯ್ಯ, ಈಗಲೇ ಅರಣ್ಯ ಸಚಿವರ ಜೊತೆ ಮಾತನಾಡುತ್ತೇನೆಂದು ಭರವಸೆ ನೀಡಿದ್ದಾರೆ. ಸಿಎಂ ಜೊತೆ ಮಾತನಾಡಿದ ಬಳಿಕ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೂ ಕರೆ ಮಾಡಿ ಶಾಸಕರು ಸಮಸ್ಯೆ ಹೇಳಿದರು. ಆಗ ಸಚಿವರು, ಕೂಡಲೇ ಒಂದು ಟೀಂ ಕಳುಹಿಸಿ ಕೊಡುವುದಾಗಿ ಭರವಸೆ ನೀಡಿದರು. ಎರಡು ಆನೆ ಆಗಮನ: ಕಾರ್ಯಾಚರಣೆಗಾಗಿ ಈಶ್ವರ ಹಾಗೂ ಲಕ್ಷ್ಮಣ ಆನೆಗಳನ್ನು ತರಲಾಗಿದ್ದು, ಸಂಜೆ ಬಳಿಕ ಮತ್ತೊಂದು ಹಂತದ ಕೂಂಬಿಂಗ್ ನಡೆಸಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

# ಎಲ್ಲಾ ಕ್ಷೇತ್ರಗಳಲ್ಲೂ ರಾಜ್ಯದವರು ಸಾಧನೆ ಮಾಡಲಿ

## ನಿತೇಶ್ ಪಾಟೀಲ್ । ಸಾಧಕರಿಗೆ ಸನ್ಮಾನ ಸಮಾರಂಭ

ಮೈಸೂರು: ಎಲ್ಲಾ ಕ್ಷೇತ್ರಗಳಲ್ಲೂ ಮೈಸೂರಿನವರು ಹಾಗೂ ರಾಜ್ಯದವರು ಇನ್ನೂ ಹೆಚ್ಚಿನ ಸಾಧನೆ ಮಾಡಬೇಕು ಎಂದು ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್ ಆಶಿಸಿದರು.

ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ, ನವ ವಿಶ್ವಮಾನವ ಟ್ರಸ್ಟ್ ವತಿಯಿಂದ ಮಾನಸ ಗಂಗೋತ್ರಿ ಇಎಂಆರ್‌ಸಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಲಲಿತಕಲಾ ಕಾಲೇಜಿನ ಪ್ರಾಂಶುಪಾಲೆ ಪ್ರೊ.ಅನಿಟ ವಿಮಲ ಬ್ರ್ಯಾಗ್ಸ್ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಸಾಧನೆ ಮಾಡಲು ಸಾಕಷ್ಟು ಸೌಲಭ್ಯಗಳಿವೆ. ಅದನ್ನು ಸದುಪಯೋಗ ಮಾಡಿಕೊಳ್ಳಬೇಕು. ಸಾಧಕರನ್ನು ಗುರುತಿಸಿ, ಗೌರವಿಸುವುದು ಒಳ್ಳೆಯದು. ಅವರು ಇನ್ನೂ ಹೆಚ್ಚಿನ ಸಾಧನೆ ಮಾಡಲು ಇದರಿಂದ ಉತ್ತೇಜನ ಸಿಗುತ್ತದೆ ಎಂದು ಅವರು ಹೇಳಿದರು.

ವಯೋನಿವೃತ್ತಿ ಹೊಂದುತ್ತಿರುವ ಪ್ರೊ.ಅನಿಟ ವಿಮಲ ಬ್ರ್ಯಾಗ್ಸ್ ಅವರು ಮಹಾರಾಜ, ಲಲಿತ ಕಲಾ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಅದರಲ್ಲೂ ಇಂಗ್ಲಿಷ್ ಪ್ರಾಧ್ಯಾಪಕರಾಗಿ 38 ವರ್ಷಗಳ ಕಾಲ ಸೇವೆ ಸಲ್ಲಿಸಿ, ಸಹಸ್ರಾರು ವಿದ್ಯಾರ್ಥಿಗಳನ್ನು ತಯಾರು ಮಾಡಿದ್ದಾರೆ ಎಂಬುದನ್ನು ತಿಳಿದು ಸಂತಸವಾಯಿತು ಅವರ ನಿವೃತ್ತಿಯ ಜೀವನ ಆರೋಗ್ಯದಿಂದ ಕೂಡಿರಲಿ. ಸಮಾಜಕ್ಕೆ ಇನ್ನೂ ಹೆಚ್ಚಿನ ಸೇವೆ ಸಲ್ಲಿಸಲಿ ಎಂದು ಹಾರೈಸಿದರು.




ವಿವಿ ಹಣಕಾಸು ಅಧಿಕಾರಿ ಕೆ.ಎಸ್.ರೇಖಾ, ಗಾಂಧಿ ಭವನ ಹಾಗೂ ಪ್ರಾಚ್ಯ ವಿದ್ಯಾ ಸಂಶೋಧನಾಲಯ ನಿವೃತ್ತ ನಿರ್ದೇಶಕ ಪ್ರೊ. ಎಸ್.ಶಿವರಾಜಪ್ಪ, ಸಿಂಡಿಕೇಟ್ ಸದಸ್ಯ ಮಹದೇಶು, ಪ್ರಾಧ್ಯಾಪಕರಾದ ಡಾ.ಎಂ.ಎಸ್.ಸಪ್ನಾ, ಡಾ.ಎಚ್.ಪಿ.ಜ್ಯೋತಿ ಮಾತನಾಡಿದರು. ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ವೇದಿಕೆ ಅಧ್ಯಕ್ಷ ಆರ್. ವಾಸುದೇವ, ಕಾರ್ಯದರ್ಶಿ ವಿನೋದ್ ಸೇರಿ ಇತರರು ಇದ್ದರು. ಅಮ್ಮ ರಾಮಚಂದ್ರ ಗೀತಗಾಯನ ನಡೆಸಿಕೊಟ್ಟರು. ಡಾ.ಬಿ.ಎಸ್. ದಿನಮಣಿ ಸ್ವಾಗತಿಸಿದರು. ಮಲ್ಲೈ ಮಹದೇಶ್ವರಸ್ವಾಮಿ ವಂದಿಸಿದರು. ಮಂಜುನಾಥ್ ಸುಬೇದಾರ್ ಕಾರ್ಯಕ್ರಮ ನಿರೂಪಿಸಿದರು.


ಸನ್ಮಾನಿತರು: ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ವಿಜ್ಞಾನಿ ಡಾ.ಎಸ್. ಶ್ರೀಕಂಠಸ್ವಾಮಿ, ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ.ಎಂ.ಬಿ. ಸುರೇಶ್, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ.ವಿಜಯಲಕ್ಷ್ಮೀ ಮನಾಪುರ, ಡಾ.ಬಿ.ಕೆ. ಜ್ಞಾನಪ್ರಕಾಶ್, ಶಿಕ್ಷಣ ಮಂಡಳಿ ಸದಸ್ಯ ಸುರೇಶ್ ಪಾಳ್ಯ, ತಿಮ್ಮಯ್ಯ ಹಾಗೂ ಮೈವಿವಿ ಕ್ರೀಡಾ ವಿಭಾಗದ ಅಧಿಕಾರಿ ಬಿ.ಎಸ್. ರವಿ ಅವರನ್ನು ಸನ್ಮಾನಿಸಲಾಯಿತು. ವಿವಿಧ ಕ್ರೀಡಾ ಸ್ಪರ್ಧೆ ವಿಜೇತರಾದ ಪಿ. ಶಶಿಧರ್, ಎನ್. ಪ್ರಜ್ವಲ್, ಎಚ್.ಎನ್. ಚರಣ್, ದರ್ಶನ್ ಎಸ್. ಬೆಳಕೇರಿ, ಎಸ್.ಕೆ. ಚಲುವರಾಜು, ಆರ್. ಮಹೇಶ್,. ಎಸ್.ಸಿ. ಸಾತ್ವಿಕ್, ಪ್ರತೀಕ್ ಎಸ್. ಪಾಟೀಲ್, ಟಿ.ಎಸ್. ಪವನ್, ಸಿ. ಆದಿತ್ಯ, ವೈ. ಪೃಥ್ವಿರಾಜ್, ಕೆ.ಆರ್. ಸುಭಾಷ್, ಕೆ.ಎಸ್. ರಕ್ಷಿತಾ, ಎಂ. ಅಮೂಲ್ಯ, ಎಸ್. ನಾಗಶ್ರೀ, ಎಂ. ಹಂಸ, ಚಂದನ ಗದ್ದಿ, ಎಸ್.ಎಂ. ನಂದಿನಿ, ಎ. ಪೃಥಿವ್, ಎನ್.ಸಿ. ಕೀರ್ತನಾ, ಐಶ್ವರ್ಯ, ಬಿ.ಸಿ. ನಯನಾ ಅವರನ್ನು ಸನ್ಮಾನಿಸಲಾಯಿತು. ಇದಲ್ಲದೇ ಯುವರಾಜ ಕಾಲೇಜಿನ ಎನ್‌ಎಸ್‌ಎಸ್, ಎನ್‌ಸಿಸಿ ಕೆಡೆಟ್‌ಗಳನ್ನು ಕೂಡ ಅಭಿನಂದಿಸಲಾಯಿತು.

## ಗುಂಡ್ಲುಪೇಟೆ ಹುಲಿ ಸೆರೆ: ನಿಟ್ಟುಸಿರು ಬಿಟ್ಟ ಗ್ರಾಮಸ್ಥರು

ಚಾಮರಾಜನಗರ, ಮುಕ್ತಿ ಕಾಲೋನಿ ಗ್ರಾಮದ ಸುತ್ತ ಮುತ್ತಲಿನಲ್ಲಿ ಹಲವು ದಿನಗಳಿಂದ ಓಡಾಡುತ್ತಿದ್ದ ವ್ಯಾಘ್ರ ಭಾನುವಾರ ಬಲೆಗೆ ಬಿದ್ದಿದೆ. ತೀವ್ರ ಆತಂಕದಲ್ಲಿದ್ದ ಗ್ರಾಮಸ್ಥರು ಇದೀಗ ನೆಟ್ಟುಸಿರು ಬಿಟ್ಟಿದ್ದಾರೆ.

ತಾಲ್ಲೂಕಿನ ಮುಕ್ತಿ ಕಾಲೋನಿ ಗ್ರಾಮದ ಜಮೀನೊಂದರ ಬಾಳೆ ತೋಟದಲ್ಲಿ ಹುಲಿ ಅಡಗಿಕೊಂಡಿದ್ದು, ಸ್ಥಳೀಯ ಜನಸಾಮಾನ್ಯರು ಹುಲಿಯನ್ನು ಕಂಡು ಕೂಗಾಡಿ ಪಟಾಕಿ ಸಿಡಿಸಿದ್ದರು ಆದರೂ ಸಹ ಹುಲಿ ಬಾಳೆ ತೋಟ ಬಿಟ್ಟು ಹೋಗಲಿಲ್ಲ. ಹಾಗಾಗಿ ಹುಲಿ ಗಾಯಗೊಂಡಿರಬಹುದು ಎಂಬ ಬಗ್ಗೆ ಅನುಮಾನ ವ್ಯಕ್ತವಾಗಿತ್ತು. ಇದರಿಂದ ಆಶ್ಚರ್ಯಗೊಂಡ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ತಿಳಿಸಿದರು.

ತಕ್ಷಣ ಅರಣ್ಯ ಅಧಿಕಾರಿಗಳು, ವೈದ್ಯರು ಹಾಗೂ ಸಿಬ್ಬಂದಿಗಳೊಂದಿಗೆ ಸ್ಥಳಕ್ಕೆ ಆಗಮಿಸಿದರು. ಬಾಳೆ ತೋಟದಲ್ಲಿ ಹುಲಿ ಇರುವಂತಹ ಸುದ್ದಿ ತಿಳಿಯುತ್ತಿದ್ದಂತೆ ಗ್ರಾಮಸ್ಥರು ಸಾರ್ವಜನಿಕರು ಓಡೋಡಿ ಬಂದರು. ಕಾರ್ಯಚರಣೆ ಮಾಡುವ ವರೆಗೂ ಜನ ಸಾಮಾನ್ಯರು ದೂರವಿರುವಂತೆ ಅರಣ್ಯಾದಿಕಾರಿಗಳು ತಿಳಿಸಿದ್ದು, ಅದರಂತೆ ಗ್ರಾಮಸ್ಥರ ಸಹಕಾರದೊಂದಿಗೆ ಹುಲಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಬಳಿಕ ತಾಲೂಕಿನ ಮುಕ್ತಿ ಕಾಲೋನಿಯ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ನಿವಾಸಿಗಳು ನಿಟ್ಟುಸಿರು ಬಿಟ್ಟಿದ್ದಾರೆ.



## ಜಲಾನಯನ ಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ

ಗುಂಡ್ಲುಪೇಟೆ: ಕೃಷಿ ಇಲಾಖೆಯಿಂದ ಜಲಾನಯನ ಅಭಿವೃದ್ಧಿ ಘಟಕ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಲ್ಲಿ ಜಮೀನಿನಲ್ಲಿ ಮಣ್ಣು ಸವೆತ ತಡೆಗಟ್ಟವಿಕೆ ನೀರಿನ ಅಂತರ್ಜಲಮಟ್ಟ ಹೆಚ್ಚಳ ಮಾಡುವ ಉದ್ದೇಶದಿಂದ ಗುಂಡ್ಲುಪೇಟೆ ಅಪಾಯ ಮಟ್ಟದಲ್ಲಿ ಅಂತರ್ಜಲ ಮಟ್ಟ ಕಡಿಮೆ ವಿದ್ದು ಇದನ್ನು ಹೆಚ್ಚಳ ಮಾಡುವ ಉದ್ದೇಶದಿಂದ ಕಂದಕಗಳ ನಿರ್ಮಾಣ, ಬದು ನಿರ್ಮಾಣ, ಕೃಷಿ ಹೊಂಡ, ಮಳೆನೀರಿನ ಕೋಯ್ಲು ನೈಸರ್ಗಿಕ ಮಳೆ ನೀರು ತಡೆದಿಟ್ಟುಕೊಳ್ಳಲು ನೀರು ಮತ್ತು ಮಣ್ಣಿನ ಸ್ವಾಭಾವಿಕ ಸಂರಕ್ಷಣೆ ವಿಚಾರವಾಗಿ ಜಲಾನಯನ ಮಹೋತ್ಸವ ಕಾರ್ಯಕ್ರಮಕ್ಕೆ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಚಾಲನೆ ನೀಡಿದರು.

ನಂತರ ಮಾತನಾಡಿ ಮಳೆ ಬಂದರೆ ಅನುಕೂಲ ಎನ್ನುತ್ತೇವೆ ಆದರೆ ಮಳೆ ಬಂದರೆ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗುತ್ತದೆ ಎಂಬ ಅರಿವು ಮೂಡಿಸುವ ಕಾರ್ಯಕ್ರಮ ರೈತರಿಗೆ ಬರೀ ಬಿತ್ತನೆ ಬೀಜ ಯಂತ್ರೋಪಕರಣಗಳನ್ನುನೀಡುವ ಜೊತೆಗೆ ವಿಶೇಷವಾಗಿ ಇಂತಹ ಕಾರ್ಯಕ್ರಮಮಾಡಿದಾಗ ರೈತರಿಗೆ ಭೂಮಿಯ ಫಲವತ್ತತೆ ಹೇಗೆ ಕಾಪಾಡಿಕೊಳ್ಳಬೇಕು ಎಂಬ ಅರಿವು ಮೂಡುತ್ತದೆ ಎಂದರು.

ಐಸಿಐಸಿ ಬ್ಯಾಂಕ್ ನವರು ಸಹ ಈ ಭಾಗದ ಕಾಡಂಚಿನ ಭಾಗದ ಶಾಲೆಗಳಿಗೆ ಡೆಸ್ಕ್ ಮತ್ತಿತರ ವಸ್ತುಗಳ ಕೊಡುಗೆ ನೀಡುತಿದ್ದಾರೆ, ವಿಶೇಷವಾಗಿ ಗುಂಡ್ಲುಪೇಟೆ ಬರಪೀಡಿತ ಪ್ರದೇಶ, ಹಂತ ಹಂತವಾಗಿ 2012 ರಿಂದ ಕೆರೆ ತುಂಬಿಸುವ ಯೋಜನೆಗಳು ನಡೆಯುತಿದ್ದು ಕೆರೆ ತುಂಬಿಸುವ ಯೋಜನೆಯಲ್ಲಿಮೋಟರ್ ಕೆಟ್ಟ ಕಾರಣ ಕೆಲದಿನನೀರು ಬಂದಿಲ್ಲ ಎಂಬ ಆರೋಪವಿದೆ ಅದರೆ ಮನುಷ್ಯಮಾಡಿರುವ ಮೋಟರ್ ಎಂದಾಗ ಕೆಡುವುದು ಸಹಜ, ಅದು ರಿಪೇರಿ ಮಾಡಲು ಸಮಯ ಬೆಕಾಗುತ್ತದೆ ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಸುಷ್ಮಾ , ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶಶಿಧರ್, ಹಿರಿಯ ವಿಜ್ಞಾನಿಗಳು ಪಂಪಣಗೌಡ, ಸೇರಿದಂತೆ ಮತ್ತಿತರರಿದ್ದರು.




## ಧ.ಗ್ರಾ.ಯಿಂದ ಆರ್ಥಿಕ ಶಕ್ತಿ ಜೊತೆ ವ್ಯಕ್ತಿತ್ವ ವಿಕಸನ

ಹಾಸನ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೆ ಕೂಡ ಸಹಕಾರಿಯಾಗಿದೆ ಎಂದು ಧಾರ್ಮಿಕ ದತ್ತಿ ಇಲಾಖೆ ತಹಶೀಲ್ದಾರ್ ಲತಾ ಎಂ. ಎಚ್ ತಿಳಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ ನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಇಂದು ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ನಡೆದ ತಾಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಹಿಳೆಯರು ಸ್ವಾವಲಂಬಿಯಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪೂರಕ ಶಕ್ತಿ ನೀಡುತ್ತಿದೆ, ಸ್ವಸಹಾಯ ಸಂಘಗಳ ಸ್ಥಾಪನೆ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಿ ಆ ಮೂಲಕ ಮಹಿಳೆಯರ ಬದುಕು ಹಸನಾಗಿಸಲು ಹತ್ತು ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದರು. ದೇವಾಲಯಗಳ ಅಭಿವೃದ್ಧಿ, ಕೆರೆ ಅಭಿವೃದ್ಧಿ, ಮೂಲಕ ಸರ್ಕಾರದ ಜೊತೆಗೆ ಸಂಘಗಳನ್ನು ಸ್ಥಾಪಿಸಿಕೊಂಡು ಅಪಾರ ಜನಮನ್ನಣೆ ಗಳಿಸಿದೆ ಎಂದರು.

ಶಿವ್ಯ ಹಾಸ್ಪಿಟಲ್ ನ ಸ್ತ್ರೀರೋಗ ತಜ್ಞೆ ಡಾ. ಭವ್ಯ ಮಾತನಾಡಿ, ಮಹಿಳೆಯರಲ್ಲಿ ಹೆಚ್ಚಾಗಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವುದರಿಂದ ಅವರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ಅಗತ್ಯವಿದೆ. ಪ್ರಮುಖವಾಗಿ ಮಹಿಳೆಯರಲ್ಲಿ ಮುಟ್ಟು, ಸಂತಾನೋತ್ಪತ್ತಿ, ಅತಿಯಾದ ತೂಕ, ಚರ್ಮದಲ್ಲಿನ ಖಾಯಿಲೆಗಳು ಇದಕ್ಕೆಲ್ಲ ಪಿಸಿಓಡಿ ಕಾರಣ, ಸರಿಯಾದ ಜೀವನ ಶೈಲಿ, ದೈಹಿಕ ಚಟುವಟಿಕೆ ಹಾಗೂ ಗುಣಮಟ್ಟದ ಆಹಾರ ಸೇವನೆಯಿಂದ ಇಂತಹ ಸಮಸ್ಯೆಗಳಿಗೆ ಕಡಿವಾಣ ಹಾಕಬಹುದು ಎಂದು ಸಲಹೆ ನೀಡಿದರು. ಪ್ರತಿಯೊಬ್ಬರೂ ದಿನನಿತ್ಯ ತಮ್ಮ ಜೀವನದಲ್ಲಿ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ತಮ್ಮ ಆರೋಗ್ಯ ರಕ್ಷಣೆ ಸಾಧ್ಯ, ಇತ್ತೀಚಿನ ದಿನಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಹಾಗೂ ಸ್ತನ ಕ್ಯಾನ್ಸರ್ ಸಂಖ್ಯೆ ಹೆಚ್ಚಾಗಿದೆ ಹಾಗಾಗಿ ಅದಕ್ಕಾಗಿ ಕೆಲವು ತಪಾಸಣೆ ಹಾಗೂ ಚಿಕಿತ್ಸೆ ಲಭ್ಯವಿದೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು. ಮಹಾನಗರ ಪಾಲಿಕೆಯ ಮಾಜಿ ಉಪ ಮೇಯರ್ ಹೇಮಲತಾ ಕಮಲ್ ಕುಮಾರ್, ತಾಲೂಕು ಯೋಜನಾಧಿಕಾರಿ ಧನಂಜಯ್, ಗ್ರಾಮ ಸಮನ್ವಯ ಅಧಿಕಾರಿ ಸರಸ್ವತಿ, ಮಹಾನಗರ ಪಾಲಿಕೆಯ ಮಾಜಿ ಉಪ ಮೇಯರ್ ಹೇಮಲತಾ ಕಮಲ್ ಕುಮಾರ್, ತಾಲೂಕು ಯೋಜನಾಧಿಕಾರಿ ಧನಂಜಯ್, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸರಸ್ವತಿ. ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು



## ಕರವೇ ವತಿಯಿಂದ ಕನ್ನಡರಾಜ್ಯೋತ್ಸವ



ಗುಂಡ್ಲುಪೇಟೆ: ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ 70 ನೇ ಕನ್ನಡರಾಜ್ಯೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು

ಪಟ್ಟಣದ ಹಳೆಯ ಪ್ರವಾಸಿ ಮಂದಿರ ವೃತ್ತದಲ್ಲಿ ಮಾಜಿ ಶಾಸಕ ಹಾಗೂ ಜಿಲ್ಲಾಧ್ಯಕ್ಷ ಸಿ ಎಸ್ ನಿರಂಜನ್ ಕುಮಾರ್ ತಾಯಿ ಭುವನೇಶ್ವರಿ ಇರುವ ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ ಅವರು

ನಮ್ಮ ಕನ್ನಡ ನಾಡು ಶ್ರೇಷ್ಠ ಸಂಸ್ಕೃತಿ ಮತ್ತು ಪರಂಪರೆಯನ್ನು ಹೊಂದಿದೆ. ಈ ನಾಡನ್ನು ಮತ್ತು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕಾಗಿದೆ. ಎಲ್ಲರೂ ಕನ್ನಡವನ್ನು ಹೆಚ್ಚೆಚ್ಚು ಬಳಕೆ ಮಾಡಿ ಅದರ ಅಸ್ತಿತ್ವವನ್ನು ಕಾಪಾಡಬೇಕಾಗಿದೆ ಎಂದು ಕರೆ ನೀಡಿದರು. ವಿವಿಧ ಕಲಾ ತಂಡಗಳಿಂದ ತಾಯಿ ಭುವನೇಶ್ವರಿ ರಥೋತ್ಸವ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿತ್ತು

ಮೈಸೂರ್ ಜಿಲ್ಲಾ ಅಧ್ಯಕ್ಷ ಪ್ರವೀಣ್ ಕುಮಾರ್ ಹಾಗೂ ಮೈಸೂರು ನಗರ ಅಧ್ಯಕ್ಷರು ಲೋಕೇಶ್ ಚಾ ? ನಗರ ಜಿಲ್ಲಾಧ್ಯಕ್ಷ ಮಂಜೇಶ್ ಜಿಲ್ಲಾ ಉಪಾಧ್ಯಕ್ಷ ರಾಜೇಂದ್ರ ವಿ ನಾಯಕ ತಾ? ರಮೇಶ್ ನಾಯಕ್ ಅಧ್ಯಕ್ಷರ ಗೌರವ ಅಧ್ಯಕ್ಷ ಮಾಧು ನಾಯಕ್ ಶಿವಮೂರ್ತಿ. ಪಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ನಾಗರಾಜು ಹೊಸೂರ್ ಗುಂಡ್ಲು ಪೇಟೆ ಹೋಬಳಿ ಅಧ್ಯಕ್ಷ ಚೆನ್ನನಾಯಕ್ ಸ್ವಾಮಿ ನಾಗೇಂದ್ರ ಕಾರ್ತಿಕ್ ಗೌಡ ಯುವಘಟಕ ಮೋನಿಶ್ ಶ್ರೀನಿವಾಸ್. ವಸಂತ ಸತೀಶ್ ಕಷ್ಣೇಗೌಡ ಜವರ ಶೆಟ್ಟಿ ಯೋಗಿ ಮಹದೇವ ಹಾಗೂ ಆಟೋ ಚಾಲಕರು ಹಾಗೂ ಕಾರ್ಯಕರ್ತರು ಇನ್ನು ಇತರರಿದ್ದರು.

### ಬೋವಿ ಜನಾಂಗದ ರೈತರ ಜಮೀನು ಅಕ್ರಮ

## ಕಬಳಿಕೆ ರದ್ದು ಮಾಡುವಂತೆ ಅಹೋರಾತ್ರಿ ಧರಣಿ

ಗುಂಡ್ಲುಪೇಟೆ: ತಾಲೂಕಿನ ಹಂಗಳ ಹೋಬಳಿಯ ಕಣಿಯನಪುರ ಕಾಲೋನಿಯ ಬೋವಿ ಸಮುದಾಯದ ಆರು ಬಡ ರೈತರ ಜಮೀನನ್ನು ಅಕ್ರಮವಾಗಿ ಖಾತೆ ಮಾಡಿಸಿಕೊಂಡಿದ್ದು ಸರ್ಕಾರ ನೀಡಿರುವ ಸಾಗುವಳಿ ಜಮೀನು ಕೊಳ್ಳುವ ಮಾರುವ ಅವಕಾಸ ಇಲ್ಲದಿದ್ದರು ಅಧಿಕಾರಿಗಳು ಖಾತೆ ಮಾಡಿರುವುದು ಸರಿಯಲ್ಲ ಕೂಡಲೆ ರದ್ದುಮಾಡಿ ಬೋವಿ ಸಮುದಾಯದ ಜನರಿಗೆ ಜಮೀನು ನೀಡ ದಿದ್ದರೆ ಪೆಟ್ರೋಲ್ ಸುರಿದು ಕೊಂಡು ಸಾಮೂಹಿಕ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಜಾರಕಿಹೋಳಿ ಬ್ರಿಗೇಡ್ ನ ಸಂಸ್ಥಾಪಕ ಗೋವಿಂದ್ ನಾಯಕ್ ಎಚ್ಚರಿಕೆ ನೀಡಿದರು.



ಬೋವಿ ಜನಾಂಗದ ನಿವಾಸಿಗಳಾದ ನಟರಾಜು, ಪಾಪಮ್ಮ ,ದೋರ, ಚಿನ್ನರಾಜು, ಕುಮಾರ ಬೋವಿ, ಮಾರಬೋಯಿ, ಚಿಕ್ಕ ಗೋವಿಂದ, ಎಂಬುವವರಿಗೆ ಸರ್ಕಾರ 1977–78 ರಲ್ಲಿ ಜಕ್ಕಹಳ್ಳಿ ಎಲ್ಲೆಯ ಸರ್ವೆ ನಂ 45 ರಲ್ಲಿ ಸಾಗುವಳಿ ಪತ್ರ ನೀಡಲಾಗಿತ್ತು, ಇವುಗಳ ಹೊಸ ಸರ್ವೆ ನಂಬರ್ 113, 114,116,117,118, 121 ಆಗಿದ್ದು, ಈ ಸರ್ವೆ ನಂಬರಿನ ಜಮೀನಿನ ದಾಖಲಾತಿ ಗಳನ್ನು ಈಗ ಬೆಂಗಳೂರು ಮೂಲದವರ ಹೆಸರಿನಲ್ಲಿ ದಾಖಲಾತಿ ಸೃಷ್ಟಿಸಿ ಅಧಿಕಾರಿಗಳು ಹಾಗೂ ಉದ್ದಿಮೆ ದಾರರು ಮುಂದಾಗಿದ್ದು, ಇದಕ್ಕೆ ಪೂರಕವಾಗಿ ದಾಖಲಾತಿ ಗಳನ್ನು ಸೃಷ್ಟಿಸಿ ಬೋವಿ ಸಮುದಾಯಕ್ಕೆ ಮೋಸ ಮಾಡಿ ಭೂಮಿಯನ್ನು ಕಬಳಿಸುವಲ್ಲಿ ಸರ್ಕಾರಿ ಅಧಿಕಾರಿಗಳು ಹಾಗೂ ಉದ್ದಿಮೆದಾರರು ಪೂರಕ ದಾಖಲೆ ಸೃಷ್ಟಿಮಾಡಿದ್ದಾರೆ ಸರ್ಕಾರ ನೀಡಿರುವ ಸಾಗುವಳಿ ಬೋವಿ ಸಮುದಾಯಕ್ಕೆ ವಾಪಸ್ಸು ಕೊಡಿಸಬೇಕು ಭೂ ಕಬಳಿಕೆ ಯತ್ನ ಮಾಡಿರುವವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಿಸುವಂತೆ ಒತ್ತಾಯಿಸಿದರು.

ಜಮೀನು ಐವತ್ತು ವರ್ಷದ ಹಿಂದೆ ಸಾಗುವಳಿ ಭೂಮಿ ಯಾಗಿ ಕುಮಾರ ಬೋವಿ, ಚಿನ್ನ ರಾಜು, ಚಿಕ್ಕಗೋವಿಂದಯ, ಪೊನ್ನ ಬೋವಿ, ನಟರಾಜು, ಮಾರಬೋವಿ ಎಂಬುವವರ ಜಮೀನನ್ನು ಪಿಟಿಷಿಯಲ್ ಆಕ್ಟ್ ಕಾಯ್ದೆಯಲ್ಲಿ ಸರ್ಕಾರ ನೀಡಿದೆ ಅದರೆ ಇಷ್ಟುವರ್ಷ ವ್ಯವಸಾಯ ಮಾಡುತ್ತಿರುವ ಬೋವಿ ಸಮಾಜದ ರೈತರ ಜಮೀನಿಗೆ ಅತಿಕ್ರಮವಾಗಿ ಬೆಂಗಳೂರು ಮೂಲದ ವ್ಯಕ್ತಿ ನಮ್ಮದು ಜಮೀನು ಎಂದು ಪ್ರವೇಶಿಸಿ ಜೆಸಿಬಿ ತಂದು ಕೆಲಸ ಮಾಡುತಿದ್ದಾರೆ ಎಂದು ಪತ್ರಿಕಗೋಷ್ಠಿ ಯಲ್ಲಿ ಜಾರಕಿಹೋಳಿ ಬ್ರಿಗೇಡ್ ಸಂಸ್ಥಾಪಕ ಗೋವಿಂದ ನಾಯಕ್ ಹಾಗೂ ಸಂತ್ರಸ್ತ ರೈತರು ಆರೋಪಿಸಿದರು. ಈ ಸಂದರ್ಭದಲ್ಲಿ ಜಾರಕಿಹೋಳಿ ಬ್ರಿಗೇಡ್ ಸಂಸ್ಥಾಪಕ ಗೋವಿಂದ ನಾಯಕ್, ಮಾನವ ಬಂದುತ್ವ ವೇದಿಕೆ ಜಿಲ್ಲಾ ಚಾಲಕ ಮಾಡ್ರಹಳ್ಳಿ ಸುಭಾಷ್, ಮುತ್ತಣ್ಣ, ಕರವೇ ಜಿಲ್ಲಾಧ್ಯಕ್ಷ ರಾಜೇಂದ್ರ, ಉಮೇಶ್ ಮಂಗಲ, ಮತ್ತಿತರರಿದ್ದರು.

# 5 ವರ್ಷದಲ್ಲಿ 3 ಲಕ್ಷ ಕೋಟಿ ಹಣವನ್ನು ಗ್ಯಾರೆಂಟಿ ಫಲಾನುಭವಿಗಳಿಗೆ ವಿತರಣೆ: ಸಚಿವ ಚಲುವರಾಯ ಸ್ವಾಮಿ





**ಮಂಡ್ಯ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಯನ್ನು ಇತರೆ ರಾಜ್ಯಗಳು ಪ್ರಾರಂಭಿಸಲು ಪ್ರೇರೇಪಿತವಾಗುತ್ತಿದ್ದೂ, ಈವರೆಗೂ ಪಂಚ ಗ್ಯಾರಂಟಿ ಯೋಜನೆಯಡಿ 1 ಲಕ್ಷದ 25 ಸಾವಿರ ಕೋಟಿ ಹಣವನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಲುಪಿಸಲಾಗಿದೆ. ಪಂಚ ಗ್ಯಾರಂಟಿ ಯೋಜನೆಯಡಿ 5 ವರ್ಷದಲ್ಲಿ ಸುಮಾರು 3 ಲಕ್ಷ ಕೋಟಿ ಹಣವನ್ನು ಫಲಾನುಭವಿಗಳಿಗೆ ತಲುಪಿಸುವ ಗುರಿ ಇದೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಸೋಮವಾರ ಹೇಳಿದರು

ನಾಗಮಂಗಲದ ಟಿ.ಬಿ.ಸರ್ಕಲ್ ಬಡಗೂಡಮ್ಮ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾಗಿದ್ದ ಜನಸಂಪರ್ಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಜನಸ್ಪಂದನ ಕಾರ್ಯಕ್ರಮದ ಪ್ರಮುಖ ಉದ್ದೇಶವೇ ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವುದಾಗಿದೆ. ಈ ನಿಟ್ಟಿನಲ್ಲಿ ಕಳೆದ ಎರಡೂವರೆ ವರ್ಷದದಿಂದ ಸಾರ್ವಜನಿಕರಿಂದ ಅನೇಕ ಅರ್ಜಿಗಳನ್ನು ಸ್ವೀಕರಿಸಿ, ಪರಿಶೀಲಿಸಿ ಅಧಿಕಾರಿಗಳ ಗಮನಕ್ಕೆ ತಂದು ಪರಿಹರಿಸಲಾಗುತ್ತಿದೆ. ಜನರ ಸಮಸ್ಯೆಗೆ ಸ್ಪಂದಿಸುವುದು ನಮ್ಮ ಆದ್ಯ ಕರ್ತವ್ಯ ಎಂದು ಹೇಳಿದರು.

ತಾಲ್ಲೂಕು ಇಲಾಖೆಗಿಂತಲೂ ಜಿಲ್ಲಾಡಳಿತದ ಜವಾಬ್ದಾರಿ ದೊಡ್ಡದು, ಜಿಲ್ಲಾಡಳಿತ ಹೆಚ್ಚು ಪ್ರಾಮಾಣಿಕವಾಗಿ ಕೆಲಸ ಮಾಡಿಕೊಂಡು ಬರುತ್ತಿದೆ. ತಾಲ್ಲೂಕು ಆಡಳಿತದಲ್ಲಿ ಅನುಭವದ ಕೊರತೆಯಿಂದ ಕೆಲಸ ನಿಧಾನ ಗತಿಯಾಗಿರಬಹುದು. ಜಿಲ್ಲೆಯಲ್ಲಿ ಕೆಲಸ ನಿರ್ವಹಣೆಯ ಜತೆಗೆ ಸಾರ್ವಜನಿಕರು ಕೆಲಸ ನಿರ್ವಹಣೆಯಲ್ಲಿ ಸಮಾಧಾನವಾದರೆ ಸಂತೋಷವಾಗುತ್ತದೆ. ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿದಾಗ ಸಾರ್ವಜನಿಕರು ಸಹಕರಿಸಿ ಎಂದರು.

ರಾಜ ಮನೆತನಗಳ ಕಾಲದಿಂದಲೂ ಸಂಪೂರ್ಣವಾಗಿ ಜನರ ಸಮಸ್ಯೆ ಬಗೆಹರಿಸಲು ಸಾಧ್ಯವಾಗುತ್ತಿಲ್ಲ. ನಮ್ಮ ಕಾಲದಲ್ಲಿ ಸಾಧ್ಯವಾದಷ್ಟು ಸಮಸ್ಯೆ ಬಗೆಹರಿಸುವ ಆದಿಯಲ್ಲಿದ್ದೇವೆ. ಎರಡು ವರೆ ವರ್ಷದಿಂದ ತಾಲ್ಲೂಕಿನ ವಿವಿದೆಡೆ ಜನಸ್ಪಂದನ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದ್ದು, ಕೊಪ್ಪ ಹೋಬಳಿಯ ಜನಸ್ಪಂದನ ಕಾರ್ಯಕ್ರಮದಲ್ಲಿ ಸ್ಥಳದಲ್ಲೇ ಸಮಸ್ಯೆಯನ್ನು ಸಹ ಪರಿಹರಿಸಿದ್ದೇವೆ ಎಂದು ಹೇಳಿದರು.

ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕೇಂದ್ರ ಸರ್ಕಾರದಿಂದ ಹಣ ದೊರೆಯದಿದ್ದರೂ ಜನರ ಪರವಾಗಿ ರಾಜ್ಯ ಸರಕಾರ ಆರ್ಥಿಕ ಪರಿಸ್ಥಿತಿ ಮೀರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದೆ. ಹಾಲಿನ ಪ್ರೋತ್ಸಹ ಧನ, ಬಡ್ಡಿ ರಹಿತ ಸಾಲ, ಕೃಷಿ ಇಲಾಖೆ ಸೌಲಭ್ಯ, ಶಿಕ್ಷಣ, ಮಕ್ಕಳು, ಸಮಾಜ ಕಲ್ಯಾಣ ಇಲಾಖೆ ಸೌಲಭ್ಯ. ಸಾರ್ವಜನಿಕರಿಗೆ ಸಬ್ಸಿಡಿ, ಬರಗಾಲದ ಸಮಯದಲ್ಲಿ ಪರಿಹಾರ, ಮಳೆ ಹಾನಿ ಪರಿಹಾರಗಳಿಗಾಗಿ ಕೇಂದ್ರ ಸರಕಾರದ ಅನುದಾನ ನಿರೀಕ್ಷಿಸದೆ ಸ್ವಂತ ಖಜಾನೆಯಿಂದ ಸವಲತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮಂಡ್ಯ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಉಪವಿಭಾಗಾಧಿಕಾರಿಗಳ ಕಛೇರಿಯಲ್ಲಿ 8600 ಸಾವಿರ ಕ್ಕೂ ಹೆಚ್ಚು ಪಹಣಿಗಳನ್ನು ತಿದ್ದುಪಡಿ ಮಾಡಲಾಗಿದ್ದು, ಎ.ಸಿ ನ್ಯಾಯಾಲಯದಲ್ಲಿ 1600 ಕ್ಕೂ ಹೆಚ್ಚು ಕೋರ್ಟ್ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗಿದೆ. ನಾಗಮಂಗಲ ತಾಲ್ಲೂಕಿನಲ್ಲಿ ಸುಮಾರು 20 ಸಾವಿರ ಪೌತಿ ಖಾತೆ ಬದಲಾವಣೆ ಮಾಡಲಾಗಿದೆ. 2 ಲಕ್ಷದ 60 ಸಾವಿರ ಆಧಾರ್ ಸೀಡಿಂಗ್ ಮಾಡಲಾಗಿದೆ ಎಂದರು.

ನಾಗಮಂಗಲ ತಾಲ್ಲೂಕಿನಲ್ಲಿ 80 ಸಾವಿರ ಖಾತೆ ಬಾಕಿಯಿದ್ದು, ಮುಂದಿನ 06 ತಿಂಗಳಲ್ಲಿ ಹಂತ–ಹಂತವಾಗಿ ಗ್ರಾಮ ಮಟ್ಟದಲ್ಲಿ ಆಂದೋಲನ ನಡೆಸಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಮುಜರಾಯಿ ದೇವಸ್ಥಾನದ ಅರ್ಚಕರಿಗೆ 06 ತಿಂಗಳಿಗೆ 36 ಸಾವಿರ ಪ್ರತಿ ತಿಂಗಳಿಗೆ ಆರು ಸಾವಿರ ರೂಗಳಂತೆ ನಾಗಮಂಗಲ ತಾಲ್ಲೂಕಿನಲ್ಲಿ ಒಟ್ಟು 506 ದೇವಸ್ಥಾನಗಳಿಗೆ 30 ಲಕ್ಷಕ್ಕೂ ಹೆಚ್ಚು ಹಣ ನೀಡಲಾಗುತ್ತಿದೆ. ಓಖಐಒ ವತಿಯಿಂದ ಮಹಿಳೆಯರಿಗೆ ಸಾಕಷ್ಟು ಕಾರ್ಯಕ್ರಮಗಳನ್ನು ಜಿಲ್ಲಾ ಪಂಚಾಯತ್ ನಡೆಸಿಕೊಂಡು ಬರುತ್ತಿದೆ ಎಂದು ಹೇಳಿದರು.

ಕೃಷಿ ಇಲಾಖೆ ವತಿಯಿಂದ ಸೂಕ್ಷ್ಮ ನೀರಾವರಿ ಯೋಜನೆ, ಕೃಷಿ ಯಾಂತ್ರೀಕರಣ,ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ ಯೋಜನೆ, ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ, ಕೃಷಿ ಭಾಗ್ಯ ಯೋಜನೆ, ರೈತರ ಆತ್ಮಹತ್ಯೆ ಹಾಗೂ ಆಕಸ್ಮಿಕ ಮರಣಕ್ಕಾಗಿ ಒಟ್ಟು 1.22 ಕೋಟಿ ಸಹಾಯಧನ ನೀಡಲಾಗಿದೆ ಎಂದರು.


ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿದರು ಜನರನ್ನು ತೃಪ್ತಿ ಪಡಿಸಲಾಗುತ್ತಿಲ್ಲ. ನನ್ನಿಂದ ಸಾಧ್ಯವಾದಷ್ಟು ಸೇವೇ ಸಲ್ಲಿಸಲು ನಾನು ಸದಾಸಿದ್ದ ಜಿಲ್ಲೆಯಲ್ಲಿ ಇನ್ನಾ ಹೆಚ್ಚು ಬದಲಾವಣೆ ತರಲು ನಮ್ಮೊಂದಿಗೆ ಸಹಕರಿಸಿ ಹಾಗೂ ದಯಮಾಡಿ ಸವಲತ್ತುಗಳ ಸೌಲಭ್ಯ ಪಡೆದುಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚ್ಚಿನ್ ಚಲುವರಾಯಸ್ವಾಮಿ,ಜಿಲ್ಲಾಧಿಕಾರಿ ಡಾ. ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ. ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಪೊಲೀಸ್ ವರಿಷ್ಠಾಧಿಕಾರಿ ಗಂಗಾಧರ ಸ್ವಾಮಿ, ನಾಗಮಂಗಲ ತಹಸೀಲ್ದಾರ್ ಆದರ್ಶ್, ಪಾಂಡವಪುರ ಉಪವಿಭಾಗ ಅಧಿಕಾರಿ ಶ್ರೀನಿವಾಸ್, ಕೃಷಿ ಇಲಾಖೆ ಜಂಟಿ ನಿರ್ದೇಶ ಅಶೋಕ್, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕಿ ರೂಪಶ್ರೀ, ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾಧಿಕಾರಿ ಮಂಜುಳಾ, ನಗರಾಭಿವೃದ್ಧಿ ಕೋಶ ಜಂಟಿ ನಿರ್ದೇಶಕರಾದ ನರಸಿಂಹ ಮೂರ್ತಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## 18 ಲಕ್ಷ ಪಹಣಿಗಳಿಗೆ ಆಧಾರ್ ಜೋಡಣೆ

**18 ಲಕ್ಷ ಪಹಣಿಗಳಿಗೆ ಆಧಾರ್ ಜೋಡಣೆ ಮಾಡಲಾಗಿದೆ. ಒಟ್ಟು 1 ಲಕ್ಷ 7 ಸಾವಿರ ಸ. ನಂ ಪೌತಿ ಖಾತೆ. 2 ಸಾವಿರಕ್ಕೂ ಹೆಚ್ಚು ದರಖಾಸ್ತು ಪೋಡಿ. 20 ಸಾವಿರ ಪ್ರಕರಣಗಳನ್ನು ಡಿ.ಸಿ, ಎ.ಸಿ ಹಾಗೂ ತಹಸೀಲ್ದಾರ್ ರವರ ನ್ಯಾಯಾಲಯದಲ್ಲಿ ಇತ್ಯರ್ಥ ಪಡಿಸಲಾಗಿದೆ. 962 ಕೆರೆಗಳ ಅಳತೆ ಕಾರ್ಯಪೂರ್ಣಗೊಂಡಿದೆ. ರೆಕಾರ್ಡ್ ರೂಂ ನಲ್ಲಿ ಭೂ ಸುರಕ್ಷಾ ಯೋಜನೆಯಡಿ 1 ಕೋಟಿ 60 ಲಕ್ಷ ಪುಟಗಳ ಸ್ಕ್ಯಾನಿಂಗ್ ಮಾಡಲಾಗಿದೆ. 154 ಹೊಸ ಕಂದಾಯ ಗ್ರಾಮಗಳನ್ನು ರಚಿಸಲು ಕ್ರಮವಹಿಸಲಾಗಿದೆ. 59 ಸಾವಿರ ಸರ್ಕಾರಿ ಜಮೀನುಗಳ ಲ್ಯಾಂಡ್ ಬೀಟ್ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಮಾಹಿತಿ ನೀಡಿದರು.**

# ಬಿಜೆಪಿ ಮಸೂರದಿಂದ ಆರ್‌ಎಸ್‌ಎಸ್ ನೋಡಬೇಡಿ: ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್



**ಕೋಲ್ಕತ್ತಾ:** ಸಂಘವನ್ನು ಬಿಜೆಪಿಯ ಮಸೂರದಿಂದ ನೋಡುವುದು ದೊಡ್ಡ ತಪ್ಪು ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್ ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಹಿಂದೂಗಳು ಮತ್ತು ಭಾರತೀಯ ಸಮಾಜವನ್ನು ವ್ಯಾಖ್ಯಾನಿಸಲು ಪ್ರಯತ್ನಿಸಿದ ಭಾಗವತ್, ಸಂಘದ ಗುರಿ ಹಿಂದೂ ಸಮಾಜದ ಸಂಘಟನೆಯಾಗಿದೆ, ಆದರೆ ಅದು ಇತರರನ್ನು ವಿರೋಧಿಸುವ ಗುರಿಯಲ್ಲ ಎಂದು ಹೇಳಿದ್ದಾರೆ.

ಆರ್ ಎಸ್ ಎಸ್ ಶತಮಾನೋತ್ಸವ ಸಂವಾದ ಕಾರ್ಯಕ್ರಮದಲ್ಲಿ ಕೋಲ್ಕತ್ತಾದಲ್ಲಿ ಮಾತನಾಡಿದ ಭಾಗವತ್, ?ಸಂಘವನ್ನು ಬಿಜೆಪಿಯ ಮಸೂರದಿಂದ ಅರ್ಥಮಾಡಿಕೊಳ್ಳುವ ಪ್ರವೃತ್ತಿಯನ್ನು ಅನೇಕರು ಹೊಂದಿದ್ದಾರೆ. ಅದು ದೊಡ್ಡ ತಪ್ಪು? ಎಂದು ಇಬ್ಬರನ್ನು ಸ್ಪಷ್ಟವಾಗಿ ಬೇರ್ಪಡಿಸಲು ಪ್ರಯತ್ನಿಸಿದರು.

ಸಂಘದಲ್ಲಿ ಸ್ವಯಂಸೇವಕರು ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಾರೆ. ಕೆಲವರು ರಾಜಕೀಯದಲ್ಲಿದ್ದಾರೆ. ಕೆಲವರು ಪಕ್ಷದಲ್ಲಿದ್ದಾರೆ (ಕೇಂದ್ರದಲ್ಲಿ) ಅಧಿಕಾರದಲ್ಲಿದ್ದಾರೆ? ಎಂದು ಅವರು ತಮ್ಮ ಒಂದು ಗಂಟೆಯ ಭಾಷಣದಲ್ಲಿ ಸಂಘದ ಉಗಮ ಮತ್ತು ಬೆಳವಣಿಗೆಯನ್ನು ವಿವರಿಸಿದರು.

ಮುಂದುವರಿದು ಅವರು, ?ಸಂಘದ ಬಗ್ಗೆ ತಪ್ಪು ನಿರೂಪಣೆಗಳನ್ನು ಹರಡುವ ಜನರಿದ್ದಾರೆ. ಸಂಘದ ವ್ಯಾಖ್ಯಾನವು ವಸ್ತುನಿಷ್ಠವಾಗಿರಬೇಕೇ ಹೊರತು ದ್ವಿತೀಯ ಮೂಲಗಳ ಮೂಲಕ ಅಲ್ಲ. ಸಂಘದ ಗುರಿ ಇಡೀ ಹಿಂದೂ ಸಮಾಜವನ್ನು ಸಂಘಟಿಸುವುದು. ಆದರೆ ಅದು ಇತರರನ್ನು ವಿರೋಧಿಸುವ ಗುರಿಯಲ್ಲ. ಸಂಘವು ಮುಸ್ಲಿಂ ವಿರೋಧಿ ಎಂದು ನೀವು ನೋಡಿದರೆ, ನೀವು ಅದನ್ನು ನಿಮ್ಮ ಅಭಿಪ್ರಾಯವನ್ನು ಮಾಡಬಹುದು. ಆದರೆ ನಿಮಗೆ ಅದು ಸಿಗದಿದ್ದರೆ ನಿಮ್ಮ ಅಭಿಪ್ರಾಯವನ್ನು ಬದಲಾಯಿಸಿ,? ಎಂದು ಹೇಳಿದರು.

ರಾಜ್ಯದಲ್ಲಿ ರಾಜಕೀಯ ಜಾಗೃತಿಯ ಅಗತ್ಯವನ್ನು ಒತ್ತಿ ಹೇಳಿದ ಭಾಗವತ್, ರಾಜಕೀಯ ಜಾಗೃತಿ ಮತ್ತು ಸ್ವಾತಂತ್ರ್ಯ ಹೋರಾಟದ ಸಾಧನವಾಗಿ ಕಾಂಗ್ರೆಸ್ ಅನ್ನು ರಚಿಸಲಾಗಿದೆ ಎಂದು ಹೇಳಿದರು. ?ದೊಡ್ಡ ಪ್ರಮಾಣದ ರಾಜಕೀಯ ಜಾಗೃತಿ ಇತ್ತು ಮತ್ತು ಜನರು ಈ ದೇಶಕ್ಕಾಗಿ ಹೋರಾಡಿದರು. ನಮಗೆ ಸ್ವಾತಂತ್ರ್ಯ ಸಿಕ್ಕಿತು. ಆದರೆ ಸ್ವಾತಂತ್ರ್ಯ ಪೂರ್ವದಲ್ಲಿ ಸಾಮಾಜಿಕ ಸುಧಾರಣೆಗಳಿಗೆ ಒತ್ತು ನೀಡುತ್ತಿದ್ದ ಮತ್ತೊಂದು ವರ್ಗವಿತ್ತು. ಈ ಸಂಪ್ರದಾಯ ರಾಜಾ ರಾಮ್ ಮೋಹನ್ ರಾಯ್ ಅವರಿಂದ ಪ್ರಾರಂಭವಾಯಿತು ಎಂದು ಅವರು ಹೇಳಿದರು.


?ನಾವು ಸಮಾಜವನ್ನು ಸಂಘಟಿಸಬೇಕು ಮತ್ತು ಸಮಾಜದೊಳಗೆ ಯಾವುದೇ ಪ್ರತ್ಯೇಕ ಸಂಘಟನೆಯನ್ನು ರಚಿಸಬಾರದು? ಎಂದು ಭಾಗವತ್ ಹೇಳಿದರು. ಹಿಂದೂ ಸಮಾಜದಲ್ಲಿನ ವೈವಿಧ್ಯತೆಯ ಬಗ್ಗೆ ಪ್ರಸ್ತಾಪಿಸಿದ ಭಾಗವತ್, ?ಹಿಂದೂ ಎಂಬುದು ಒಂದು ಹೆಸರಲ್ಲ, ಆದರೆ ಒಂದು ಗುಣಲಕ್ಷಣ ಮತ್ತು ಪ್ರಕೃತಿಯನ್ನು ಸೂಚಿಸುತ್ತದೆ. ತಾಯ್ನಾಡನ್ನು ಗೌರವಿಸುವವರು ಹಿಂದೂಗಳು. ಅವರು ವಿಭಿನ್ನ ಭಾಷೆಗಳು, ಆಚರಣೆಗಳು, ಉಡುಗೆ ಅಥವಾ ಆಹಾರ ಪದ್ಧತಿಯನ್ನು ಹೊಂದಿರಬಹುದು.? ಮುಸ್ಲಿಮರು ?ಆರಾಧನೆಯ ದೃಷ್ಟಿಯಿಂದ? ವಿಭಿನ್ನವಾಗಿರಬಹುದು ಎಂದು ಅರ್ಥಮಾಡಿಕೊಳ್ಳಬೇಕು, ಆದರೆ ಅವರು ?ರಾಷ್ಟ್ರ, ಸಂಸ್ಕೃತಿ ಮತ್ತು ಸಮಾಜ? ದ ದೃಷ್ಟಿಯಿಂದ ಏಕೀಕೃತ ಘಟಕದ ಭಾಗವಾಗಿದ್ದಾರೆ ಎಂದು ಆರೆಸ್ಸೆಸ್ ಮುಖ್ಯಸ್ಥರು ಹೇಳಿದರು. ಉದ್ದೇಶಿತ ಬಾಬರಿ ಮಸೀದಿಯನ್ನು ?ರಾಜಕೀಯ ಪಿತೂರಿ? ಎಂದು ಬಣ್ಣಿಸಿದ ಅವರು, ?ಇದು ಮುಸ್ಲಿಮರ ಪರವಾಗಲೀ ಅಥವಾ ಹಿಂದೂಗಳ ಪರವಾಗಲೀ ಅಲ್ಲ. ಇದು ಮತಗಳಿಗಾಗಿ ನಡೆಯುತ್ತಿದೆ? ಎಂದು ಹೇಳಿದರು. ಸಾರ್ವಜನಿಕ ಬೊಕ್ಕಸದಿಂದ ದೇವಾಲಯ ಅಥವಾ ಮಸೀದಿಯನ್ನು ನಿರ್ಮಿಸುವ ಪ್ರಯತ್ನಗಳನ್ನು ಟೀಕಿಸಿದ ಭಾಗವತ್, ಸಮಾಜದಿಂದ ಸಂಗ್ರಹಿಸಿದ ಹಣದಿಂದ ಸೋಮನಾಥ ದೇವಾಲಯವನ್ನು ನಿರ್ಮಿಸಲಾಗಿದೆ ಎಂದು ಹೇಳಿದರು. ಸೋಮನಾಥ ದೇವಾಲಯಕ್ಕೆ ಸರ್ಕಾರ ಹಣ ನೀಡಿಲ್ಲ. ರಾಮ ಮಂದಿರವನ್ನು ಸರ್ಕಾರ ನಿರ್ಮಿಸಿಲ್ಲ. ಮಂದಿರ ನಿರ್ಮಾಣದಲ್ಲಿ ಸರ್ಕಾರ ಇಳಿಯಬಾರದು ಎಂದು ಹೇಳಿದರು.

# ಸಿಎಎಫ್ ಯೋಧನಿಂದ ಸಹೋದ್ಯೋಗಿಗೆ ಗುಂಡಿಕ್ಕಿ ಹತ್ಯೆ

**ರಾಯ್‌ಪುರ:** ರಾಯ್‌ಪುರದಿಂದ ಪಶ್ಚಿಮಕ್ಕೆ ಸುಮಾರು 130 ಕಿ.ಮೀ ದೂರದಲ್ಲಿರುವ ಖೈರಾಗಢ ಜಿಲ್ಲೆಯ ಬ್ಯಾರಕ್ ಶಿಬಿರದೊಳಗೆ ಛತ್ತೀಸ್‌ಗಢ ಸಶಸ್ತ್ರ ಪಡೆ(ಸಿಎಎಫ್) ಕಾನ್‌ಸ್ಟೆಬಲ್ ಒಬ್ಬರು ಭಾನುವಾರ ಮಧ್ಯರಾತ್ರಿ ತನ್ನ ಸಹೋದ್ಯೋಗಿಯನ್ನು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ.

ಘಾಗ್ರಾ ಬೇಸ್ ಕ್ಯಾಂಪ್‌ನಲ್ಲಿರುವ 17 ಸಿಎಎಫ್ ಬೆಟಾಲಿಯನ್‌ನಲ್ಲಿ ಆರೋಪಿ ಜವಾನ್ ಮತ್ತು ಆತನ ಸಹೋದ್ಯೋಗಿ ನಡುವಿನ ವಾಗ್ವಾದದ ನಂತರ ಈ ಗುಂಡಿನ ದಾಳಿ ನಡೆದಿದೆ. ಆರೋಪಿ ಕಾನ್‌ಸ್ಟೆಬಲ್ ಅರವಿಂದ್ ಗೌತಮ್ ಮತ್ತು ಮೃತ ಮೆಸ್ ಕಮಾಂಡರ್ ಸೋನ್‌ಬೀರ್ ಜಾತ್ ನಡುವೆ ತಡರಾತ್ರಿ ಯಾವುದೋ ವಿಷಯದ ಕುರಿತು ಇಬ್ಬರ ನಡುವೆ ಜಗಳವಾಗಿದೆ.

# ರಾಯಭಾರಿ ಕಚೇರಿ ಬಳಿ ಭದ್ರತಾ ಉಲ್ಲಂಘನೆ: ಆರೋಪ ಸರಿಯಲ್ಲ, ವಿಯನ್ನಾ ಒಪ್ಪಂದಕ್ಕೆ ಬದ್ಧ; ಬಾಂಗ್ಲಾದೇಶಕ್ಕೆ ಭಾರತ ತಿರುಗೇಟು



**ನವದೆಹಲಿ:** ನವದೆಹಲಿಯಲ್ಲಿರುವ ಬಾಂಗ್ಲಾದೇಶ ರಾಯಭಾರಿ ಎದುರು ನಡೆದ ಪ್ರತಿಭಟನೆಗೆ ಸಂಬಂಧಿಸಿ ಬಾಂಗ್ಲಾದೇಶ ಮಾಧ್ಯಮಗಳಲ್ಲಿ ಪ್ರಕಟವಾದ ವರದಿ ಹಾಗೂ ಆರೋಪವನ್ನು ಭಾರತ ನಿರಾಕರಿಸಿದ್ದು, ಆರೋಪ ತಪ್ಪಾಗಿದ್ದು, ದಾರಿತಪ್ಪಿಸುವ ಪ್ರಚಾರವಾಗಿದೆ ಎಂದು ಹೇಳಿದೆ.

ಡಿಸೆಂಬರ್ 20ರಂದು ಬಾಂಗ್ಲಾದೇಶದ ಮಯ್ಮನ್ಸಿಂಗ್ ಜಿಲ್ಲೆಯಲ್ಲಿ ದೀಪು ಚಂದ್ರ ದಾಸ್ ಎಂಬವರ ಹತ್ಯೆಯನ್ನು ಖಂಡಿಸಿ ಹಾಗೂ ಅಲ್ಪಸಂಖ್ಯಾತರಿಗೆ ರಕ್ಷಣೆ ನೀಡಬೇಕೆಂದು ಒತ್ತಾಯಿಸಿ ಸುಮಾರು 20?25 ಮಂದಿ ಯುವಕರು ಕೆಲಕಾಲ ಬಾಂಗ್ಲಾದೇಶ ರಾಯಭಾರಿ ಎದುರು ಪ್ರತಿಭಟನೆ ನಡೆಸಿದ್ದರು.

ಈ ಕುರಿತು ಪ್ರತಿಕ್ರಿಯೆ ನೀಡಿದ್ದ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಲಹೆಗಾರ ಎಂ. ತೌಹೀದ್ ಹೊಸೈನ್ ಅವರು, ಬಾಂಗ್ಲಾದೇಶ ರಾಯಭಾರಿ ಕಚೇರಿ ಬಳಿ ಭದ್ರತಾ ಉಲ್ಲಂಘನೆಯಾಗಿದ್ದು, ಅತ್ಯಂತ ಭದ್ರತಾ ವಲಯದಲ್ಲಿರುವ ಹೈಕಮಿಷನ್ ಬಳಿ 25?30 ಮಂದಿ ಹೇಗೆ ತಲುಪಿದರು ಎಂಬುದೇ ಪ್ರಶ್ನೆಯಾಗಿದೆ ಎಂದು ಹೇಳಿದ್ದರು.

ಬಾಂಗ್ಲಾದೇಶ ಸರ್ಕಾರಿ ಸುದ್ದಿ ಸಂಸ್ಥೆ ಬಿಎಸ್‌ಎಸ್ ವರದಿ ಪ್ರಕಾರ, ಆ ಪ್ರತಿಭಟನಾಕಾರರು ಕೇವಲ ಹತ್ಯೆ ವಿರುದ್ಧ ಘೋಷಣೆ ಕೂಗಲಿಲ್ಲ, ?ಇತರೆ ಹೇಳಿಕೆಗಳನ್ನೂ ನೀಡಿದ್ದಾರೆ. ಬಾಂಗ್ಲಾದೇಶದ ಮಾಧ್ಯಮಗಳಲ್ಲಿ ಪ್ರಕಟವಾದ ವರದಿಗಳು ತಪ್ಪು ದಾರಿ ತಪ್ಪಿಸುವವುಗಳಲ್ಲ ಎಂದು ತಿಳಿಸಿದ್ದರು.

ಭಾರತೀಯ ಪತ್ರಿಕಾ ಪ್ರಕಟಣೆಗೆ ಪ್ರತಿಕ್ರಿಯಿಸದೇ ಇರಲು ಸಾಧ್ಯವಿಲ್ಲ. ಎರಡು ದೇಶಗಳೂ ರಾಜತಾಂತ್ರಿಕ ಮಾರ್ಗಗಳ ಮೂಲಕ ಸಂಪರ್ಕದಲ್ಲಿವೆ. ಪರಿಸ್ಥಿತಿ ಹದಗೆಟ್ಟರೆ ನಮ್ಮ ರಾಯಭಾರಿ ಅಧಿಕಾರಿಗಳ ಸಂಖ್ಯೆ ಕಡಿಮೆ ಮಾಡುವ ಬಗ್ಗೆ ಚಿಂತಿಸಲಾಗುವುದು ಎಂದು ಹೇಳಿದ್ದರು. ಇದೇ ವೇಳೆ ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಳ್ಳುವಲ್ಲಿ ಭಾರತ ಮೇಲೆ ಭರವಸೆ ಇದೆ ಎಂದು ಹೇಳಿದ್ದರು.

ಈ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು, ಬಾಂಗ್ಲಾದೇಶ ರಾಯಭಾರ ಕಚೇರಿ ಆವರಣ ಪ್ರವೇಶಿಸಲು ಅಥವಾ ಭದ್ರತಾ ಬೇಲಿಯನ್ನು ದಾಟಲು ಯಾವುದೇ ಪ್ರಯತ್ನ ನಡೆದಿಲ್ಲ. ಪೊಲೀಸರು ಕೆಲವೇ ನಿಮಿಷಗಳಲ್ಲಿ ಪ್ರತಿಭಟನಾಕಾರರನ್ನು ಚದುರಿಸಿದ್ದಾರೆ. ಈ ಘಟನೆಗೆ ಸಂಬಂಧಿಸಿದ ದೃಶ್ಯ ಸಾಕ್ಷ್ಯಗಳು ಸಾರ್ವಜನಿಕವಾಗಿ ಲಭ್ಯವಿವೆ. ವಿಯನ್ನಾ ಒಪ್ಪಂದದಂತೆ ಭಾರತವು ವಿದೇಶಿ ರಾಜತಾಂತ್ರಿಕ ಕಚೇರಿಗಳ ಭದ್ರತೆಗೆ ಬದ್ಧವಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಬಾಂಗ್ಲಾದೇಶ ಮಾಧ್ಯಮಗಳ ವರದಿಗಳನ್ನು ನಿರಾಕರಿಸಿರುವ ಅವರು, ಈ ವರದಿಗಳು ತಪ್ಪಾಗಿದ್ದು, ದಾರಿತಪ್ಪಿಸುವ ಪ್ರಚಾರ ಎಂದು ಟೀಕಿಸಿದ್ದಾರೆ.

ಬಾಂಗ್ಲಾದೇಶ ರಾಯಭಾರಿ ಕಚೇರಿ ಬಳಿಭದ್ರತೆಯಲ್ಲಿ ಯಾವುದೇ ಉಲ್ಲಂಘನೆ ಅಥವಾ ರಾಜತಾಂತ್ರಿಕ ಕಚೇರಿಗೆ ಅಪಾಯ ಸಂಭವಿಸಿಲ್ಲ ಎಂದೂ ಸ್ಪಷ್ಟಪಡಿಸಿದೆ.

# ಮಿಮ್ಸ್‌ಗೆ ಸಂಬಂಧಿಸಿದಂತೆ ಜಾಗದ ಒತ್ತುವರಿ ತೆರವುಗೊಳಿಸಲು ಒತ್ತಾಯ



**ಮಂಡ್ಯ:** ಮಿಮ್ಸ್‌ಗೆ ಸಂಬಂಧಿಸಿದಂತೆ ಜಾಗದ ಒತ್ತುವರಿಯನ್ನು ತೆರವುಗೊಳಿಸಿ, ಕಾನೂನು ಬಾಹಿರವಾಗಿ ಖಾಸಗಿ ವ್ಯಕ್ತಿಗಳು ಹಾಗೂ ಸಂಘ–ಸಂಸ್ಥೆಗಳಿಗೆ ಜಮೀನು ಮಂಜೂರು ಮಾಡಿರುವುದನ್ನು ರದ್ದು ಮಾಡಿ, ಲೋಪವೆಸಗಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ವಹಿಸುವಂತೆ ಜಿಲ್ಲಾಡಳಿತವನ್ನು ಸಾಮಾಜಿಕ ಹೋರಾಟಗಾರ ಕೆ.ಆರ್.ರವೀಂದ್ರ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ ಜಿಲ್ಲಾಸ್ಪತ್ರೆ ಹಾಗೂ ಸರ್ಕಾರಿ ಪ್ರೌಢಶಾಲೆಯ ಉದ್ದೇಶಕ್ಕೆ 78.15 ಎಕರೆ ಜಮೀನು ಮೀಸಲಿಡಲಾಗಿದ್ದು, ಅವುಗಳನ್ನು ಕೆಲವರು ಒತ್ತುವರಿ ಮಾಡಿಕೊಂಡರೆ, ಇನ್ನು ಕೆಲವರು ಅಕ್ರಮವಾಗಿ ಜಮೀನು ಮಂಜೂರು ಮಾಡಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

ಸುಮಾರು 900 ಕೋಟಿ ರೂ. ಹೆಚ್ಚು ಬೆಳೆ ಬಾಳುವ ಜಮೀನನ್ನು ಖಾಸಗಿ ವ್ಯಕ್ತಿಗಳು ಒತ್ತುವರಿ ಹಾಗೂ ಸಂಘ–ಸಂಸ್ಥೆಗಳು ಮಂಜೂರು ಮಾಡಿಸಿಕೊಂಡಿರುವುದನ್ನು ತನಿಕೆ ನಡೆಸಿ ಕಾನೂನು ರೀತಿಯ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಟ್ರಾಮಾ ಕೇರ್ ನಿರ್ಮಾಣಕ್ಕೆ ಮಂಡ್ಯ ಶಾಸಕರು ಡಿಎಚ್‌ಓ ಕಚೇರಿ ಸ್ಥಳವನ್ನು ತೆರವು ಮಾಡಿಸುವುದಾಗಿ ಹೇಳಿದ್ದಾರೆ. ಮಿಮ್ಸ್‌ಗೆ ಸಂಬಂಧಿಸಿದಂತೆ ಒತ್ತುವರಿ ಮಾಡಿಕೊಂಡ 2ಎಕರೆ 33 ಗುಂಟೆ ಸ್ಥಳವಿದೆ. ಅಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಾಡಬುದು ಎಂದು ಸಲಹೆ ನೀಡಿದರು.

ತಮಿಳು ಕಾಲೋನಿ ಸಂಬಂಧ ಇರುವ ತಡೆಯಾಜ್ಞೆಯು 2026ರ ಫೆ.3ರಂದು ನ್ಯಾಯಾಲಯ ತೆರವು ಮಾಡಲಿದೆ. ಜಿಲ್ಲಾಧಿಕಾರಿಗಳು ಕೂಡಲೇ ತಮಿಳು ಕಾಲೋನಿ ನಿವಾಸಿಗಳನ್ನು ಸ್ಥಳಾಂತರಿಸಲು ಕ್ರಮವಹಿಸಬೇಕು. ಈ ಸಂಬಂಧ ಜಿಲ್ಲೆಯ ರಾಜಕಾರಣಿಗೆ ಇಚ್ಛಾಸಕ್ತಿ ಪ್ರದರ್ಶಿಸಬೇಕು ಎಂದು ಒತ್ತಾಯಿಸಿದರು.

ಕೇಂದ್ರ ಸಚಿವರು ಕೈಗಾರಿಕೆ ಸ್ಥಾಪಿಸಲು ಸ್ಥಳ ಹುಡುಕಾಟದಲ್ಲಿದ್ದಾರೆ. ಜಿಲ್ಲೆಯಲ್ಲಿ ಅಕ್ರಮವಾಗಿ ಭೂಮಿ ಕಬಳಿಕೆ ಮಾಡಿರುವುದನ್ನು ತೋರಿಸಿ. ಈ ಸಂಬಂಧ ದಾಖಲೆಗಳನ್ನು ಒದಗಿಸುತ್ತೇವೆ. ಅವುಗಳನ್ನು ತೆರವುಗೊಳಿಸಿ ಜಿಲ್ಲೆಯ ಅಭಿವೃದ್ಧಿಗೆ ರಾಜ್ಯ–ಕೇಂದ್ರ ಸಚಿವರಿಬ್ಬರು ಶ್ರಮಿಸಬೇಕು. ಇವರ ಜಗಳದಲ್ಲಿ ಜಿಲ್ಲೆಯ ಅಭಿವೃದ್ಧಿಗೆ ತೊಡಕಾಗುತ್ತಿದೆ ಎಂದು ದೂರಿದರು.

ನಗರದಲ್ಲಿ ಸರ್ಕಾರಿ ಶಾಲೆ(ಕಲ್ಲುಕಟ್ಟಡ), ಮಿಮ್ಸ್‌ಗೆ ಸಂಬಂಧಿಸಿದಂತೆ ಮೈಸೂರು ರಾಜರು 3 ಗೆಜೆಟ್‌ಗಳಲ್ಲಿ 78 ಎಕರೆ 15 ಗುಂಟೆ ಜಮೀನು ಮಂಜೂರು ಮಾಡಿದ್ದರು. ಈ ಪೈಕಿ ತಮಿಳು ಕಾಲೋನಿ

ಒತ್ತುವರಿ ಸಂಬಂಧ ಇದ್ದ ತಡೆಯಾಜ್ಞೆ ಫೆ.3ರಂದು ತೆರವುಗೊಳ್ಳಲಿದೆ. ಉಳಿದಂತೆ ಅಕ್ರಮವಾಗಿ ಮಂಜೂರು ಮಾಡಿಕೊಂಡಿರುವ ಸಂಘ–ಸಂಸ್ಥೆಗಳಿಗೆ ಜಿಲ್ಲಾಧಿಕಾರಿಗಳು ನೋಟೀಸ್ ನೀಡಿ ತೆರವು ಕಾರ್ಯಕ್ಕೆ ಮುಂದಾಗುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಶಿವರಾಮೇಗೌಡ, ಕಿರಣ್‌ಕುಮಾರ್, ಮಾದು, ಅಣ್ಣಯ್ಯ ಇದ್ದರು.

# ವ್ಯಕ್ತಿತ್ವ ವಿಕಸನಕ್ಕೆ ಗಣಿತ-ವಿಜ್ಞಾನ ಶಿಕ್ಷಣವು ದಾರಿ ದೀಪ: ನಾಗರತ್ನ ಅಭಿಮತ





**ಕೆ ಆರ್ ಪೇಟೆ:** ಮಕ್ಕಳ ಸಮಗ್ರವಾದ ವ್ಯಕ್ತಿತ್ವದ ವಿಕಸನ ಹಾಗೂ ಜ್ಞಾನದ ವೃದ್ಧಿಗೆ ಗಣಿತ ಹಾಗೂ ವಿಜ್ಞಾನ ಶಿಕ್ಷಣವು ದಾರಿ ದೀಪವಾಗಿದ್ದು ವರದಾನ ವಾಗಿದೆ ಎಂದು ಆಲೇನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ನಾಗರತ್ನ ಹೇಳಿದರು. ಅವರು ಇಂದು

ಅಕ್ಕಿಹೆಬ್ಬಾಳು ಹೋಬಳಿಯ ಮಂದಗೆರೆ ಕ್ಲಸ್ಟರ್ ವ್ಯಾಪ್ತಿಯ ಮೂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ಗಣಿತ ದಿನ ಹಾಗೂ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಗಣಿತ ವಿಜ್ಞಾನಿ ರಾಮಾನುಜನ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳ ವ್ಯಕ್ತಿತ್ವವು ಸಮಗ್ರವಾಗಿ ವಿಕಸನವಾಗಲು ಗಣಿತ ಹಾಗೂ ವಿಜ್ಞಾನದ ಶಿಕ್ಷಣದ ಕಲಿಕೆಯು ಇಂದು ಅಗತ್ಯವಾಗಿ ಬೇಕಾಗಿದೆ. ಆಂಗ್ಲ ಭಾಷೆ ಮತ್ತು ಕಂಪ್ಯೂಟರ್ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ಗಣಿತ ಹಾಗೂ ವಿಜ್ಞಾನ ಶಿಕ್ಷಣದ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ಬೆಳೆಸಿಕೊಂಡರೆ ಮುಂದಿನ ದಿನಗಳಲ್ಲಿ ತಾಂತ್ರಿಕ ಇಲ್ಲವೇ ವೈದ್ಯಕೀಯ ಶಿಕ್ಷಣವನ್ನು ಕಲಿಯಲು ಸಹಕಾರಿಯಾಗಲಿದೆ ಕಲಿಕೆಗೆ ಸ್ವಲ್ಪ ಕಷ್ಟವೆನಿಸಿದರು ಏಕಾಗ್ರತೆಯಿಂದ ಮನಸ್ಸನ್ನು ಕೇಂದ್ರೀಕರಿಸಿ ಅಭ್ಯಾಸ ಮಾಡಿದರೆ ಸಾಕು, ಗಣಿತ ಹಾಗೂ ವಿಜ್ಞಾನದ ಕಲಿಕೆಯು ವಿದ್ಯಾರ್ಥಿಗಳಿಗೆ ಸುಲಭವಾಗಲಿದೆ ಎಂದು ತಿಳಿಸಿದ ನಾಗರತ್ನ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಮೂಡಲು ಗಣಿತ ಹಾಗೂ ವಿಜ್ಞಾನ ಶಿಕ್ಷಣವು ದಾರಿಮಾರ್ಗವಾಗಿದೆ. ವಿದ್ಯಾರ್ಥಿಗಳು ಏಕಾಗ್ರತೆಯಿಂದ ಗಣಿತ ಹಾಗೂ ವಿಜ್ಞಾನವನ್ನು ಕಲಿಯಲು ತಮ್ಮನ್ನು ಸಮರ್ಪಣೆ ಮಾಡಿಕೊಂಡು ಅಭ್ಯಾಸ ಮಾಡಬೇಕು ಎಂದು ಕಿವಿಮಾತು ಹೇಳಿದರು. ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ತಿಮ್ಮೇಗೌಡ ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಪ್ರತಿಭಾವಂತರಿದ್ದಾರೆ. ಅವರಲ್ಲಿಯೂ ಕೂಡ ವಿಶೇಷವಾಗಿ ಸಾಧನೆ ಮಾಡುವ ಸಾಮರ್ಥ್ಯವಿದೆ. ಇಂದಿನ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಪ್ರದರ್ಶನ ಮಾಡಿರುವ ವಿಜ್ಞಾನ ಮಾದರಿಗಳು ಅದ್ಭುತವಾಗಿವೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಗಣಿತ ಹಾಗೂ ವಿಜ್ಞಾನ ಕಲಿಕೆಯ ಬಗ್ಗೆ ತೋರಿಸುತ್ತಿರುವ ಆಸಕ್ತಿಯು ಮಾದರಿಯಾಗಿದೆ ವಿದ್ಯಾರ್ಥಿಗಳು ಇದೇ ರೀತಿ ತಮ್ಮ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡು ಸಾಧನೆ ಮಾಡಬೇಕು ಎಂದು ಕಿವಿಮಾತು ಹೇಳಿದರು. ಪ್ರಧಾನ ಮಂತ್ರಿ ಪೋಶಣ್ ಅಭಿಯಾನದ ತಾಲೂಕು ಸಹಾಯಕ ನಿರ್ದೇಶಕ ಯತೀಶ್, ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಕೆ. ಮಂಜುನಾಥ್, ಮಂದಗೆರೆ ಕ್ಲಸ್ಟರ್ ವ್ಯಾಪ್ತಿಯ ಸಮೂಹ ಸಂಪನ್ಮೂಲ ಅಧಿಕಾರಿ ವೇಣುಗೋಪಾಲ್, ಬಿ.ಆರ್.ಪಿ ಉದೇಶಗೌಡ, ಶಿಕ್ಷಣ ಇಲಾಖೆ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎ.ಕೆ. ದೇವರಾಜು, ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ರೇವಣ್ಣ ಕಾರ್ಯಕ್ರಮದಲ್ಲಿ ಮಾತನಾಡಿದರು. ಸಂಪನ್ಮೂಲ ವ್ಯಕ್ತಿಗಳಾದ ವೀರಭದ್ರಯ್ಯ, ಮೂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಕೃಷ್ಣಶೆಟ್ಟಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

# ಜ.14,15ರಂದು ಅಂಬಿಗರ 10ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥಿ ಮಹಾ ರಥೋತ್ಸವ



**ಮಂಡ್ಯ:** ಅಂಬಿಗರ 10ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥಿ ಮಹಾ ರಥೋತ್ಸವ ಕಾರ್ಯಕ್ರವು ಜ.14,15ರಂದು ಹಾವೇರಿ ಜಿಲ್ಲೆಯ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದಲ್ಲಿ ನೆರವೇರಲಿದೆ ಎಂದು ಪೀಠಾಧ್ಯಕ್ಷ ಶಂತಭೀಷ್ಮಚೌಡಯ್ಯ ಸ್ವಾಮೀಜಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಂಗವಾಗಿ ನಿಜಶರಣ ಅಂಬಿಗರ ಚೌಡಯ್ಯನಗರ ಶಿಲಾಮಂಟಪ, ಕಂಚಿನ ಪುತ್ಥಳಿ ಲೋಕಾರ್ಪಣೆ ಹಾಗೂ ಮಹರ್ಷಿ ವೇದವ್ಯಾಸ ಕಲ್ಯಾಣ ಮಂಟಪ ಉದ್ಘಾಟನೆ ನೆರವೇರಲಿದೆ ಎಂದರು.

ಜ.14ರ ಬೆಳಿಗ್ಗೆ 6 ಗಂಟೆಗೆ ನಿಜಶರಣ ಅಂಬಿಗರ ಚೌಡಯ್ಯನವರ ತೊಟ್ಟಿಲೋತ್ಸವ, 8ಕ್ಕೆ ಐಕ್ಯಮಂಟಪ ಪೂಜೆ, 10ಕ್ಕೆ ಸಾಮೂಹಿಕ ರಕ್ತದಾನ, 11ಕ್ಕೆ ಸಾಮೂಹಿಕ ಸರಳ ವಿವಾಹ, ಲಿಂಗೈಕ್ಯ ಶ್ರೀ ಶಾಂತಮುನಿ ಸ್ವಾಮೀಜಿಗಳ 10ನೇ ಸ್ಮರಣೋತ್ಸವ ಮಧ್ಯಾಹ್ನ 12 ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಹಾಗೂ ವಚನ ಕಂಠಪಾಠ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ, ಸಂಜೆ 7ಕ್ಕೆ ಐತಿಹಾಸಿಕ ಗಂಗಾರತಿ, 8ಕ್ಕೆ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಜ.15ರಂದು ಬೆಳಿಗ್ಗೆ 8ಗಂಟೆಗೆ ಧರ್ಮ ಧ್ವಜಾರೋಹಣ, 9.30ಕ್ಕೆ ಧರ್ಮಸಭೆ, 10ಕ್ಕೆ ಚೌಡಯ್ಯನವರ ಶಿಲಾಮಂಟಪ, 6 ಅಡಿ ಎತ್ತರದ ಕಂಚಿನ ಪುತ್ತಳಿ ಲೋಕಾರ್ಪಣೆ ಹಾಗೂ ಮಹರ್ಷಿ ವೇದವ್ಯಾಸ ಕಲ್ಯಾಣ ಮಂಟಪ ಉದ್ಘಾಟನೆ, 11 ಗಂಟೆಗೆ ಅಂಬಿಗರ ಚೌಡಯ್ಯಅವರ 906ನೇ ಜಯಂತೋತ್ಸವ, ಮಧ್ಯಾಹ್ನ 12 ಶಾಂತಭೀಷ್ಮಚೌಡಯ್ಯ ಮಹಾಸ್ವಾಮೀಜಿಗಳ ಪೀಠಾರೋಹಣ ದಶಮಾನೋತ್ಸವ, ಸಂಜೆ 5ಕ್ಕೆ ವಚನ ಗ್ರಂಥ ಮಹಾರಥೋತ್ಸವ ನಡೆಯಲಿದೆ ಎಂದು ವಿವರಿಸಿದರು.

ಸಾಮೂಹಿಕ ವಿವಾಹ ಮಾಡಿಒಳ್ಳುವವರು ಜ.1 ರೊಳಗೆ ಹಾಗೂ ವಿದ್ಯಾರ್ಥಿ ಪ್ರತಿಭಾ ಪುರಸ್ಕಾರಕ್ಕೆ ಜ.5ರೊಳಗೆ ನೋಂದಾಯಿಸಿಕೊಳ್ಳುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಮಠದ ನಿರ್ದೇಶಕ ಬಸವರಾಜ ಸಪ್ಪನಗೋಳ, ಮಂಡ್ಯ ಜಿಲ್ಲಾ ಗಂಗಾಮತಸ್ತ(ಬೆಸ್ತರ್) ಸಂಘದ ಅಧ್ಯಕ್ಷ ಎಸ್.ರಮೇಶ್, ಗಂಗಾಮತಸ್ತರ ಸರ್ಕಾರಿ ನೌಕರರ ಸಂಘದ ರಾಜ್ಯ ಗೌರವಾಧ್ಯಕ್ಷ ಕೃಷ್ಣಯ್ಯ, ಜಿ.ಪಂ ಮಾಜಿ ಸದಸ್ಯ ವೀರಣ್ಣ, ಎಂ.ಚಂದ್ರು ಇದ್ದರು.


# 6 ವಾಹನಕ್ಕೆ ಗುದ್ದಿ ಟ್ರಕ್ ಪರಾರಿ: 10 ಕಿ.ಮೀ ಬೆನ್ನಟ್ಟಿ ಚಾಲಕನ ಹಿಡಿದ ಸ್ಥಳೀಯರು, ಹಿಗ್ಗಾಮುಗ್ಗಾ ಥಳಿತ..!


**ಆನೇಕಲ್:** ವಿವಿಧ ಸ್ಥಳಗಳಲ್ಲಿ 6ಕ್ಕೂ ಹೆಚ್ಚು ವಾಹನಗಳಿಗೆ ಡಿಕ್ಕಿ ಹೊಡೆದು ಪರಾರಿಯಾಗುತ್ತಿದ್ದ ಪಾನಮತ್ತ ಚಾಲಕನೊಬ್ಬನನ್ನು 10 ಕಿ.ಮೀ.ವರೆಗೂ ಬೆನ್ನಟ್ಟಿ ಹಿಡಿದ ಪೊಲೀಸರ, ನಂತರ ಹಿಗ್ಗಾಮುಗ್ಗಾ ಥಳಿಸಿರುವ ಘಟನೆ ಆನೇಕಲ್ ತಾಲ್ಲೂಕಿನ ಚಂದಾಪುರ ರಸ್ತೆಯಲ್ಲಿ ಭಾನುವಾರ ಮಧ್ಯಾಹ್ನ ನಡೆದಿದೆ.

ಪ್ರೇಮ್ (25) ಟ್ರಕ್ ಚಲಾಯಿಸುತ್ತಿದ್ದ ಚಾಲಕನಾಗಿದ್ದಾನೆ. ಉತ್ತರ ಪ್ರದೇಶ ನೋಂದಣಿಯ ಟ್ರಕ್ ಅತ್ತಿಬೆಲೆ ಗೋದಾಮಿನಿಂದ ಚಂದಾಪುರ ಕಡೆಗೆ ಹೋಗುತ್ತಿತ್ತು. ಮದ್ಯದ ಅಮಲಿನಲ್ಲಿದ್ದ

ಚಾಲಕ ಮೊದಲು ಆನೇಕಲ್‌ನಲ್ಲಿ ಎರಡು ವಾಹನಗಳಿಗೆ ಡಿಕ್ಕಿ ಹೊಡೆದಿದ್ದಾನೆ. ಈ ಘಟನೆಯಲ್ಲಿ ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಅಲ್ಲಿಂದ ಪರಾರಿಯಾಗಿರುವ ಚಾಲಕ ನಂತರ, ಸೂರ್ಯ ನಗರದಲ್ಲಿ ಮೂರು ವಾಹನಗಳು ಮತ್ತು ಅತ್ತಿಬೆಲೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮತ್ತೊಂದು ವಾಹನಕ್ಕೆ ಡಿಕ್ಕಿ ಹೊಡೆದಿದ್ದಾನೆ. ಬಳಿಕ ಸ್ಥಳೀದಲ್ಲಿದ್ದ ವಾಹನ ಚಾಲಕರು, ಟ್ರಕ್ ಚಾಲಕನನ್ನು ಸುಮಾರು 10 ಕಿ.ಮೀವರೆಗೂ ಬೆನ್ನತ್ತಿದ್ದು, ನಂತರ ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಬಳಿಕ ಪೊಲೀಸರ ವಶಕ್ಕೆ ನೀಡಿದ್ದಾರೆ. ನಂತರ ಪೊಲೀಸರು ಆರೋಪಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಿದ್ದಾರೆ. ಈ ಸಂಬಂಧ ಆನೇಕಲ್ ಪೊಲೀಸ್ ಠಾಣೆಯಲ್ಲಿ ಅತಿವೇಗ ಮತ್ತು ನಿರ್ಲಕ್ಷ್ಯದ ಚಾಲನೆಗಾಗಿ ಪ್ರಕರಣ ದಾಖಲಾಗಿದ್ದು, ಗಾಯಗೊಂಡ ಇಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

# ಹಲ್ಮಿಡಿ ಶಾಸನ ಅನಾವರಣಗೊಳಿಸಿದ ಎಂ. ಹೆಚ್ . ಕೃಷ್ಣ





ಕನ್ನಡ ಬಾಷಾ ಪ್ರೇಮಿಗಳಿಗೆ ಹಾಗೂ ಕನ್ನಡ ಇತಿಹಾಸ ಗೊತ್ತಿರುವ ಎಲ್ಲರಿಗೂ ಹಲ್ಮಿಡಿ ಶಾಸನದ ಬಗ್ಗೆ ತಿಳಿದೇ ಇರುತ್ತದೆ . ಹಲ್ಮಿಡಿ ಶಾಸನ ಕನ್ನಡ ಭಾಷೆಯಲ್ಲಿ ಸಿಕ್ಕಿರುವ ಅತ್ಯಂತ ಹಳೆಯ ಪೂರ್ಣ ಪ್ರಮಾಣದ ಶಾಸನವಾಗಿದ್ದು, ಕ್ರಿ.ಶ 450ರ ಸುಮಾರಿಗೆ ಕದಂಬ ವಂಶದ ಕಾಕುಸ್ಥವರ್ಮನ ಕಾಲದಲ್ಲಿ ರಚನೆಯಾಗಿದೆ, ಈ ಶಾಸನ ಕನ್ನಡದ ಆಡಳಿತ ಭಾಷೆಯ ಪ್ರಾಚೀನತೆ ಮತ್ತು ಸಾಂಸ್ಕೃತಿಕ ಮಹತ್ವವನ್ನು ಎತ್ತಿ ತೋರಿಸುತ್ತದೆ. ಈ ಶಾಸನ

ಕದಂಬ ರಾಜ ಕಾಕುಸ್ಥವರ್ಮನ ಸೇನಾಧಿಪತಿ ವಿಜಯರಸನಿಗೆ ಪಲ್ಲವರ ವಿರುದ್ಧದ ಯುದ್ಧದಲ್ಲಿ ವಿಜಯ ಸಾಧಿಸಿದ್ದಕ್ಕಾಗಿ ಪಲ್ಮಿಡಿ (ಹಲ್ಮಿಡಿ) ಮತ್ತು ಮೂಳಿವಳ್ಳಿಯನ್ನು ದಾನವಾಗಿ ನೀಡಿದ ರಾಜಾಜ್ಞೆ.

ಇಂತಹ ಮಹತ್ತರವಾದ ಶಾಸನದ ಬಗ್ಗೆ ಗೊತ್ತಿರುವವರಿಗೆ , ಕನ್ನಡದ ಪ್ರಾಚೀನತೆಯನ್ನು ಜಗತ್ತಿಗೆ ಅನಾವರಣಗೊಳಿಸಿದ ಎಂ. ಹೆಚ್. ಕೃಷ್ಣ ಅವರ ಬಗ್ಗೆ , ಬಹುತೇಕರಿಗೆ ಗೊತ್ತಿಲ್ಲ . ಇದೆ 23 ಡಿಸೆಂಬರ್ ಕೃಷ್ಣ ಅವರ ಪುಣ್ಯ ಸ್ಮರಣೆಯ ದಿನ . ಇಂದು ಅವರನ್ನು ನೆನೆಸಿಕೊಳ್ಳುತ್ತಾ , ಅವರ ಬಗ್ಗೆ ತಿಳಿಯೋಣ .

ಕರ್ನಾಟಕದ ಪುರಾತತ್ವ ಮತ್ತು ಇತಿಹಾಸ ಸಂಶೋಧನಾ ಕ್ಷೇತ್ರವನ್ನು ವೈಜ್ಞಾನಿಕ ನೆಲೆಯಲ್ಲಿ ಸ್ಥಾಪಿಸಿದ ಪ್ರಮುಖ ವ್ಯಕ್ತಿಗಳಲ್ಲಿ ಮೈಸೂರು ಹಟ್ಟಿ ಕೃಷ್ಣ ಅಯ್ಯಂಗಾರ್ (ಎಂ. ಎಚ್. ಕೃಷ್ಣ) ಅಗ್ರಗಣ್ಯರು.

ಸಂಶೋಧನೆ, ತತ್ತ್ವಾಧಾರಿತ ಅಧ್ಯಯನ ಮತ್ತು ಸಾಕ್ಷ್ಯಾಧಾರಿತ ಬರವಣಿಗೆಯ ಮೂಲಕ ಅವರು ದಕ್ಷಿಣ ಭಾರತದ ಇತಿಹಾಸಕ್ಕೆ ದೃಢವಾದ ರೂಪ ನೀಡಿದವರು.

19 ಆಗಸ್ಟ್ 1892ರಂದು ಮೈಸೂರು ನಗರದಲ್ಲಿ ಜನಿಸಿದ ಕೃಷ್ಣ ಅವರು 23 ಡಿಸೆಂಬರ್ 1947ರಂದು ನಿಧನರಾಗುವವರೆಗೆ ಸುಮಾರು ಮೂರು ದಶಕಗಳ ಕಾಲ ಪುರಾತತ್ವ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದರು.

ಪ್ರಾರಂಭಿಕ ಜೀವನ ಮತ್ತು ಶಿಕ್ಷಣ : ಎಂ.ಎಚ್. ಕೃಷ್ಣ ಅವರು ವಿದ್ಯಾವಂತ ಕುಟುಂಬದಲ್ಲಿ ಜನಿಸಿದರು. ಅವರ ತಂದೆ ಹಟ್ಟಿ ರಂಗಯ್ಯಂಗಾರ್ ಅವರು ಸಂಸ್ಕೃತ ಪಂಡಿತರು. ಬಾಲ್ಯದಿಂದಲೇ ಸಾಹಿತ್ಯ, ಇತಿಹಾಸ ಮತ್ತು ಶಾಸ್ತ್ರಗಳ ಮೇಲೆ ಕೃಷ್ಣ ಅವರಿಗೆ ಆಸಕ್ತಿ ಬೆಳೆದಿತ್ತು. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ಮೈಸೂರಿನಲ್ಲಿ ಪೂರ್ಣಗೊಳಿಸಿದ ಅವರು, ಮೈಸೂರು ಮಹಾರಾಜ ಕಾಲೇಜಿನಲ್ಲಿ ವ್ಯಾಸಂಗ ಮಾಡಿ 1911ರಲ್ಲಿ ಬಿ.ಎ ಪದವಿ ಪಡೆದರು. ನಂತರ ಮದ್ರಾಸ್ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣ ಪಡೆದು 1917ರಲ್ಲಿ ಇತಿಹಾಸದಲ್ಲಿ ಎಂ.ಎ ಪದವಿ ಪಡೆದರು.

ವಿದ್ಯಾಭ್ಯಾಸದ ಅವಧಿಯಲ್ಲಿಯೇ ನಾಣ್ಯಶಾಸ್ತ್ರ (Numismatics) ಮತ್ತು ಶಾಸನಶಾಸ್ತ್ರ (Epigraphy) ಇವರ ವಿಶೇಷ ಆಸಕ್ತಿಯ ವಿಷಯಗಳಾಗಿದ್ದವು. ಈ ಕ್ಷೇತ್ರಗಳಲ್ಲಿನ ಅವರ ಗಂಭೀರ ಅಧ್ಯಯನ ಮುಂದಿನ ಸಂಶೋಧನಾ ಬದುಕಿಗೆ ಭದ್ರವಾದ ಅಡಿಪಾಯವನ್ನು ನಿರ್ಮಿಸಿತು.

ವಿದೇಶಿ ತರಬೇತಿ ಮತ್ತು ಅಂತರರಾಷ್ಟ್ರೀಯ ಅನುಭವ : 1920ರ ದಶಕದಲ್ಲಿ ಕೃಷ್ಣ ಅವರು ಉನ್ನತ ತರಬೇತಿಗಾಗಿ ಇಂಗ್ಲೆಂಡಿಗೆ ತೆರಳಿದರು. ಲಂಡನ್‌ನ ಯುನಿವರ್ಸಿಟಿ ಕಾಲೇಜಿನಲ್ಲಿ ಪುರಾತತ್ವ ಶಾಸ್ತ್ರದ ಅಧ್ಯಯನ ನಡೆಸಿದರು. ಅಲ್ಲಿ ಖ್ಯಾತ ಪುರಾತತ್ವ ತಜ್ಞರಾದ ಸರ್ ಫ್ಲಿಂಡರ್ಸ್ ಪೀಟ್ರಿ ಸೇರಿದಂತೆ ಅನೇಕ ವಿದ್ವಾಂಸರ ಮಾರ್ಗದರ್ಶನದಲ್ಲಿ ತರಬೇತಿ ಪಡೆದರು. ಈಜಿಪ್ಟ್‌ನಲ್ಲಿಯೂ ಪುರಾತತ್ವ ಕಾರ್ಯಗಳಲ್ಲಿ ಭಾಗವಹಿಸಿ ಪ್ರಾಯೋಗಿಕ ಅನುಭವ ಗಳಿಸಿದರು. ಈ ಅಂತರರಾಷ್ಟ್ರೀಯ ಅನುಭವಗಳು ಭಾರತೀಯ ಪುರಾತತ್ವ ಸಂಶೋಧನೆಯಲ್ಲಿ ಆಧುನಿಕ ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳಲು ಅವರಿಗೆ ನೆರವಾಯಿತು. ವೃತ್ತಿಜೀವನ ಮತ್ತು ಪುರಾತತ್ವ ಸೇವೆ : ಭಾರತಕ್ಕೆ ಮರಳಿದ ಬಳಿಕ ಕೃಷ್ಣ ಅವರು ಮೈಸೂರು ಸರ್ಕಾರದ ಪುರಾತತ್ವ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದರು. ನಂತರ ಅವರು ಮೈಸೂರು ವಿಶ್ವವಿದ್ಯಾಲಯದ ಇತಿಹಾಸ ವಿಭಾಗದ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದರು. ಈ ಅವಧಿಯಲ್ಲಿ ಅವರು ಪುರಾತತ್ವ ಅಧ್ಯಯನವನ್ನು ಕೇವಲ ದಾಖಲಾತಿ ಸಂಗ್ರಹಕ್ಕೆ ಸೀಮಿತಗೊಳಿಸದೇ, ವೈಜ್ಞಾನಿಕ ವಿಶ್ಲೇಷಣೆ ಮತ್ತು ಅಧ್ಯಯನಕ್ಕೆ ವಿಸ್ತರಿಸಿದರು. ಮೈಸೂರು ರಾಜ್ಯದ ಪುರಾತತ್ವ ಸಂಗ್ರಹಾಲಯದಲ್ಲಿದ್ದ ಸುಮಾರು 6,000ಕ್ಕೂ ಹೆಚ್ಚು ನಾಣ್ಯಗಳನ್ನು ಅವರು ವೈಜ್ಞಾನಿಕವಾಗಿ ವರ್ಗೀಕರಿಸಿದರು. ಜೊತೆಗೆ ಸಾವಿರಾರು ಶಾಸನಗಳನ್ನು ಓದಿ, ದಾಖಲಿಸಿ, ಅವುಗಳ ಇತಿಹಾಸಾತ್ಮಕ ಮಹತ್ವವನ್ನು ವಿವರಿಸಿದರು.

ಪ್ರಮುಖ ಅನ್ವೇಷಣೆಗಳು ಮತ್ತು ಸಂಶೋಧನಾ ಸಾಧನೆ : ಎಂ.ಎಚ್. ಕೃಷ್ಣ ಅವರ ಸಂಶೋಧನಾ ಬದುಕಿನ ಅತ್ಯಂತ ಮಹತ್ವದ ಕೊಡುಗೆಗಳಲ್ಲಿ ಹಲ್ಮಿದಿ ಶಾಸನದ ಅಧ್ಯಯನ ಪ್ರಮುಖವಾಗಿದೆ . ಈ ಶಾಸನವು ಕನ್ನಡ ಭಾಷೆಯ ಅತ್ಯಂತ ಪ್ರಾಚೀನ ಲಿಖಿತ ಸಾಕ್ಷ್ಯಗಳಲ್ಲಿ ಒಂದೆಂದು ಪರಿಗಣಿಸಲಾಗುತ್ತದೆ. ನಾಲ್ಕನೇ ಅಥವಾ ಐದನೇ ಶತಮಾನಕ್ಕೆ ಸೇರಿದ ಈ ಶಾಸನದ ಮೂಲಕ ಕನ್ನಡ ಭಾಷೆಯ ಇತಿಹಾಸಕ್ಕೆ ಹೊಸ ದಿಕ್ಕು ದೊರಕಿತು. ಚಿತ್ತದುರ್ಗ ಜಿಲ್ಲೆಯ ಚಂದ್ರವಳ್ಳಿಯಲ್ಲಿ ನಡೆಸಿದ ಉತ್ಖನನ ಕಾರ್ಯಗಳು ಅವರ ಮತ್ತೊಂದು ಮಹತ್ವದ ಸಾಧನೆ. ಇಲ್ಲಿ ಅವರು ವಿವಿಧ ಕಾಲಘಟ್ಟಗಳಿಗೆ ಸೇರಿದ ಸಾಂಸ್ಕೃತಿಕ ಪದರಗಳನ್ನು ಗುರುತಿಸಿದರು. ಮೌರ್ಯ, ಶಾತವಾಹನ, ಚಾಳುಕ್ಯ ಮತ್ತು ಹೊಯ್ಸಳ ಕಾಲಘಟ್ಟಗಳ ನಿರಂತರ ನಾಗರಿಕ ಬೆಳವಣಿಗೆಯನ್ನು ಅವರು ವೈಜ್ಞಾನಿಕವಾಗಿ ದಾಖಲಿಸಿದರು. ಭಾರತದಲ್ಲಿ ಪುರಾತತ್ವ ಉತ್ಖನನಗಳಲ್ಲಿ ಪದರ ಅಧ್ಯಯನ (Stratigraphy) ವಿಧಾನವನ್ನು ಯಶಸ್ವಿಯಾಗಿ ಅನ್ವಯಿಸಿದ ಮೊದಲ ಸಂಶೋಧಕರಲ್ಲಿ ಒಬ್ಬರು.

**ಅಧ್ಯಾಪನ ಮತ್ತು ಶೈಕ್ಷಣಿಕ ಕೊಡುಗೆ:** ಕೃಷ್ಣ ಅವರು ಕೇವಲ ಪುರಾತತ್ವ ತಜ್ಞರಷ್ಟೇ ಅಲ್ಲದೆ ಶ್ರೇಷ್ಠ ಅಧ್ಯಾಪಕರೂ ಆಗಿದ್ದರು. ಮೈಸೂರು ವಿಶ್ವವಿದ್ಯಾಲಯದಲ್ಲಿ ಅವರು ಅನೇಕ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಪ್ರಸಿದ್ಧ ಇತಿಹಾಸಕಾರರಾದ ಡಾ. ಎಸ್. ಶ್ರೀಕಂಠ ಶಾಸ್ತ್ರಿ ಸೇರಿದಂತೆ ಹಲವರು ಅವರ ಶಿಷ್ಯವರ್ಗಕ್ಕೆ ಸೇರಿದ್ದರು. ಇವರ ಶೈಕ್ಷಣಿಕ ಮಾರ್ಗದರ್ಶನದಿಂದ ಕರ್ನಾಟಕದಲ್ಲಿ ಇತಿಹಾಸ ಅಧ್ಯಯನಕ್ಕೆ ಬಲವಾದ ಪೀಳಿಗೆ ನಿರ್ಮಾಣವಾಯಿತು.

ಗ್ರಂಥಗಳು ಮತ್ತು ಪ್ರಕಟಣೆಗಳು : ಎಂ.ಎಚ್. ಕೃಷ್ಣ ಅವರು ಸುಮಾರು 15ಕ್ಕೂ ಹೆಚ್ಚು ಗ್ರಂಥಗಳು ಮತ್ತು 100ಕ್ಕೂ ಅಧಿಕ ಸಂಶೋಧನಾ ಲೇಖನಗಳನ್ನು ರಚಿಸಿದ್ದಾರೆ. ಅವರ ಲೇಖನಗಳು ಎಪಿಗ್ರಾಫಿಯಾ ಕಾರ್ನಾಟಿಕಾ, ಪುರಾತತ್ವ ಇಲಾಖೆಯ ವಾರ್ಷಿಕ ವರದಿಗಳು ಮತ್ತು ವಿವಿಧ ಶೋಧಪತ್ರಿಕೆಗಳಲ್ಲಿ ಪ್ರಕಟವಾಗಿವೆ. ಬೇಲೂರು, ಹಳೇಬೀಡು, ಶ್ರವಣಬೆಳಗೊಳ, ಶ್ರೀರಂಗಪಟ್ಟಣ ಮುಂತಾದ ಐತಿಹಾಸಿಕ ಸ್ಥಳಗಳ ಕುರಿತು ಅವರು ರಚಿಸಿದ ಮಾರ್ಗದರ್ಶಿ ಗ್ರಂಥಗಳು ಇಂದಿಗೂ ಪ್ರಸ್ತುತವಾಗಿದೆ .

**ಗೌರವಗಳು ಮತ್ತು ಪ್ರಶಸ್ತಿಗಳು :** ಅವರ ಪುರಾತತ್ವ ಮತ್ತು ನಾಣ್ಯಶಾಸ್ತ್ರ ಕ್ಷೇತ್ರದ ಸಾಧನೆಗಾಗಿ ಕೃಷ್ಣ ಅವರಿಗೆ ದೇಶೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಗೌರವ ದೊರಕಿತು. ಅವರು ರಾಯಲ್ ನ್ಯೂಮಿಸ್ಮಾಟಿಕ್ ಸೊಸೈಟಿ ಮತ್ತು ರಾಯಲ್ ಆಂಥ್ರೋಪಾಲಜಿಕಲ್ ಇನ್ಸ್ಟಿಟ್ಯೂಟ್‌ನ ಫೆಲೋ ಆಗಿ ಆಯ್ಕೆಯಾಗಿದ್ದರು.

1947ರಲ್ಲಿ ಎಂ.ಎಚ್. ಕೃಷ್ಣ ಅವರು ವಿಧಿವಶರಾದರೂ, ಅವರ ಸಂಶೋಧನಾ ಪರಂಪರೆ ಇಂದಿಗೂ ಜೀವಂತವಾಗಿದೆ. ಅವರು ಸಂಗ್ರಹಿಸಿದ ದಾಖಲೆಗಳು, ಪ್ರಕಟಿಸಿದ ವರದಿಗಳು ಮತ್ತು ರೂಪಿಸಿದ ಅಧ್ಯಯನ ವಿಧಾನಗಳು ಇಂದಿನ ಪುರಾತತ್ವ ಮತ್ತು ಇತಿಹಾಸ ಸಂಶೋಧಕರಿಗೆ ಮಾರ್ಗದರ್ಶಕವಾಗಿವೆ. ಕರ್ನಾಟಕದ ಪುರಾತತ್ವ ಅಧ್ಯಯನದ ಪಿತಾಮಹರೆಂದು ಅವರನ್ನು ಗೌರವದಿಂದ ಸ್ಮರಿಸಲಾಗುತ್ತದೆ.




ಸ್ವಾಮಿನಾಥನ್
ಬೆಂಗಳೂರು


## ಒಮ್ಮೊಮ್ಮೆ ಹೀಗೂ ಆಗುವುದು

ಅದೇನೋ ಗೊತ್ತಿಲ್ಲ ಬೆಳಗ್ಗೆ ನಿದ್ದೆಯಿಂದ ಎಚ್ಚರವಾಗಿ ಕಣ್ಣು ಬಿಟ್ಟು ನೋಡಿದಾಗ ಏಕೋ ಮನಸು ತುಂಬಾ ಬಿಕೋ ಅನ್ನಿಸುತ್ತಿತ್ತು, ದುಃಖ ಕೂಡ ಉಮ್ಮಳಿಸಿ ಬಂತು. ಒಂದು ಕಡೆಯಿಂದ ಭಯವು ವ್ಯಾಪಿಸಿದಂತೆ ಇತ್ತು, ಅಯ್ಯೋ ನನಗೇಕೆ ಈ ರೀತಿ ಆಗುತ್ತಿದೆ ಅದೂ ಬೆಳ್ಳಂಬೆಳಗ್ಗೆ ನನಗೆ ಗೊಂದಲವಾಯಿತು, ಕಾರಣ ಕೂಡ ಏನೆಂದು ತಿಳಿಯದಾಯಿತು. ಹೌದು, ಮನಸ್ಸು ತುಂಬಾ ಭಯದ ವಾತಾವರಣ ಮೂಡಿ ತುಂಬಾ ನೋವಿನಲ್ಲಿತ್ತು. ಆದರೆ ನಿದ್ದೆಯಿಂದ ಆಗ ತಾನೆ ಎದ್ದ ಮನಸ್ಸಿಗೆ ಯಾವ ನೋವೆಂದು ಅರಿವಾಗಲಿಲ್ಲ. ಎಚ್ಚರವಾಗಿದ್ದರೂ ಕೂಡ ಅಲ್ಲೇ ಸ್ವಲ್ಪ ಹೊತ್ತು ಸುಮ್ಮನೆ ಮಂಚದಲ್ಲಿ ಹೊರಳಾಡುತ್ತ ಹಿಂದಿನ ದಿನ ನಡೆದ ವಿಷಯಗಳನ್ನು ನೆನಪು ಮಾಡಕೊಂಡೆ, ದಿನವೆಲ್ಲಾ ಚೆನ್ನಾಗಿಯೇ ಇತ್ತು, ನಾನು ಯಾರೊಂದಿಗೂ ಮನಸ್ತಾಪ ಮಾಡಿಕೊಳ್ಳುವ ಘಟನೆ ನಡೆದಿರಲಿಲ್ಲ. ನನ್ನೊಂದಿಗೆ ಯಾರಿಂದಲೂ ಯಾವ ಜಗಳವೂ ಆಗಿರಲಿಲ್ಲ. ಹೀಗಿದ್ದೂ ಯಾಕೆ ಈ ವೇದನೆ ಎಂದು ಯೋಚಿಸುತ್ತಾ ಇದ್ದೆ. ಹಾಂ......ದಿನದ ಕೊನೆಯಲ್ಲಿ ಮಲಗುವ ಮುನ್ನ ಜಿಯೋ ಹಾಟ್ ಸ್ಟಾರ್ ನಲ್ಲಿ ನಾನೊಂದು ಸಿನೆಮಾವನ್ನು ಅರ್ಧ ನೋಡಿ ಮಲಗಿದ್ದೆ. ಮಿಕ್ಕಿದ್ದು ನಾಳೆ ನೋಡಿದರಾಯ್ತು ಎಂದು. ಸಿನೆಮಾ "ಡೈಸ್ ಇರೇ' ಇದೊಂದು ಹಾರರ್ ಸ್ಟೋರಿ. ಇದೊಂದು ನಾಜಿ ಅಧಿಕಾರಿಗಳ ಗುಂಪು ನಡೆಸಿದ ಒಂದು ರಹಸ್ಯ ಪದ್ಧತಿ ಮತ್ತು ಯುದ್ಧದ ನಂತರ ಜಪಾನ್‌ನಲ್ಲಿ ಅಸಾಮಾನ್ಯ ಶಕ್ತಿಗಳು ನಗರವನ್ನು ಆಕ್ರಮಿಸಿ, ರೆನ್ ಫುಜಿಯಂತಹ ಪಾತ್ರಗಳು ಸಾಮಾನ್ಯ ಜೀವನದ ಸಂತೋಷವನ್ನು ಮರಳಿ ಪಡೆಯಲು ಹೋರಾಡುವ ಕುರಿತಾದ ಕಥೆ. ಸಂಕ್ಷಿಪ್ತವಾಗಿ ಹೇಳುವುದಾದರೆ, ಇದು ನಾಜಿಗಳ ರಹಸ್ಯ ಪದ್ಧತಿ ಮತ್ತು ಅಸಾಮಾನ್ಯ ಶಕ್ತಿಗಳ ಆಕ್ರಮಣದ ಹಿನ್ನೆಲೆಯಲ್ಲಿ ನಡೆಯುವ, ವೈಯಕ್ತಿಕ ನೋವು ಮತ್ತು ಸಾಮಾನ್ಯ ಜೀವನದ ಹಂಬಲದ ಕಥೆಯಾಗಿದೆ. ಸಿನೆಮಾ ಸೂಪರ್ ಅಂತ ಮತ್ತೊಮ್ಮೆ ನೋಡೋ ಆಸೆಯಾಗಿತ್ತು. ಎಲ್ಲಾವನ್ನು ನೋಡುತ್ತಾ ಸಕ್ಕತ್ ಎಂಜಾಯ್ ಮಾಡ್ತಾ ಇದ್ದೆ. ನನ್ನದು ಮೊದಲೇ ಆಳವಾದ ಇನ್ವಾಲ್ಮೆಂಟ್! ಬೇರೆ, ಹಾಗಾಗಿ ಹೀಗಾಗಿರಬಹುದೇನೋ ಅಂತ ಅಂದ್ಕೊಂಡೆ.

ಹ್! ಕಾರಣ ಗೊತ್ತಾದ ಮೇಲೆ ಪರಿಹಾರ ಹುಡುಕಲ್ವಾ ನಾನು ಅಂದ್ಕೊಂಡು ಸರಿ ಇವತ್ತು ರಾತ್ರಿ ಪೂರ್ತಿ ಸಿನೆಮಾ ನೋಡಿ ಸಂತೋಷವಾಗಿ ಮಲಗೋಣ ಎಲ್ಲಾ ಸರಿ ಹೋಗುತ್ತೆ ಅಂದ್ಕೊಂಡು ಕೆಲಸಕ್ಕೆ ರೆಡಿಯಾದೆ.. ಈ ದಿನ ನಿಜವಾಗ್ಲೂ ಫುಲ್ ಖುಷ್ ಆಗಿತ್ತು... ಹೌದು ಒಮ್ಮೊಮ್ಮೆ ಹೀಗೂ ಆಗುವುದುಂಟು. ಮತ್ತೆ ಇವತ್ತು ಅರ್ಧ ನೋಡಿ ನಿಲ್ಲಿಸಿದ ಸಿನೆಮಾವನ್ನು ಪೂರ್ತಿ ನೋಡಿ ಮುಗಿಸಿದೆ. ಡೈಸ್ ಇರೇ ಕಥೆಯು ಅಪರಾಧ ಪ್ರಜ್ಞೆ ಮತ್ತು ವಿಮೋಚನೆಯ ಸುತ್ತ ಹೆಣೆಯಲ್ಪಟ್ಟಿದೆ. ಹಾರರ್ ಸಿನಿಮಾವಾದರೂ ಸಹ ಒಬ್ಬ ಯುವ ಶ್ರೀಮಂತ ವಾಸ್ತುಶಿಲ್ಪಿ ತನ್ನ ಆತ್ಮೀಯ ಸ್ನೇಹಿತೆಯ ದುರಂತ ಸಾವಿನ ನಂತರ ಆಕೆಯ ಮನೆಗೆ ಭೇಟಿ ನೀಡುತ್ತಾನೆ. ಅಲ್ಲಿ, ರೋಹನ್ ಪಾತ್ರವು ಆ ಸಾವಿನ ಹಿಂದಿನ ರಹಸ್ಯವನ್ನು ಭೇದಿಸಲು ಹೊರಡುತ್ತದೆ. ಕೇವಲ ಭಯಾನಕ ದೃಶ್ಯಗಳಿಗೆ ಸೀಮಿತವಾಗದೆ, ಮಾನಸಿಕ ಆಳವನ್ನು ಸ್ಪರ್ಶಿಸುವ ಮೂಲಕ ಡೈಸ್ ಇರೇ ಚಿತ್ರವನ್ನು ವಿಭಿನ್ನವಾಗಿಸಿದ್ದಾರೆ. ಇದನ್ನೆಲ್ಲಾ ಯಾಕೆ ಹೇಳೋ ಪ್ರಯತ್ನ ಅಂತ ನಿಮಗೆ ಅನ್ನಿಸಬಹುದು, ನಮ್ಮ ಮನಸ್ಸನ್ನು ನಾವು ದುಃಖದಿಂದ ಸಂತಸದೆಡೆಗೆ ನಡೆಸಬಹುದು, ಇದು ಸಾಧ್ಯವೆಂದು ಹೇಳಲು ಒಂದು ಉದಾಹರಣೆ ಅಷ್ಟೆ. ಯಾಕೆಂದರೆ ಮನದ ನೋವು ಸಣ್ಣ ನೋವೇ ಇರಬಹುದು, ಅದರಿಂದ ದೊಡ್ಡ ಆಘಾತಗಳೂ ಕೂಡ ಉಂಟಾಗಬಹುದು, ಅದರಲ್ಲಿ ಮನಸ್ಸನ್ನು ನಡೆಸುವ ನಮ್ಮ ಪ್ರಯತ್ನ ಪ್ರಾಮಾಣಿಕವಾಗಿರಬೇಕು, ಈ ಕ್ರಿಯೆಯಲ್ಲಿ ಸೋತಾಗ, ಆ ಸೋಲನ್ನೇ ಸೋಮಾರಿತನವಾಗಿ ಮುಂದುವರೆಸದೆ ಕಾರ್ಯಪ್ರವೃತ್ತರಾದರೆ ಖಂಡಿತ ಎಲ್ಲವೂ ಸಾಧ್ಯ.



ಪುಷ್ಪ ಪ್ರಸಾದ್



# ಐದು ಪರ್ಯಾಯ ಶ್ರೀಕೃಷ್ಣನ ಪೂಜೆಯನ್ನು ಮಾಡಿ ಕೃಷ್ಣನ ಉಪದೇಶಗಳಂತೆ ಜೀವಿಸಿದ ಸಂತ"ಶ್ರೀ ವಿಶ್ವೇಶ ತೀರ್ಥರು"


ಶ್ರೀ ವಿಶ್ವೇಶ ತೀರ್ಥರು ಇಂದಿನ ಕಾಲದ ಮಹಾನ್ ಸಂತರಲ್ಲಿ ಒಬ್ಬರು ಉಡುಪಿ ಸಮೀಪದ ರಾಮಕುಂಜದಲ್ಲಿ 1931ರ ಎಪ್ರಿಲ್ 27ರಂದು ವೆಂಕಟರಮಣರಾಗಿ ಜನಿಸಿದ ವಿಶ್ವೇಶತೀರ್ಥರ ಪೂರ್ವಾಶ್ರಮದ ತಂದೆ ನಾರಾಯಣಾಚಾರ್ಯ, ತಾಯಿ ಕಮಲಮ್ಮ. ಇವರ ಎರಡನೇ ಮಗನಾಗಿ ಪೂಜ್ಯರು ಪ್ರಜಾಪತಿ ಸಂವತ್ಸರದ ವೈಶಾಖ ಶುದ್ಧ ದಶಮಿ ದಿನ ಜನಿಸಿದರು.

ರಾಮಕುಂಜದ ಹಳ್ಳಿಯ ಸಂಸ್ಕೃತ ಎಲಿಮೆಂಟರಿ ಶಾಲೆಯಲ್ಲಿ ಪ್ರಾಥಮಿಕ ವಿದ್ಯಾಭ್ಯಾಸ. ಏಳನೆಯ ವರ್ಷದಲ್ಲೇ ಗಾಯತ್ರಿಯ ಉಪದೇಶ. ಉಪನಯನಕ್ಕೂ ಮುಂಚೆ, ಆರು ವರ್ಷದ ಸಣ್ಣವಯಸ್ಸಿನಲ್ಲಿ ಒಮ್ಮೆ ಇವರ ತಂದೆ ತಾಯಿ ಮಗನನ್ನು ಉಡುಪಿಗೆ ಕರೆ ಪರ್ಯಾಯಕ್ಕೆ ಕರೆ ತಂದರು ವೇ ನಡೆದಿತ್ತು. ತಂದೆ ತಾಯಿ ವೆಂಕಟರಮಣನನ್ನು ಸ್ವಾಮಿಗಳ ಭೇಟಿಗೆ ಕರೆದುಕೊಂಡು ಹೋದರು. ಪೇಜಾವರ ಮಠಾಧೀಶರಾದ ಶ್ರೀ ವಿಶ್ವಮಾನ್ಯ ತೀರ್ಥರಿಗೆ ವೆಂಕಟರಮಣ ಭಕ್ತಿಯಿಂದ ನಮಸ್ಕರಿಸಿದ. ಪುಟ್ಟ ಹುಡುಗನ ಮುಗ್ಧ ಮುಖ, ಅಲ್ಲಿ ತುಂಬಿದ ಭಕ್ತಿ ಭಾವ, ನಡೆಯ ಚುರುಕುತನ ಎಲ್ಲ ಗಮನಿಸಿದ ಸ್ವಾಮಿಗಳಿಗಳು ನೀನು ನನ್ನಂತೆ ಸ್ವಾಮಿಯಾಗುತ್ತೀಯಾ ಎಂದು ಕೇಳಿದಾಗ

ವೆಂಕಟರಮಣ ಹ್ಞೂ, ಆಗುತ್ತೇನೆ" ಎಂದುತ್ತರಿಸಿದ್ದರು

ಶ್ರೀ ವಿಶ್ವಮಾನ್ಯತೀರ್ಥರು ಸಂಚಾರದಲ್ಲಿದ್ದಾಗ ಹಂಪೆಯನ್ನು ತಲುಪಿದರು. ವ್ಯಾಸತೀರ್ಥರ ತಪೋಭೂಮಿಯಾದ ಹಂಪೆಯಲ್ಲಿ ಶಿಷ್ಯನಿಗೆ ಆಶ್ರಮ ನೀಡುವ ನಿರ್ಧಾರ ಗಟ್ಟಿಗೊಂಡಿತು. ಅವರು ವಿಳಂಬ ಮಾಡದೆ ವೆಂಕಟರಮಣನನ್ನು ಕರೆಸಿಕೊಂಡರು. ಆಗಷ್ಟೇ ಉಪನೀತನಾಗಿದ್ದ ವಟು ವೆಂಕಟರಮಣ ಹಿರಿಯರ ಜತೆ ಹಂಪೆಗೆ ತೆರಳಿದ. ಬಹುಧಾನ್ಯ ಸಂವತ್ಸರದ ಮಾರ್ಗಶಿರ ಶುದ್ಧ ಪಂಚಮಿಯಂದು (3.12.1938) ವೆಂಕಟರಮಣನಿಗೆ ಹಂಪೆಯ ಯಂತ್ರೋದ್ಧಾರ ಮುಖ್ಯಪ್ರಾಣನ ಸನ್ನಿಧಿಯಲ್ಲಿ ಸನ್ಯಾಸಾಶ್ರಮ ನೀಡಲಾಯಿತು. ರಾಮಕುಂಜದ ಮುಗ್ಧ ಬಾಲಕ, ಏಳು ವಯಸ್ಸಿನ ಹಸುಳೆ ವೆಂಕಟರಮಣ ಅಧೋಕ್ಷಜ ತೀರ್ಥರ ಸಂಸ್ಥಾನದ ಉತ್ತರಾಧಿಕಾರಿಯಾಗಿ, ಪೇಜಾವರ ಮಠದ ಪರಂಪರೆಯ 32ನೆಯ ಯತಿಯಾಗಿ, ಆಚಾರ್ಯ ಮಧ್ವರ ವೇದಾಂತ ಪೀಠವನ್ನೇರಿದರು ಶ್ರೀ ವಿಶ್ವೇಶ ತೀರ್ಥರಾದರು

ಶ್ರೀ ವಿದ್ಯಾಮಾನ್ಯ ತೀರ್ಥರು ಉಡುಪಿಗೆ ಬಂದರು ಶ್ರೀಪಾದರು ಮಾಧ್ವ ಯತಿಗಳಲ್ಲೇ ಅಗ್ರಮಾನ್ಯ ಪಂಡಿತರೆಂದು ಖ್ಯಾತರಾದವರು. ಆ ಸಮಯದಲ್ಲಿ ಶ್ರೀ ವಿಶ್ವೇಶತೀರ್ಥರು ಶ್ರೀವಿದ್ಯಾಮಾನ್ಯರ ಕಣ್ಣಿಗೆ ಬಿದ್ದರು. ಬಾಲ ಯತಿಯ ಚುರುಕು ಬುದ್ಧಿಯ ಚಾಕಚಕ್ಯ ಯತಿಯ ಮನ ಗುರುಗಳ ಮನ ಸೆಳೆಯಿತು.1943ರ ಫೆಬ್ರವರಿ ತಿಂಗಳು. ಶ್ರೀವಿದ್ಯಾಮಾನ್ಯ ತೀರ್ಥರು ಭಂಡಾರಕೇರಿಯಲ್ಲಿ ಶ್ರೀ ಮದ್ವರಾದ್ಧಾಂತ ಸಂವರ್ಧಿನೀ





ಸಭೆಯನ್ನು ಸ್ಥಾಪಿಸಿದರು. ವಿದ್ವಾಂಸರ ಮೇಳವೇ ಭಂಡಾರಕೇರಿಗೆ ಧಾವಿಸಿತು. ಆ ಬಾರಿಯ ಮಧ್ವ ನವಮಿಯ ವಿದ್ವತ್ಸಭೆಯ ಅಧ್ಯಕ್ಷತೆಯನ್ನು 12ರ ಬಾಲಯತಿ ಶ್ರೀ ವಿಶ್ವೇಶ ತೀರ್ಥರಿಗೆ ಒಪ್ಪಿಸಿದರು. ಈ ವಾಮನಮೂರ್ತಿಯ ವಿದ್ಯೆಯ ತ್ರಿವಿಕ್ರಮಾವತಾರವನ್ನು ಅವರು ಅಂದೇ ಗುರುತಿಸಿದ್ದರು.

ಶ್ರೀ ವಿಶ್ವೇಶ ತೀರ್ಥರು ಶ್ರೀ ವಿದ್ಯಾಮಾನ್ಯ ತೀರ್ಥರಲ್ಲಿಯೇ ವ್ಯಾಸಂಗಕ್ಕೆ ಮಾಡಲಾರಾಂಭಿಸಿದರು. ಭಂಡಾರಕೇರಿಯ ಗುರುಕುಲ ವಾಸ ಅವರ ಏಕಾಂತ ಚಿಂತನೆಗೆ, ಬ್ರಹ್ಮಚರ್ಯದ ಪಾಲನೆಗೆ ಮತ್ತು ಆಳವಾದ ಅಧ್ಯಯನಕ್ಕೆ ಹೇಳಿ ಮಾಡಿಸಿದಂತಿತ್ತು. ಆಗಿನ ಕಾಲದಲ್ಲಿ .ಮಾಧ್ವ ವಿದ್ವಾಂಸರಲ್ಲಿಯೇ ಅಗ್ರಮಾನ್ಯರಾಗಿದ್ದ ವಿದ್ಯಾಮಾನ್ಯ ತೀರ್ಥರ ಮಾರ್ಗದರ್ಶನದಲ್ಲಿ ವಿಶ್ವೇಶ ತೀರ್ಥರ ಅಧ್ಯಯನ ಅವರ ಶಿಷ್ಯತ್ವ ಅಖಂಡವಾಗಿ ಆಳವಾದ ಅಧ್ಯಯನದತ್ತ ಸಾಗಿತು. ಎಂಟು ವರ್ಷಗಳ ನಿರಂತರ ಅಧ್ಯಯನದಲ್ಲಿ ಶ್ರೀವಿದ್ಯಾಮಾನ್ಯ ತೀರ್ಥರು ತಮ್ಮ ಜ್ಞಾನವನ್ನು ಧಾರೆಯೆರೆದು ಶ್ರೀವಿಶ್ವೇಶ ತೀರ್ಥರನ್ನು ಆಧ್ಯಾತ್ಮಿಕ ಲೋಕಕ್ಕೆ ದೊಡ್ಡ ಕೊಡುಗೆಯನ್ನಾಗಿ ನೀಡಿದರು. ಶ್ರೀವಿಶ್ವೇಶ ತೀರ್ಥರಿಗೆ 20ರ ವಯಸ್ಸಿನಲ್ಲಿಯೇ 1951ರಲ್ಲಿ ನಂಜನಗೂಡಿನಲ್ಲಿ ಆಗಮತ್ರಯ ವಿದ್ವಾಂಸರ ಸಮ್ಮೇಳನದಲ್ಲಿ ಎಲ್ಲ ಪಂಡಿತರ ಒಮ್ಮತದಿಂದ ಆ ಸಮ್ಮೇಳನದ ಅಧ್ಯಕ್ಷತೆಯ ಹೊಣೆಯನ್ನು ಕೊಡಲಾಗಿತ್ತು, ಆ ಸಮಯದಲ್ಲಿ ಮೈಸೂರು ಅರಸರಾಗಿದ್ದ ದಿ. ಜಯಚಾಮರಾಜೇಂದ್ರ ಒಡೆಯರು ಉಪಸ್ಥಿತಿಯಲ್ಲಿ ವಿಜೃಂಭಣೆಯ ಕಾರ್ಯಕ್ರಮದಲ್ಲಿ ತರುಣ ಯತಿಗಳ ತೇಜಸ್ಸಿಗೆ, ಪಾಂಡಿತ್ಯಕ್ಕೆ ತಲೆದೂಗಿದ ಒಡೆಯರು ಶ್ರೀಪಾದರನ್ನು ಅರಮನೆಗೆ ಕರೆಸಿ ಪೂಜೆ ಮಾಡಿಸಿದರು.


1956 ಜುಲೈ 28, ಟೀಕಾಚಾರ್ಯರ ಪುಣ್ಯದಿನದಂದು ಬೆಂಗಳೂರಿನಲ್ಲಿ ಪೂರ್ಣಪ್ರಜ್ಞ ವಿದ್ಯಾಪೀಠದ ಸ್ಥಾಪನೆ. 12 ವರ್ಷಗಳ ಕಾಲ ನಿರಂತರ ಶಾಸ್ತ್ರಾಧ್ಯಯನ ನಡೆಸುವ ಗುರುಕುಲದ ಮಾದರಿಯ ನಾಡಿನ ಹೆಮ್ಮೆಯ ಆಧ್ಯಾತ್ಮ ವಿದ್ಯಾಕೇಂದ್ರವನ್ನು ಸ್ಥಾಪಿಸಿದರು. ಅಂದಿನಿಂದ ಇಂದಿನವರೆಗೂ ನಿರಂತರವಾಗಿ ಸಾವಿರಾರು ಜನ ವಿದ್ಯಾರ್ಥಿಗಳು ಕಲಿತು ತಮ್ಮ ಆಧ್ಯಾತ್ಮಿಕ ಹಾಗೂ ಲೌಕಿಕ ಜೀವನದಲ್ಲಿ ಪ್ರಸಿದ್ಧ ವಿದ್ವಾಂಸರು ದೇಶದಾದ್ಯಂತ ಇದ್ದಾರೆ.

1965ರಲ್ಲಿ ಕೊಚ್ಚಿಯ ಮಹಾರಾಜರು, ದೊಡ್ಡ ಸಂಸ್ಕೃತ ವಿದ್ವಾಂಸರು ಮಾತ್ರವಲ್ಲದೆ ನ್ಯಾಯ ಶಾಸ್ತ್ರದಲ್ಲಿ ವಿಶೇಷ ಪರಿಣತರು ಆಗಿದ್ದವರು ಪೇಜಾವರ ಶ್ರೀಪಾದರನ್ನು ವಾಕ್ಯಾರ್ಥಕ್ಕೆ ಆಹ್ವಾನಿಸಿದರು. ಮೊದಲು ನ್ಯಾಯ ಶಾಸ್ತ್ರದಲ್ಲಿ ಚರ್ಚೆ. ಅನಂತರ ದ್ವೈತಾದ್ವೈತ ವಿಮರ್ಶೆ. ಶ್ರೀಪಾದರ ಸಮರ್ಥನೆಗೆ ಮಹಾರಾಜರು ಮನಸೋತರು. ಅರಮನೆಯಲ್ಲಿ ಶೀಪಾದರನ್ನು ವೈಭವದಿಂದ ಸನ್ಮಾನಿಸಿ ಕಳಿಸಿಕೊಟ್ಟರು.

1966ರಲ್ಲಿ ಕಾಶಿಯಲ್ಲೊಂದು ವಿದ್ವತ್ ಸಭೆಯಲ್ಲಿ ದೇಶದಲ್ಲಿ ಖ್ಯಾತರಾದ ಮಹಾನ್ ಅದ್ವೈತ ವಿದ್ವಾಂಸ ಅನಂತಕೃಷ್ಣ ಶಾಸ್ತ್ರಿಗಳು, ಅಖಿಲ ಭಾರತ ಖ್ಯಾತಿಯ ಮಹಾ ತರ್ಕ ಪಂಡಿತ ರಾಜರಾಜೇಶ್ವರ ಶಾಸ್ತ್ರಿ ದ್ರಾವಿಡ ಮುಂತಾದ ದಿಗ್ಗಜರೊಡನೆ ಶಾಸ್ತ್ರಾರ್ಥ ಚರ್ಚೆ. ಅಂತಹ ಮಹಾನ್ ವಿದ್ವಾಂಸರೂ ಕೂಡ ಶ್ರೀಗಳ ಮುಂದೆ ಸೋಲಲೇ ಬೇಕಾಯಿತು ಇಂತಹ ಅನೇಕ ಉದಾಹರಣೆಗಳು ಇವೆ. ಪುಣೆ ಪ್ರಯಾಗ ಮುಂತಾದ ಎಲ್ಲ ಕಡೆಯೂ, ಎಲ್ಲಾ ವಿದ್ವತ್ ಸಭೆಗಳಲ್ಲೂ ಶ್ರೀಪಾದರು ತಮ್ಮ ವಿದ್ವತ್ತಿನ ಮೂಲಕ ಕಂಗೊಳಿಸಿದರು.

ತಮ್ಮ ಪರ್ಯಾಯದ ಅವಧಿಯಲ್ಲಿ 1968 ಆಗಸ್ಟ್ 18ರಂದು ಉಡುಪಿಯಲ್ಲಿ, ಕೃಷ್ಣನ ಸನ್ನಿಧಿಯಲ್ಲಿ, ಶ್ರೀಕೃಷ್ಣ ಉಚಿತ ಚಿಕಿತ್ಸಾಲಯದ ಉದ್ಘಾಟನೆ ಮಾಡಿ ಬಡ ರೋಗಿಗಳ ಅವಶ್ಯಕತೆಗೆ ಹೆಗಲು ಕೊಟ್ಟರು. ಶ್ರೀಪಾದರ ಸಾಮಾಜಿಕ ಕಳಕಳಿಗೆ ಇಂತಹ ನೂರಾರು ನಿದರ್ಶನಗಳಿವೆ. ಉಡುಪಿಯಲ್ಲಿ ಶ್ರೀಪಾದರ ನೇತೃತ್ವದಲ್ಲಿ ವಿಶ್ವ ಹಿಂದೂ ಪರಿಷತ್ತಿನ ಮಹಾಸಮ್ಮೇಳನ ನಡೆಯಿತು.ಹಿಂದೂಗಳೆಲ್ಲ ಒಂದಾಗಿ ಬಂಧುಭಾವದಿಂದ ಬದುಕಬೇಕು ಎಂಬ ಸಂದೇಶವನ್ನು ಶ್ರೀಪಾದರು ಈ ವೇದಿಕೆಯಲ್ಲಿ ನೀಡಿದರು. ಅಸ್ಪೃಶ್ಯತೆಯ ವಿರುದ್ಧ ಗಾಂಧಿ ಜಿಯವರ ಪ್ರಭಾವಕ್ಕೆ ಒಳಗಾಗಿ ಮಾಡಿದ ಕಾರ್ಯಗಳು ಅನೇಕ, 5 ದಶಕಗಳ ಹಿಂದೆ ಶ್ರೀಪಾದರು ಮೊದಲು ಹರಿಜನ ಕೇರಿಗೆ ಹೋದಾಗ ಬಂದ ಟೀಕೆಗಳಿಗೆ ನೊಂದ ಶ್ರೀಪಾದರು ಮೌನವಾಗಿಯೇ ತಮ್ಮ ಸಾಮಾಜಿಕ ಕಾರ್ಯಗಳು ಕೃಷ್ಣಮಠದ ಕಾರ್ಯ ಹಾಗೂ ಆಚರಣೆಗಳಲ್ಲಿ ಧಾರ್ಮಿಕ ನಂಬಿಕೆಗೆ ಧಕ್ಕೆ ತರದೇ ಆಧುನಿಕ ವಿಚಾರ ಹಾಗೂ ಸಾಮಾಜಿಕ ನ್ಯಾಯದ ಚಿಂತನೆ ಹಾಗೂ ಆಚರಣೆಗೆ ಪ್ರೋತ್ಸಾಹ ನೀಡಿದವರಗಿದ್ದರು. ಹಾಗೆಂದು ಸಾರ್ವಜನಿಕ ಜೀವನದಲ್ಲಿ ಸಕ್ರಿಯರಾಗಿದ್ದು ಕೊಂಡು ತಮ್ಮ ಯತಿ ಧರ್ಮದ ಯಾವ ನಿಯಮವನ್ನೂ ಕೈ ಬಿಟ್ಟವರಲ್ಲ. ಅಖಂಡವಾದ ಬ್ರಹ್ಮಚರ್ಯೆ, ನಿತ್ಯವೂ ಪ್ರಣವ ಜಪ, ಸಂಸ್ಥಾನದ ಮೂರ್ತಿಗಳ ಪೂಜೆ, ವಿದಾರ್ಥಿಗಳಿಗೆ ವೇದಾಂತ ಗ್ರಂಥಗಳ ಪಾಠ ಪ್ರವಚನ ಇವು ಅವರ ಜೀವನದ ಅವಿಭಾಜ್ಯ ಅಂಗಗಳಾಗಿ ನಿರಂತರವಾಗಿ ಆ ಜೀವನ ಪರ್ಯಂತ ನಡೆಸಿಕೊಂಡು ಬಂದಿದ್ದರು.

ಆಂಧ್ರದ ಚಂಡಮಾರುತಕ್ಕೆ ಬಲಿಯಾಗಿ ಹಂಸಲದೀವಿಯ ಜನರಿಗೆ ಮಠದ ಕಡೆಯಿಂದ 150 ಮನೆಗಳನ್ನು ಕಟ್ಟಿಸಿ ತಮ್ಮ ಮಾತೃ ವಾತ್ಸಲ್ಯ ಪ್ರದರ್ಶಿಸಿದರು 26–7–1978ರಂದು ಅವುಗಳ ಉದ್ಘಾಟನೆಯಾಗಿ ಮನೆಯಿಲ್ಲದವರೆಲ್ಲ ನೆಲೆ ಪಡೆದರು. ಕರ್ನಾಟಕದಲ್ಲಿ ನೆರೆ ಹಾವಳಿಯಿಂದ ಸಾವಿರಾರು ಮಂದಿ ಬೀದಿಯಲ್ಲಿ ನಿಂತಾಗಲೂ ಪೇಜಾವರ



ಶ್ರೀಪಾದರು ಪ್ರಕೃತಿಯ ಕೋಪಕ್ಕೆ ಬಲಿಯಾದವರ ನೆರವಿಗೆ ನಿಂತರು. ಪೀಠಾಧಿಪತಿಯಾಗಿ ಸಮಾಜದಲ್ಲಿ ಧರ್ಮ ಉಳಿಸಲು ಹೇಗೆ ದಿನ ದುಃಖಿಗಳ ಅವಶ್ಯಕತೆ ಇರುವವರಿಗೆ ಗಿ ಹೇಗೆ ಸ್ಪಂದಿಸಬೇಕು ಎನ್ನುವುದಕ್ಕೆ ಮಾದರಿಯಾಗಿ ನಿಂತರು. ವಿದ್ಯಾರ್ಥಿವೇತನ ನೀಡುವುದು, ಬೇರೆ ಬೇರೆ ಊರುಗಳಲ್ಲಿ ಮಾಧ್ವ ಮಂಡಲದ ವಿದ್ಯಾರ್ಥಿ ನಿಲಯಗಳು, ಕಡಿಮೆ ದರದಲ್ಲಿ ಚಿಕಿತ್ಸೆ ನೀಡುವ ಆಸ್ಪತ್ರೆಗಳ ಸ್ಥಾಪನೆ, ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ನಮ್ಮ ಧರ್ಮ ಸಂಸ್ಕೃತಿಯನ್ನು ಬಿಡದೆ ಆಧುನಿಕ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ, ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಧನ ಸಹಾಯ, ಮುಪ್ಪಿನ ಸಮಯದಲ್ಲಿ ನೋಡಿ ಕೊಳ್ಳಲು ಇಲ್ಲದವರಿಗಾಗಿ ವೃದ್ಧಾಶ್ರಮ, ಗೋವುಗಳ ಪಾಲನೆಗೆ ಗೋಶಾಲೆಗಳು.

ಪೇಜಾವರ ಶ್ರೀಪಾದರ ಸಾರ್ವಜನಿಕ ಲೋಕ ಕಲ್ಯಾಣದ ಕಾರ್ಯಗಳನ್ನು ಪಟ್ಟಿ ಮಾಡುತ್ತ ಹೋದರೆ ದೊಡ್ಡ ಹೊತ್ತಿಗೆಯೇ ಆದೀತು.



ಐದು ಪರ್ಯಾಯಗಳನ್ನು ವಿಭಿನ್ನ ರೀತಿಯಲ್ಲಿ ಸಮಾಜದ ಎಲ್ಲ ವರ್ಗದ ಜನರಿಗೂ ಸೇವೆಯ ಅವಕಾಶ ಮಾಡಿಕೊಟ್ಟು ಧಾರ್ಮಿಕವಾಗಿ ಸಾಮಾಜಿಕವಾಗಿ 100% ಯತಿ ಧರ್ಮ ಪಾಲಿಸುತ್ತ ನಡೆದ ಜೀವ ಶ್ರೀ ವಿಶ್ವೇಶತೀರ್ಥ ಶ್ರೀಪಾದರು. ಪ್ರತಿ ಪರ್ಯಾಯದಲ್ಲಿ ಒಂದೊಂದು ವಿಶೇಷ ಬಗೆಯ ಸೇವೆಯನ್ನು ಕೃಷ್ಣನಿಗೆ ಸಲ್ಲಿಸುತ್ತ, ದೇಶದಾದ್ಯಂತ ಕೃಷ್ಣ ಮಠ ಸ್ಥಾಪನೆ ಮಾಡಿ ಯಾತ್ರಿಕರಿಗೆ ಅನುಕೂಲವಾಗುವಂತೆ ಊಟ ವಸತಿ ಧಾರ್ಮಿಕ ಕಾರ್ಯಗಳಿಗೆ ಅನುಕೂಲವಾಗುವಂತೆ ಮಾಡಿದ್ದಾರೆ.

ಶ್ರೀಪಾದರ ದೊಡ್ಡ ಕೊಡುಗೆ ಅವರ ರಾಮ ಜನ್ಮ ಭೂಮಿ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ನಿರಂತರ ರಾಮನ ಸೇವಕರಾಗಿ, ರಾಮ ಲಲ್ಲಾ ಪ್ರತಿಷ್ಠೆ ಟೆಂಟ್ ಒಳಗೆ ಮಾಡುವಾಗ ಸ್ವತಃ ಇಟ್ಟಿಗೆ ಇಟ್ಟು ಕಟ್ಟಿ ತನು ಮನ ಧನದಿಂದ ರಾಮನ ಸೇವೆಗೇ ತತ್ಪರರಾದವರು. ಹರಿಪಾದ ಸೇರುವ ಮೊದಲು ಅಯೋಧ್ಯೆಯಲ್ಲಿಯೇ ರಾಮ ಮಂದಿರ ನಿರ್ಮಾಣವಾಗುತ್ತದೆ ಎಂಬ ಸಿಹಿ ಸುದ್ದಿಯನ್ನು ಕೇಳಿದ್ದರು. ಅನೇಕ ಶಿಷ್ಯರಿಗೆ ದೀಕ್ಷೆ ನೀಡಿದ್ದ ಶ್ರೀವಿಶ್ವೇಶ ತೀರ್ಥರ ಪ್ರಮುಖ ಶಿಷ್ಯರಲ್ಲಿ ರಾಜಕಾರಣಿ ಉಮಾ ಭಾರತಿ ಕೂಡ ಒಬ್ಬರು ಶ್ರೀಪಾದರನ್ನು ಕಂಡ, ಅವರು ಮೇರು ವ್ಯಕ್ತಿತ್ವದ ಗರಿಮೆಯನ್ನು ಸಾಮಾನ್ಯರಿಗಿಂತಲೂ ಸಾಮಾನ್ಯವಾದ ಸರಳತೆಯನ್ನು ಕೆಲವೊಮ್ಮೆ ಮಗುವಿನಂಥ ಮುಗ್ಧತೆಯನ್ನು ಕಂಡು ವಿಸ್ಮಯಗೊಂಡ ಜನತೆಯ ಬಯಕೆ ಬಹುಕಾಲ ಅವರೊಂದಿಗೆ ಇರಬೇಕು ಎಂಬ ಆಸೆ ಸಹಜ ಆದರೆ ಇಂದಿಗೆ ಅವರು ಹರಿಪಾದ ಸೇರಿ 6 ವರ್ಷಗಳೇ ಸಂದಿವೆ. 2019ರ ಡಿಸೆಂಬರ್ 29ರಂದು ಪುಷ್ಯ ಮಾಸ ಶುದ್ಧ ದ್ವಿತೀಯ ಭೂ ಲೋಕದಿಂದ ಅಸ್ತಮಿಸಿದರು. ಇಂದು ಶ್ರೀ ವಿಶ್ವೇಶರತೀರ್ಥರ 6 ನೇ ಆರಾಧನಾ. ಮಹೋತ್ಸವ. ಅವರನ್ನು ಸ್ಮರಿಸಿ ಕೃತಾರ್ಥ ರಾಗೋಣ ಇತ್ತೀಚಿಗೆ ಶ್ರೀಗಳ ಆಶಯದ ಕೂಸಾದ ಪೂರ್ಣಪ್ರಜ್ಞ ವಿದ್ಯಾಪೀಠ ಕ್ಕೆ 70ರ ಸಂಭ್ರಮ. ಶ್ರೀಗಳ ಆರಾಧನೆ ಮತ್ತು ವಿದ್ಯಾಪೀಠದ 70ನೇ ವಾರ್ಷಿಕೋತ್ಸವದ ಸಲುವಾಗಿ 16ದಿನಗಳ ಸುದೀರ್ಘ ಕಾರ್ಯಕ್ರಮಗಳು ಜರುಗುತ್ತಲಿವೆ. ಡಿ ಸೆಂಬರ್ 8ನೇ ತಾರೀಖಿನಿಂದ 24ರವರೆಗೆ ಕಾರ್ಯಕ್ರಮಗಳನ್ನು ಪ್ರಸ್ತುತ ಶ್ರೀ ವಿಶ್ವ ಪ್ರಸನ್ನ ತೀರ್ಥರು ನಡೆಸುತ್ತಲಿದ್ದಾರೆ. ವಿದ್ಯಾರ್ಥಿಗಳ ಸುಧಾ ಮಂಗಳ ದೊಂದಿಗೆ ಕಾರ್ಯಕ್ರಮವು ಇನ್ನಷ್ಟು ಸಂಭ್ರಮ ಆಚಾರಣೆ ನಡೆಯುತ್ತಲಿದೆ.



ಮಾಧುರಿ
ದೇಶಪಾಂಡೆ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,